ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡದಿನ ಪತ್ರಿಕೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L


KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 ಸಂಚಿಕೆ Issuse : 128 | ದಿನಾಂಕ : 16-06-2026 ಮಂಗಳವಾರ Date : 16-06-2026 Tuesday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಪಿ.ಲಂಕೇಶ್ ಪತ್ನಿ, ಲೇಖಕಿ ಇಂದಿರಾ ಲಂಕೇಶ್ ನಿಧನ; ಸಿಎಂ ಡಿಕೆಶಿ, ಮಾಜಿ ಸಿಎಂ ಸಿದ್ದರಾಮಯ್ಯ ಸಂತಾಪ

**ಬೆಂಗಳೂರು,ಜೂ.15-**ವಯೋಸಹಜ ಕಾಯಿಲೆಯಿಂದ, ಹಿರಿಯ ಪತ್ರಕರ್ತ ಹಾಗೂ ಖ್ಯಾತ



ಬರಹಗಾರ ದಿ. ಪಿ. ಲಂಕೇಶ್ ಪತ್ನಿ, ಲೇಖಕಿ ಶ್ರೀಮತಿ ಇಂದಿರಾ ಲಂಕೇಶ್(84) ಅವರು ಸೋಮವಾರ ನಿಧನರಾಗಿದ್ದಾರೆ.

ಇಂದು ಬೆಳಗ್ಗೆ ಬೆಂಗಳೂರಿನ ರಾಜಾಜಿ ನಗರದಲ್ಲಿರುವ ತಮ್ಮ ನಿವಾಸದಲ್ಲಿ ಇಂದಿರಾ ಅವರು ಕೊನೆ ಯುಸಿರೆಳೆದಿದ್ದು, ಅವರ ನಿಧನದಿಂದ ಕನ್ನಡ ಸಾಹಿತ್ಯ ಮತ್ತು ಪತ್ರಿಕೋದ್ಯಮದ ಮತ್ತೊಂದು ಮಹತ್ವದ ಕೊಂಡಿ ಕಳಚಿದಂತಾಗಿದೆ. ➘ 4

## ನೀರಿಲ್ಲದೇ ಒಣಗಿದೆ ಎಂಬ ಕಾರಣಕ್ಕೆ ಕೆರೆ ಆವರಣದಲ್ಲಿ ಗಣಿಗಾರಿಕೆಗೆ ಅವಕಾಶ ನೀಡಲಾಗದು: ಹೈಕೋರ್ಟ್

**ಬೆಂಗಳೂರು,ಜೂ.15-**ಕೆರೆ ಒಣಗಿ ಹೋಗಿದ್ದರೂ ಸಹ ಕೆರೆ ಭಾಗದಲ್ಲಿ ಕಲ್ಲು ಗಣಿಗಾರಿಕೆ ನಡೆಸಲು ಅನುಮತಿ ನೀಡಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ತುಮಕೂರು ಜಿಲ್ಲೆಯ ಸಿರಾ ತಾಲೂಕಿನ ಮದ್ದಕ್ಕನಹಳ್ಳಿ ಗ್ರಾಮದ ಸರ್ವೆ ನಂಬರ್ 26ರಲ್ಲಿರುವ ಸರ್ಕಾರಿ ಕೆರೆ ಅಂಗಳದ 3.20 ಎಕರೆ ಪ್ರದೇಶದಲ್ಲಿ ಬೂದು ಗ್ರಾನೈಟ್ ಗಣಿಗಾರಿಕೆ ಗುತ್ತಿಗೆಯನ್ನು (ಕ್ಯೂಎಲ್-41) ನವೀಕರಿಸಲು ನಿರಾಕರಿಸಿದ್ದ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಆದೇಶ ಪ್ರಶ್ನಿಸಿ, ಮೂಲ ಗುತ್ತಿಗೆದಾರರ ವಾರಸುದಾರರಾದ ಅನುಸೂಯಮ್ಮ ಮತ್ತವರ ಮಗ ಬಿ.ಜಿ.ಮಾರುತಿ ಪ್ರಸಾದ್ ಎಂಬವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ➘ 4

## ಗ್ಯಾರಂಟಿ 2 ವರ್ಷ ಮಾತ್ರವಲ್ಲ, ನಾವು ಮುಂದಿನ ಚುನಾವಣೆ ಗೆದ್ದು ಅಧಿಕಾರಕ್ಕೆ ಬಂದ ನಂತರವೂ ಮುಂದುವರಿಯಲಿದೆ: ಸಿದ್ದರಾಮಯ್ಯ

**ಬೆಂಗಳೂರು,ಜೂ.15-**ಪಂಚ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ಮುಂದಿನ ಎರಡು ವರ್ಷಗಳ ಕಾಲ ಮಾತ್ರವಲ್ಲ, ಮುಂದಿನ ಚುನಾವಣೆಯಲ್ಲಿ ಮತ್ತೆ ನಾವು ಅಧಿಕಾರಕ್ಕೆ ಬರಲಿದ್ದೇವೆ, ಅದರ ನಂತರವೂ ಅದು ಮುಂದುವರಿಯಲಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಎಕ್ಸ್ ಮೂಲಕ ಪೋಸ್ಟ್ ಮಾಡಿರುವ ಅವರು, ಯೋಜನೆಗಳ ಅನುಷ್ಠಾನದಲ್ಲಿ ಕಂಡು ಬರುವ ದೋಷಗಳನ್ನು ಸರಿಪಡಿಸುವ ಕೆಲಸ ಪ್ರಾರಂಭದಿಂದಲೇ ನಡೆಯುತ್ತಾ ಬಂದಿದೆ, ಈಗಲೂ ಮುಂದುವರೆದಿದೆ. ಈ ಯೋಜನೆಗಳ ಫಲಾನುಭವಿಗಳು ವಿರೋಧ ಪಕ್ಷಗಳ ಅಪಪ್ರಚಾರಕ್ಕೆ ಕಿವಿಗೊಟ್ಟು ಆತಂಕಕ್ಕೆ ಈಡಾಗಬೇಕಾಗಿಲ್ಲ ಎಂದಿದ್ದಾರೆ. ಬಿಜೆಪಿ ಮೂಲತಃ ಬಡವರ ➘ 4

### ಆರ್‌ಎಸ್‌ಎಸ್ ನೋಂದಣಿ ಸೇರಿ 8 ಅಂಶಗಳ ಬಗ್ಗೆ ವಿವರಗಳನ್ನು ಕೋರಿ

## ಸರಸಂಘಚಾಲಕ ಮೋಹನ್ ಭಾಗವತ್‌ಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪತ್ರ



■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು,ಜೂ.16-**ಆರ್ ಎಸ್ ಎಸ್ ನೋಂದಣಿಯಾ ಗದಿರುವುದನ್ನು ಆಕ್ಷೇ ಪಿಸಿ ಪೂರಕ ಎಂಟು ಅಂಶಗಳ ಬಗ್ಗೆ ಮಾಹಿತಿಯನ್ನು ಬಹಿರಂಗ ಪಡಿಸುವಂತೆ ಕೋರಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರ್‌ಎಸ್‌ಎಸ್ ಸರಸಂ ಘಚಾಲಕ ಮೋಹನ್ ಭಾಗವತ್‌ಗೆ ಪತ್ರ ಬರೆದಿದ್ದಾರೆ.

ತಮ್ಮ ಪತ್ರದಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ರಾಷ್ಟ್ರೀಯತೆ, ಶಿಸ್ತು ಮತ್ತು ಕರ್ತವ್ಯದ ಕುರಿತು ನಿರಂತರವಾಗಿ ಮಾತನಾಡುವ ಸಂಘಟನೆಯೊಂದು, ಪಾರದರ್ಶಕತೆ, ಕಾನೂನಿನ ಅನುಸರಣೆ ಮತ್ತು ಭಾರತದ ಸಂವಿಧಾನದ ಬಗೆಗಿನ ಗೌರವವನ್ನೂ ಅಷ್ಟೇ ದೃಢವಾಗಿ ಪ್ರದರ್ಶಿಸಬೇಕು.

ಸಾಮಾನ್ಯ ಭಾರತೀಯರು ನಿಯಮಗಳನ್ನು ಪಾಲಿಸಬೇಕೆಂದು ಒತ್ತಾಯಿಸು ತ್ತಲೇ, ತಾನು ಮಾತ್ರ ಅದೇ ನಿಯಮಗಳಿಂದ ವಿನಾಯಿತಿ ಪಡೆದುಕೊಳ್ಳುವ ನೈತಿಕ ಹಕ್ಕು ಆರ್‌ಎಸ್‌ಎಸ್‌ಗೆ ಇಲ್ಲ. ಕಾರ್ಮಿಕರು, ಸಣ್ಣ ಸಂಘ - ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಎನ್‌ಜಿಒಗಳು, ಟ್ರಸ್ಟ್‌ಗಳು, ಕಂಪನಿಗಳು ಮತ್ತು ನಾಗರಿಕರು ನೋಂದಣಿ, ಲೆಕ್ಕಪರಿಶೋಧನೆ ಮತ್ತು ತೆರಿಗೆ ಪಾವತಿಗೆ ಬದ್ಧರಾಗಿದ್ದಾರೆ.

ಆದ್ದರಿಂದ ಆರ್‌ಎಸ್‌ಎಸ್ ಕೂಡ ದೇಶದ ಕಾನೂನಿಗೆ ಮಾದರಿಯಾಗಿ ➘ 4

- ಆರ್‌ಎಸ್‌ಎಸ್ ಕಾನೂನುಬದ್ಧ ಸ್ಥಾನಮಾನ ಮತ್ತು ಸಾಂಸ್ಥಿಕ ರಚನೆ.
- ಅದರ ಪದಾಧಿಕಾರಿಗಳು ಮತ್ತು ಅಧಿಕೃತ ಪ್ರತಿನಿಧಿಗಳ ವಿವರಗಳು.
- ದೇಣಿಗೆಗಳು, ಕೊಡುಗೆಗಳು ಮತ್ತು ಆದಾಯದ ಮೂಲಗಳು.
- ವೆಚ್ಚ ಮತ್ತು ಆಸ್ತಿಗಳ ವಿವರಗಳು.
- ಅನ್ವಯವಾಗುವ ತೆರಿಗೆಗಳನ್ನು ಕಾನೂನಿನ ಪ್ರಕಾರ ಪಾವತಿಸಲಾಗುತ್ತಿದೆಯೇ ಎಂಬ ಮಾಹಿತಿ.
- ಔಪಚಾರಿಕ ನೋಂದಣಿ ಇಲ್ಲದೆಯೇ ಸಾಂಸ್ಥಿಕ ಚಟುವಟಿಕೆಗಳನ್ನು ನಡೆಸಲು ಇರುವ ಕಾನೂನು ಆಧಾರ.
- ಸಾರ್ವಜನಿಕ ಹೊಣೆಗಾರಿಕೆ ಇಲ್ಲದೇ ಇಷ್ಟೊಂದು ದೊಡ್ಡ ಮಟ್ಟದಲ್ಲಿ ಕಾರ್ಯನಿರ್ವಹಿಸಲು ಅದು ಪ್ರತಿಪಾದಿಸುವ ಸಾಂವಿಧಾನಿಕ ಮತ್ತು ಶಾಸನಬದ್ಧ ಚೌಕಟ್ಟು.
- ಸಾರ್ವಜನಿಕ ಕಾರ್ಯಕ್ರಮಗಳು, ಪಥಸಂ ಚಲನಗಳು, ಬೃಹತ್ ಸಭೆಗಳು ಮತ್ತು ಇತರ ಸಂಘಟಿತ ಚಟುವಟಿಕೆಗಳಿಗಾಗಿ ಇರುವ ಅನುಮತಿಗಳು, ಅಧಿಕಾರಗಳು ಮತ್ತು ಅನುಸರಣಾ ಕಾರ್ಯವಿಧಾನಗಳ ವಿವರಗಳು.

# ರಸ್ತೆ ತಡೆದು ಬೃಹತ್ ಪ್ರತಿಭಟನೆ

### ರೈತರ ಖಾತೆಗೆ ತಕ್ಷಣ ಜೋಳದ ಹಣ ಹಾಕಿ, ಇಲ್ಲದಿದ್ದರೆ ಸಿಂಧನೂರು ಬಂದ್..!

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.15-**ಸರ್ಕಾರ ಖರೀದಿ ಕೇಂದ್ರಗಳ ಮೂಲಕ ರೈತರಿಂದ ಖರೀದಿಸಿದ ಜೋಳದ ಹಣವನ್ನು ತಕ್ಷಣವೇ ಅವರ ಖಾತೆಗಳಿಗೆ ಜಮಾ ಮಾಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಸಮಿತಿ ವತಿಯಿಂದ ತಾಲೂಕಿನ ಪೋತ್ನಾಳ ಸಮೀಪದ ಬಳಗಾನೂರು ಕ್ರಾಸ್‌ನಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ರಸ್ತೆ ತಡೆದು ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅಮೀನ ಪಾಷ ದಿದ್ದಿಗಿ, ಜಿಲ್ಲೆಯ ರೈತರು ಸರ್ಕಾರದ ಖರೀದಿ ಕೇಂದ್ರಗಳಿಗೆ ಜೋಳ ಮಾರಾಟ ಮಾಡಿ ಮೂರ್ನಾಲ್ಕು ತಿಂಗಳು ಕಳೆದರೂ ಇನ್ನು ಹಣ ಪಾವತಿಯಾಗಿಲ್ಲ. ಇದರಿಂದ ರೈತರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಸದ್ಯ ಮುಂಗಾರು ಹಂಗಾಮು ಆರಂಭವಾಗಿದ್ದು, ಬಿತ್ತನೆ ಹಾಗೂ ಕೃಷಿ ಚಟುವಟಿಕೆಗಳಿಗೆ ರೈತರಿಗೆ ತುರ್ತಾಗಿ ಹಣದ ಅವಶ್ಯಕತೆಯಿದೆ. ಸರ್ಕಾರ ಕಣ್ಣು ಮುಚ್ಚಿ ಕುಳಿತುಕೊಳ್ಳದೆ ಕೂಡಲೇ ರೈತರ ಖಾತೆಗೆ ಹಣ ಜಮಾ ಮಾಡಬೇಕು. ಒಂದು ವೇಳೆ ವಾರದೊಳಗೆ ಹಣ ಪಾವತಿಯಾಗದಿದ್ದರೆ ಉಗ್ರ ಹೋರಾಟದೊಂದಿಗೆ 'ಸಿಂಧನೂರು ಬಂದ್' ಗೆ ಕರೆ ನೀಡಲಾಗುವುದು, ಎಂದು ಎಚ್ಚರಿಸಿದರು.

**ತಹಶೀಲ್ದಾರ್ ಭರವಸೆ:** ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸಿಂಧನೂರು ತಹಶೀಲ್ದಾರ್





(ದಂಡಾಧಿಕಾರಿ) ಅರುಣ್ ಕುಮಾರ್ ಅವರು ರೈತರಿಂದ ಮನವಿ ಪತ್ರ ಸ್ವೀಕರಿಸಿದರು. ಬಳಿಕ ಮಾತನಾಡಿದ ಅವರು, ಈ ಕುರಿತು ಅತಿ ಶೀಘ್ರದಲ್ಲಿಯೇ ಮೇಲಧಿಕಾರಿಗಳ ಗಮನಕ್ಕೆ ತಂದು, ರೈತರ ಖಾತೆಗಳಿಗೆ ಹಣ ಜಮಾವಾಗುವಂತೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು, ಎಂದು ಭರವಸೆ ನೀಡಿದರು.

**ಹೋರಾಟದಲ್ಲಿ ಭಾಗಿ:** ಈ ಸಂದರ್ಭದಲ್ಲಿ ರೈತ ಮುಖಂಡರಾದ ವೀರೇಶ, ಚನ್ನಬಸವ ರಾಗಲಪರ್ವಿ, ಚನ್ನನಗೌಡ ಬನ್ನಿಗನೂರು, ಆದಪ್ಪ ನಾಯಕ ದಳಪತಿ, ಎಸ್. ಕರಿಯಪ್ಪ, ತಿಮ್ಮಣ್ಣ ರಾಮತ್ನಾಳ, ದುರಗಪ್ಪ ಕಟ್ಟಿಕಾರ, ಓಮಣ್ಣ ಸೇರಿದಂತೆ ಬನ್ನಿಗನೂರು, ರಾಮತ್ನಾಳ, ಯಾಪಲಪರ್ವಿ, ವಲ್ಕಂದಿನ್ನಿ, ರಾಗಲಪರ್ವಿ ಹಾಗೂ ಧುಮತಿ ಸೇರಿದಂತೆ ಸುತ್ತಮುತ್ತಲಿನ ಅನೇಕ ಗ್ರಾಮಗಳ ನೂರಾರು ರೈತರು ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.

## ಅಡುಗೆ ಸಹಾಯಕಿ ವಿವಾದಕ್ಕೆ ಬಲಿಯಾದ ಶಿಕ್ಷಣ : 12 ದಿನಗಳಿಂದ ಶಾಲೆಗೆ ಮಕ್ಕಳಿಲ್ಲ, ಬಿಕೋ ಎನ್ನುತ್ತಿರುವ ಸರ್ಕಾರಿ ಶಾಲೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.15-** ವೈಯಕ್ತಿಕ ದ್ವೇಷ ಮತ್ತು ಕುಟುಂಬಗಳ ನಡುವಿನ ಭಿನ್ನಾಭಿಪ್ರಾಯದ ಪರಿಣಾಮವಾಗಿ ಮಕ್ಕಳ ಶಿಕ್ಷಣವೇ ಸಂಕಷ್ಟಕ್ಕೆ ಸಿಲುಕಿದೆ.

ಮಸ್ಕಿ ತಾಲೂಕಿನ ಎಂ. ರಾಮಲದಿನ್ನಿ ಗ್ರಾಮದಲ್ಲಿ ಶಾಲೆಗಳು ಆರಂಭವಾಗಿ 12 ದಿನಗಳು ಕಳೆದಿದ್ದರೂ, ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಪಾಲಕರು ತಮ್ಮ ಮಕ್ಕಳನ್ನು ಕಳುಹಿಸದೆ ಬಹಿಷ್ಕಾರ ಹಾಕಿರುವುದರಿಂದ ಶಾಲೆ ಸಂಪೂರ್ಣ ಬಿಕೋ ಎನ್ನುತ್ತಿದೆ. ಗ್ರಾಮದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಬಿಸಿಯೂಟ ಅಡುಗೆ ಸಹಾಯಕಿಯಾಗಿ ಕಾರ್ಯನಿರ್ವಹಿಸುತ್ತಿರುವ ಶಂಕ್ರಮ್ಮ ಹಾಗೂ ಅವರ ಕುಟುಂಬದ ಸದಸ್ಯರೊಂದಿಗೆ ಗ್ರಾಮಸ್ಥರಿಗೆ ಕಳೆದ ಕೆಲವು ದಿನಗಳಿಂದ ವೈಯಕ್ತಿಕ ಜಗಳ ಮತ್ತು ಭಿನ್ನಾಭಿಪ್ರಾಯ ಉಂಟಾಗಿದೆ. ಈ ವಿವಾದ ದಿನದಿಂದ ದಿನಕ್ಕೆ ತೀವ್ರಗೊಂಡಿದ್ದು, ಅದರ ಪರಿಣಾಮ ಶಾಲೆಯ ಮೇಲೆಯೂ ಬಿದ್ದಿದೆ.

ಅಡುಗೆ ಸಹಾಯಕಿ ಶಂಕ್ರಮ್ಮ ಅವರನ್ನು ಕರ್ತವ್ಯದಿಂದ ತೆರವುಗೊಳಿಸುವಂತೆ ಗ್ರಾಮಸ್ಥರು ಒತ್ತಾಯಿಸುತ್ತಿದ್ದಾರೆ. ಆದರೆ ಈ ಕುರಿತು ಯಾವುದೇ ಅಂತಿಮ ನಿರ್ಧಾರವಾಗದ ಹಿನ್ನೆಲೆಯಲ್ಲಿ ➘ 4

### ಹಿರಿಯ ನಾಗರೀಕರ ಶೋಷಣೆ ಜಾಗೃತಿ ದಿನಾಚರಣೆ

## ಹಿರಿಯ ನಾಗರೀಕರ ರಕ್ಷಣೆಗೆ ಇರುವ ಕಾಯ್ದೆ ಸದುಪಯೋಗವಾಗಲಿ-ನ್ಯಾ.ಸಿದ್ದರಾಮಪ್ಪ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.16-**ಹಿರಿಯ ನಾಗರಿಕರಿಗಾಗಿ ಕಾನೂನಿನಲ್ಲಿ ಸಾಕಷ್ಟು ಸೇವೆಗಳು ಮತ್ತು ಸೌಲಭ್ಯಗಳಿದ್ದು, ಹಿರಿಯ ನಾಗರಿಕರಿಗೆ ಶೋಷಣೆಗಳಾದಲ್ಲಿ ಆಯಾ ವಿಭಾಗದ ಸಹಾಯಕ ಆಯುಕ್ತರ ಮೂಲಕ ಪರಿಹರಿಸಿಕೊಳ್ಳಬಹುದಾಗಿದೆ. ಈ ಬಗ್ಗೆ ಹಿರಿಯ ನಾಗರಿಕರು ಜಾಗೃತರಾಗಬೇಕು ಮತ್ತು ಹಿರಿಯ ನಾಗರಿಕರ ಪಾಲನೆ ಪೋಷಣೆ ಕಾಯ್ದೆಯ ಕುರಿತು ತಿಳಿದುಕೊಳ್ಳಬೇಕು ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿದ್ರಾಮಪ್ಪ.ಕೆ ಹೇಳಿದರು. ➘ 4

## ಜೋಳ ಹಣಪಾವತಿಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜೂ.22ರಂದು ಶಕ್ತಿನಗರದ ಬಳಿ ಹೆದ್ದಾರಿ ತಡೆ-ಶರಣಪ್ಪ ಮರಳಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.16-**ರಸಗೊಬ್ಬರ ಖರೀದಿಗೆ ಜಾರಿಗೊಳಿಸಲಾಗಿರುವ ಎಫ್‌ಐಡಿ ಕಡ್ಡಾಯವನ್ನು ರದ್ದುಗೊಳಿಸುವದು, ವಿದ್ಯುತ್ ವಿತರಣಾ ಕೇಂದ್ರಗಳನ್ನು ಖಾಸಗೀಕರ ಕೈಬಿಟ್ಟು ಡಾ.ಸ್ವಾಮಿನಾಥನ್ ಆಯೋಗದ ವರದಿ ಜಾರಿ, ಜೋಳ ಖರೀಧಿಸಿದ ಹಣ ಪಾವತಿಸುವಂತೆ ಒತ್ತಾಯಿಸಿ ಜೂ.22 ರಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದಿಂದ ಶಕ್ತಿನಗರದ ಮೇನ್ ಗೇಟ್ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸುವದಾಗಿ ಸಂಘಟನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಶರಣಪ್ಪ ಮರಳಿ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತ ವಿರೋಧಿ ಅನುಸರಿಸುವಲ್ಲಿ ಒಂದೇ ನಾಣ್ಯದ ಎರಡು ಮುಖಗಳಾಗಿ ನಡೆದುಕೊಳ್ಳುತ್ತಿವೆ.ರೈತರ ಆದಾಯ ದ್ವಿಗುಣಗೊಳಿಸುವದಾಗಿ ಹೇಳಿದ್ದ ನರೇಂದ್ರ ಮೋದಿಯವರು ವರ್ಷಗಳು ಉರುಳಿದರೂ ಆದಾಯ ದ್ವಿಗುಣಗೊಳಿಸುವ ಬದಲು ಕೃಷಿ ವೆಚ್ಚ ನಿಯಂತ್ರಣವಿಲ್ಲದೇ ಹೆಚ್ಚಿಸಲು ಕಾರಣವಾಗಿದ್ದಾರೆ. ಎಫ್‌ಐಡಿ ಕಡ್ಡಾಯಗೊಳಿಸದ ಪರಿಣಾಮ ➘ 4

## ಜೂ.16ರಂದು ರಾಗ ರಂಗ ಸಾಂಸ್ಕೃತಿಕ ಕಲಾವೇದಿಕೆಯಿಂದ ಸಾಂಸ್ಕೃತಿಕ ಕಲಾಸಂಗಮ: ಪಂಪಾಪತಿ ಹೂಗಾರ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.16-**ರಾಗ ರಂಗ ಸಾಂಸ್ಕೃತಿಕ ವೇದಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರುಗಳ ಸಹಯೋಗದಲ್ಲಿ ಜೂ16 ರಂದು ಸರ್ಕಾರಿ ನೌಕರರ ಮನೋರಂಜನಾ ಕೇಂದ್ರದಲ್ಲಿ ಸಾಂಸ್ಕೃತಿಕ ಕಲಾ ಸಂಗಮ ಸಂಗೀತ ಮತ್ತು ನೃತ್ಯ ಕಾರ್ಯಕ್ರಮ ಸಂಜೆ 6 ಗಂಟೆಗೆ ಆಯೋಜಿಸಲಾಗಿದೆ ಎಂದು ರಾಗ ರಂಗ ಸಾಂಸ್ಕೃತಿಕಕಲಾ ವೇದಿಕೆ ಅಧ್ಯಕ್ಷ ಪಂಪಾಪತಿ ಹೂಗಾರ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಕಾರ್ಯಕ್ರಮವನ್ನು ಹೂಗಾರಸಮಾಜದ ರಾಜ್ಯಾಧ್ಯಕ್ಷ ಬಸವರಾಜ ಹೂಗಾರ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಹೂಗಾರ ಸಮಾಜ ಗೌರವಾಧ್ಯಕ್ಷ ಉಗ್ರ ನರಸಿಂಹಪ್ಪ ಹೂಗಾರವಹಿಸಲಿದ್ದಾರೆ. ಕಾರ್ಯಕ್ರಮದ ಜ್ಯೋತಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಮಠಪತಿ, ಜಿಲ್ಲಾ ಹೂಗಾರ ಸಮಾಜ ಅಧ್ಯಕ್ಷ ಈರಣ್ಣ ಹೂಗಾರ, ವಾಣಿಜ್ಯೋದ್ಯಮಿ ವೀರೇಂದ್ರ ಪಾಟೀಲ್ ಹರವಿ, ಫಾತಿಮಾ ಫೌಂಡೇಷನ್ ಅಧ್ಯಕ್ಷೆ ಫಾತಿಮಾ ಹುಸೇನ, ನಿವೃತ್ತ ಪಶು ವೈಧ್ಯಾಧಿಕಾರಿ ಮಹಾದೇವಪ್ಪಪ, ಹಿರಿಯ ರಂಗಭೂಮಿ ಕಲಾವಿದೆ ಶಾಂತಾ ಕುಲ್ಕರ್ಣಿ ಬೆಳಗಿಸಲಿದ್ದಾರೆ. ಅತಿಥಿಗಳಾಗಿ ಮೋಹನ್ ವಕೀಲ, ಸೈಯದ್ ➘ 4

### ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯಲ್ಲಿ ಪ್ರಭಾರಿ ಅಧಿಕಾರಿಗಳ ನೇಮಕಾತಿ

## ಭ್ರಷ್ಟಾಚಾರಕ್ಕೆ ಅವಕಾಶ ನೇಮಕ ರದ್ದುಪಡಿಸಲು ಒತ್ತಾಯ

**ರಾಯಚೂರು, ಜೂ. 15-**

ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯಲ್ಲಿ ಪ್ರಭಾರಿ ಅಧಿಕಾರಿಗಳ ನೇಮಕಾತಿ, ಒಂದೇ ವ್ಯಕ್ತಿಗೆ ಎರಡು ಹುದ್ದೆಗಳ ಹೆಚ್ಚುವರಿ ಜವಾಬ್ದಾರಿ ನೀಡಿದ್ದರಿಂದ ಆಡಳಿತಾತ್ಮಕ ಅವ್ಯವಸ್ಥೆಯಿಂದ ಭ್ರಷ್ಟಾಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ಸಂಬಂಧಿಸಿದ ಅಧಿಕಾರಿಗಳನ್ನು ತೆಗೆದು ಅರ್ಹ ಅಧಿಕಾರಿಗಳನ್ನು ನೇಮಿಸಬೇಕು ಎಂದು ದಲಿತ ಸಂಘರ್ಷ ಸಮಿತಿಯ ಸಂಘಟನಾ ಸಂಚಾಲಕ ಶರಣಪ್ಪ ದಿನ್ನಿ ಅವರು ಜಿ.ಪಂ. ಸ್ಥಾನಿಕ ಅಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಸಮಾಜ ಕಲ್ಯಾಣ ಇಲಾಖೆಯಲ್ಲಿನ ಅವ್ಯವಹಾರಗಳಿಂದ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಕೆಲಸಗಳು ವಿಳಂಬವಾಗುತ್ತಿದ್ದು, ಜನರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ದೂರಿದರು. ತಾಲೂಕಿನ ಸಹಾಯಕ ನಿರ್ದೇಶಕರ ಜವಾಬ್ದಾರಿಯನ್ನು ಕಚೇರಿ ವ್ಯವಸ್ಥಾಪಕರಿಗೆ ನೀಡಲಾಗಿದ್ದು, ಅವರು ಸಾರ್ವಜನಿಕರ ಸಮಸ್ಯೆಗಳಿಗೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂಬ ಆರೋಪಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ವಸತಿ ನಿಲಯದ ಮೇಲ್ವಿಚಾರಕರಾಗಿದ್ದ ದೇವರಾಜ್ ವಿರುದ್ಧ ಹಿಂದೆಯೇ ಅವ್ಯವಹಾರ ಆರೋಪಗಳ ಹಿನ್ನೆಲೆಯಲ್ಲಿ ಲೋಕಾಯುಕ್ತ ತನಿಖೆ ನಡೆದಿದ್ದು, ಅಮಾನತುಗೊಂಡಿದ್ದರೂ ನಂತರ ನಿಯಮ ಉಲ್ಲಂಘಿಸಿ ಮರು ನಿಯೋಜನೆ ನೀಡಲಾಗಿದೆ. ಅಲ್ಲದೆ, ಕೆಲ ಅಧಿಕಾರಿಗಳು ಸುಳ್ಳು ಬಿಲ್ಲುಗಳ ಮೂಲಕ ಹಣ ದುರುಪಯೋಗಪಡಿಸಿ ಕೊಳ್ಳುತ್ತಿದ್ದಾರೆ ಎಂದು ಆಪಾದಿಸಿದರು. ಸಮಾಜ ಕಲ್ಯಾಣ ಇಲಾಖೆಯಲ್ಲಿನ ಎಲ್ಲಾ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಿ, ಇಲಾಖೆಯಲ್ಲಿ ಪಾರದರ್ಶಕ ಆಡಳಿತವನ್ನು ನಡಿಸಲು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

## ಜೂ.18 ರಂದು ಕನ್ನಡ ಜಾಗೃತಿ ಜಾಥಾ: ಬೈಕ್ ರ‍್ಯಾಲಿ ಕೆ.ಎಂ.ಕುಮಾರ, ನಟ ಟೆನ್ನಿಸ್ ಕೃಷ್ಣ ಭಾಗಿ-ಬಸವರಾಜ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.16-**ಕನ್ನಡ ಸೇನೆ ಜಿಲ್ಲಾ ಘಟಕದಿಂದಕನ್ನಡ ಜಾಗೃತಿ ಜಾಥಾವನ್ನು ಜೂ.18 ರಂದು ನಡೆಸಲಾಗುತ್ತಿದ್ದು ಸಂಘಟನೆ ರಾಜ್ಯಾಧ್ಯಕ್ಷ ಕೆ.ಆರ್.ಕುಮಾರ ಹಾಗೂ ಚಲನಚಿತ್ರ ನಟ ಟೆನ್ನಿಸ್ ಕೃಷ್ಣ ಭಾಗವಹಿಸಲಿದ್ದಾರೆ ಎಂದು ಸಂಘಟನೆ ಜಿಲ್ಲಾಧ್ಯಕ್ಷ ಎಂ.ಬಸವರಾಜ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, 18 ರಂದು ಬೆಳಿಗ್ಗೆ 10.30ಕ್ಕೆ ಬೈಕ್ ರ‍್ಯಾಲಿ ಮೂಲಕ ಕನ್ನಡ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಗುತ್ತದೆ. ಕನ್ನಡ ಶಾಲೆಗಳನ್ನು ಉಳಿಸುವದು,ಗಡಿಭಾಗದ ಶಾಲೆಗಳ ಸಮಸ್ಯೆಗಳನ್ನು ನಿವಾರಿಸುವದು ಕನ್ನಡ ನಾಮಫಲಕ ಕಡ್ಡಾಯಗೊಳಿಸುವಂತೆ ಆಗ್ರಹಿಸಿ ನಡೆಯುವ ಜಥಾ ನಗರದ ವಿವಿಧ ರಸ್ತೆಗಳ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಮನವಿ ಸಲ್ಲಿಸಲಾಗುತ್ತದೆ. ಕನ್ನಡ ಅಭಿಮಾನಿಗಳು,ಆಸಕ್ತರು, ವಿವಿಧ ಸಂಘಟನೆಗಳು ಬೆಂಬಲಿಸಿ ಭಾಗವಹಿಸುವಂತೆ ಮನವಿ ಮಾಡಿದರು. 2 -3 ನೂರು ಬೈಕ್‌ಗಳೊಂದಿಗೆ ಜಾಥಾ ನಡೆಯಲಿದ್ದು ಜಿಲ್ಲೆಯ ಎಲ್ಲಾ ತಾಲೂಕಗಳ ಪದಾಧಿಕಾರಿಗಳು, ಸದಸ್ಯರುಗಳು ಭಾಗವಹಿಸಲಿದ್ದಾರೆ ಎಂದರು.

ಈ ಸಂದರ್ಬದಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಹನುಮೇಶ ನಾಯುಕ, ಉಪಾಧ್ಯಕ್ಷ ನಾಗಪ್ಪ, ಗೋವಿಂದ ಚವ್ಹಾಣ, ಅಮರೇಶ ನಾಯಕ, ಶರಣೋಜಿ ಪವಾರ, ಬಿ.ಮಂಜುನಾಥ, ತಾಯಪ್ಪ ಕಾರ್ಪೆಂಟರ್, ನಾಗಲಿಂಗಪ್ಪಗೌಡ, ವಾಸುದೇವ ಇದ್ದರು.

# ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬಲು, ಪ್ರೀತಿಯಿಂದ ಕೊಟ್ಟಿರುವ ಗ್ಯಾರಂಟಿಗಳನ್ನು ನಿಲ್ಲಿಸುವುದಿಲ್ಲ-ಸಿಎಂ

**ಬೆಂಗಳೂರು,ಜೂ.15–**ಆದಾಯ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಮಹಿಳೆ ಯರಿಗೆ ಆರ್ಥಿಕ ಶಕ್ತಿ ತುಂಬಲು, ನಮ್ಮ ಸರ್ಕಾರ ಪ್ರೀತಿಯಿಂದ ಕೊಟ್ಟಿರುವ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ ಎಂದು ಸಿಎಂ ಡಿ. ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.



ವೈದೇಹಿ ಆಸ್ಪತ್ರೆ ಬಳಿ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಾಗುತ್ತಿದೆ ಎಂದು ವಿರೋಧ ಪಕ್ಷಗಳ ಟೀಕೆ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಅವರುಗಳಿರುವುದೇ ಟೀಕೆ ಮಾಡಲು. ನಾವು ಏನೇ ಒಳ್ಳೆಯದು ಮಾಡಲು ಮುಂದಾದರೂ ಅದಕ್ಕೆ ಅಡ್ಡಗಾಲು ಹಾಕುವುದಕ್ಕೆ ವಿರೋಧ ಪಕ್ಷಗಳಿರುವುದು. ಅವರ ಕೈಯಲ್ಲಿ ಆಗದಿದ್ದ ಕೆಲಸ ನಾವು ಮಾಡುತ್ತಿದ್ದೇವೆ. ಗ್ಯಾರಂಟಿ ಯೋಜನೆ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನೋಡಿಕೊಳ್ಳಲು ಸರ್ಕಾರ ಮುಂದಾಗಿದೆ. ಆರಂಭದಲ್ಲಿ ಕೆಲವು ಫಲಾನುಭವಿಗಳು ಬೇರೆಯವರ ದೂರವಾಣಿ ಸಂಖ್ಯೆ ಹಾಗೂ ಇತರ ಮಾಹಿತಿ ನೀಡಿದ್ದಾರೆ. ಬೇರೆಯವರ ಖಾತೆಗೆ ಹಣ ಹೋಗುತ್ತಿರುವ ಬಗ್ಗೆ ನಮಗೆ ಮಾಹಿತಿ ಇದೆ. ಫಲಾನುಭವಿಗಳ ಖಾತೆಗೆ ಹಣ ಹೋಗುವಂತೆ ಮಾಡುವುದು ಸರ್ಕಾರದ ಉದ್ದೇಶ ಎಂದು ತಿಳಿಸಿದರು.

ಸರ್ಕಾರವು ಕರ್ನಾಟಕದವರಿಗೆ ಈ ಯೋಜನೆ ನೀಡುತ್ತಿದ್ದು, ಅನ್ಯ ರಾಜ್ಯದವರಿಗೆ ಈ ಯೋಜನೆ ನೀಡುವುದಿಲ್ಲ. ಉಚಿತ ವಿದ್ಯುತ್ ನಮ್ಮ ರಾಜ್ಯದ ಮತದಾರರಿಗೆ ನೀಡಬೇಕೇ ಹೊರತು, ಬೇರೆ ರಾಜ್ಯದವರಿಗೆ ಯಾಕೆ ಕೊಡಬೇಕು?. ಹೀಗಾಗಿ ಫಲಾನುಭವಿಗಳಿಗೆ ಗುರುತಿನ ಚೀಟಿ ನೀಡಲು ಸಚಿವ ಸಂಪುಟದಲ್ಲಿ ತೀರ್ಮಾನಿಸಿದ್ದೇವೆ. ಆ ಪ್ರಕ್ರಿಯೆ ನಡೆಯುತ್ತಿದೆ. ಯೋಜನೆ ನಿಲ್ಲಿಸುವುದು ನಮ್ಮ ಉದ್ದೇಶವಲ್ಲ. ನಮ್ಮ ಗ್ಯಾರಂಟಿ ದೇಶಕ್ಕೆ ಮಾದರಿ. ಮಹಾರಾಷ್ಟ್ರ, ಮಧ್ಯಪ್ರದೇಶ, ಆಂಧ್ರಪ್ರದೇಶ ಸೇರಿದಂತೆ ಬೇರೆ ರಾಜ್ಯಗಳು ನಮ್ಮ ಮಾದರಿ ಅನುಸರಿಸಿವೆ ಎಂದರು.

ಯೋಜನೆ ಹಣ ನಕಲಿ ಫೈನಾನ್ಸ್ ಯೋಜನೆಗಳಿಗೆ ಬಳಕೆಯಾಗದಂತೆ ನೋ ಡಿಕೊಳ್ಳುತ್ತೇವೆ : ಕೆಲವರು ಗೃಹಲಕ್ಷ್ಮಿ ಹಣವನ್ನು ನಕಲಿ ಫೈನಾನ್ಸ್ ವ್ಯವಹಾರಕ್ಕೆ ಬಳಸುತ್ತಿದ್ದಾರೆ. ಬೆಳಗಾವಿಯ ಪ್ರಕರಣ ವನ್ನು ನೋಡಿದ್ದೇವಲ್ಲ. ಇದಕ್ಕಾಗಿ ಗ್ರಾಮ ಪಂಚಾಯ್ತಿಯಿಂದ ತಾಲೂಕು ಪಂಚಾ ಯ್ತಿವರೆಗೆ ಎಲ್ಲೆಲ್ಲಿ ಇಂತಹ ಸ್ಕೀಂಗಳಿವೆಯೋ ಅವುಗಳಿಗೆ ಕಡಿವಾಣ ಹಾಕಲು ನಾವು ನಿರ್ದೇಶನ ನೀಡಿದ್ದೇವೆ. ನಮ್ಮ ಹೃದಯದಿಂದ ಕೊಟ್ಟ ಯೋಜನೆಗಳಿವು. ಹೆಣ್ಣು ಕುಟುಂಬದ ಕಣ್ಣು ಎಂದು ಅವರಿಗೆ ಆರ್ಥಿಕ ಶಕ್ತಿ ಸಿಗಬೇಕು,

ಅವರ ಮನೆಗಳು ಬೆಳಗಬೇಕು ಎಂದು ನೀಡಲಾಗಿದೆ. ವಿರೋಧ ಪಕ್ಷಗಳು ಹೀಗೆ ಮಾತನಾಡುತ್ತಿರಲಿ ಎಂದು ಕಿಡಿಕಾರಿದರು. ಬಿಜೆಪಿ ಸರ್ಕಾರ 1 ಸಾವಿರ ಎಕರೆ ಸ್ವಾಧೀನ ಮಾಡಿಕೊಂಡಾಗ ಯಾಕೆ ಸುಮ್ಮನಿದ್ದರು?: ಬಿಡದಿ ಪಾದಯಾತ್ರೆ ಬಗ್ಗೆ ಕೇಳಿದಾಗ, ನಾನು ಯಾರ್ಯಾರೋ ಮಾತಿಗೆ ಉತ್ತರ ನೀಡಲು ಆಗುವುದಿಲ್ಲ. ಮಹಾರಾಷ್ಟ್ರದಲ್ಲಿ 90 ಸಾವಿರ ಎಕರೆ, ತೆಲಂಗಾಣದಲ್ಲಿ 40 ಸಾವಿರ ಎಕರೆಯಲ್ಲಿ ಟೌನ್ ಶಿಪ್ ಮಾಡುತ್ತಿದ್ದಾರೆ. ಬಿಡದಿಯದು ನನ್ನ ಯೋಜನೆಯಲ್ಲ. ಕುಮಾರಸ್ವಾಮಿ ಅವರು ಈ ಯೋಜನೆಗೆ ಅಧಿಸೂಚನೆ ಹೊರಡಿಸಿದ್ದರು. ಹಿಂದಿನ ಬಿಜೆಪಿ ಸರ್ಕಾರ ಈ ಜಾಗದಲ್ಲಿ 1 ಸಾವಿರ ಎಕರೆಯನ್ನು ಕೆಐಎಡಿಬಿಗೆ ಸ್ವಾಧೀನಪಡಿಸಿಕೊಟ್ಟಾಗ ಇವರು ಯಾಕೆ ಸುಮ್ಮನಿದ್ದರು? ಹಾರೋಹಳ್ಳಿ ಕೈಗಾರಿಕಾ ಪ್ರದೇಶ ಮಾಡಿದ್ದು ಯಾರು?. ಆಗ ರೈತರನ್ನು ಕಳುಹಿಸಲಿಲ್ಲವೇ?. ಇಲ್ಲಿ ರೈತರು ಜಮೀನು ನೀಡಲು ಮುಂದಾಗಿದ್ದಾರೆ. ಆದರೆ, ಇವರಿಗೆ ರಾಜಕಾರಣ ಮಾಡಬೇಕು, ಮಾಡುತ್ತಿದ್ದಾರೆ ಎಂದು ಹರಿಹಾಯ್ದರು.

ಶಾಸಕ ಇಕ್ಬಾಲ್ ಆರೋಗ್ಯವಾಗಿದ್ದಾರೆ, ಗಾಬರಿ ಬೇಡ : ಶಾಸಕ ಇಕ್ಬಾಲ್ ಹುಸೇನ್ ಅವರಿಗೆ ನಿನ್ನೆ ಎದೆ ನೋವು ಕಾಣಿಸಿಕೊಂಡಿದ್ದು, ಆಸ್ಪತ್ರೆ ಸೇರಿದ್ದಾರೆ. ವೈದ್ಯರು ಪರಿಶೀಲನೆ ಮಾಡಿದ್ದಾರೆ. ಅವರು ಆರೋಗ್ಯವಾಗಿದ್ದು, ಯಾರೂ ಗಾಬರಿಯಾಗುವ ಅವಶ್ಯಕತೆ ಇಲ್ಲ. ಸಂಪೂರ್ಣ ಪರೀಕ್ಷೆಗೆ ನಾವು ವೈದ್ಯರೊಂದಿಗೆ ಚರ್ಚೆ ಮಾಡಿದ್ದೇವೆ. ಎಡಗೈ ಸೆಳೆತ ಬಂದಿದ್ದು, ಮುನ್ನೆಚ್ಚರಿಕೆಯಾಗಿ ಆಸ್ಪತ್ರೆ ಸೇರಿದ್ದಾರೆ ಎಂದು ಮಾಹಿತಿ ನೀಡಿದರು.

# ಸಿಲಿಂಡರ್ ಗೋದಾಮಿನಲ್ಲಿ ಅಗ್ನಿ ಅವಘಡ ಮೂವರಿಗೆ ಗಾಯ, ಆಸ್ಪತ್ರೆಗೆ ದಾಖಲು

**ದಾವಣಗೆರೆ,ಜೂ.15–**ತಾಲೂಕಿನ ಹೆಚ್. ಕಲ್ಪನಹಳ್ಳಿ ಗ್ರಾಮದ ಅಡಕೆ ತೋಟದಲ್ಲಿನ ಸಿಲಿಂಡರ್ ಗೋದಾಮಿನಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, ಘಟನೆಯಲ್ಲಿ ಎಂಟಕ್ಕೂ ಹೆಚ್ಚು ಸಿಲಿಂಡರ್ ಸ್ಫೋಟಗೊಂಡಿವೆ.

ದೊಗ್ಗಳ್ಳಿ ಶಿವಕುಮಾರ ಎಂಬುವವರಿಗೆ ಸೇರಿದ ಗೋದಾಮಿನಲ್ಲಿ ಅವಘಡ ಜರುಗಿದೆ. ಅನಿಲ್ ಎಂಬುವವರು ಸಿಲಿಂಡರ್ ಸಂಗ್ರಹಿ ಸಿದ್ದರು.

ಘಟನೆಯಲ್ಲಿ ಅನಿಲ್‌ಗೆ ಗಂಭೀರ ಗಾಯವಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಏಜೆನ್ಸೀಸ್‌ನ ಇತರ ಇಬ್ಬರಿಗೆ ಗಂಭೀರ ಗಾಯವಾಗಿದ್ದು, ಅವರನ್ನೂ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಅವಘಡದ ಮಾಹಿತಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಅಗ್ನಿ ಶಾಮಕ ದಳದ ಸಿಬ್ಬಂದಿ ಆಗಮಿಸಿ, ಬೆಂಕಿ ನಂದಿಸುತ್ತಿದ್ದಾರೆ.

ಬೆಂಕಿಗಾಹುತಿಯಾದ ಖಾಸಗಿ ಸ್ಲೀಪರ್ ಬಸ್ (ಹಾಸನ) : ಮಂಗಳೂರಿನಿಂದ ಬೆಂಗಳೂರಿಗೆ ತೆರಳುತ್ತಿದ್ದ ಖಾಸಗಿ ಸ್ಲೀಪರ್ ಬಸ್‌ನ ಟೈರ್ ಸ್ಫೋಟಗೊಂಡು ಏಕಾಏಕಿ ಬೆಂಕಿ ಹೊತ್ತಿಕೊಂಡ ಘಟನೆ ಹಾಸನ ಜಿಲ್ಲೆಯ ಶಾಂತಿಗ್ರಾಮ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಇತ್ತೀಚಿಗೆ ತಡ ರಾತ್ರಿ ಸಂಭವಿಸಿತ್ತು.ಪ್ರಯಾಣಿಕರೊಬ್ಬರ ಸಮಯಪ್ರಜ್ಞೆಯಿಂದ ಬಸ್‌ನಲ್ಲಿದ್ದ 36 ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದರು. ಆದರೆ, ಲಗೇಜ್ ಹಾಗೂ ಮೊಬೈಲ್ ವಸ್ತುಗಳು ಬೆಂಕಿಗಾಹುತಿಯಾಗಿದ್ದವು. ಶಾಂತಿಗ್ರಾಮ ಟೋಲ್ ಗೇಟ್ ಬಳಿ ಘಟನೆ ಸಂಭವಿಸಿದ್ದು, ಕೂದಲೆಳೆ ಅಂತರದಲ್ಲಿ ಎಲ್ಲರೂ ಪಾರಾಗಿದ್ದರು.

ಪ್ರಯಾಣಿಕನೊಬ್ಬನ ಸಮಯ ಪ್ರಜ್ಞೆಯಿಂದ



ತಪ್ಪಿತು ಭಾರಿ ದುರಂತ : ಮೊದಲು ಟೈರ್ಗೆ ಬೆಂಕಿ ಹೊತ್ತಿಕೊಂಡಿದೆ. ಇದರಿಂದ ಸಣ್ಣದೊಂದು ಶಬ್ದ ಕೇಳಿ ಬಂದಾಗ, ಬಸ್‌ನಲ್ಲಿದ್ದ ಪ್ರಯಾಣಿಕನೋರ್ವ, ಕಿಟಕಿಯ ಪರದೆಯನ್ನು ಸರಿಸಿ ನೋಡಿದಾಗ ಚಕ್ರಕ್ಕೆ ಬೆಂಕಿ ಹೊತ್ತಿಕೊಂಡಿರುವುದು ಗಮನಕ್ಕೆ ಬಂದಿದೆ. ತಕ್ಷಣ ಬಸ್ ಚಾಲಕ ಹಾಗೂ ಎಲ್ಲಾ ಪ್ರಯಾಣಿಕರಿಗೆ ವಿಷಯ ತಿಳಿಸಿದ್ದಾರೆ. ಇದರಿಂದ ಚಾಲಕ ಬಸ್ ರಸ್ತೆ ಬದಿಗೆ ಪಾರ್ಕ್ ಮಾಡಿದ್ದಾರೆ. ಈ ವೇಳೆ ನಿದ್ದೆಯ ಮಂಪರಿನಲ್ಲಿದ್ದ ಪ್ರಯಾಣಿಕರು ಎಚ್ಚರಗೊಂಡು, ಅವಸರವಾಗಿ ಕೆಳಗಿಳಿಯುವ ಮೂಲಕ ಪ್ರಾಣ ಉಳಿಸಿಕೊಂಡಿದ್ದರು. ಆದರೆ, ಅವರ ಲಗೇಜ್ ಮತ್ತು ಕೆಲವು ಬೆಲೆಬಾಳುವ ವಸ್ತುಗಳು ಮಾತ್ರ ಬೆಂಕಿಗೆ ಆಹುತಿಯಾಗಿವೆ. ಚಾಲಕ ಮತ್ತು ಪ್ರಯಾಣಿಕರೊಬ್ಬರ ಸಮಯ ಪ್ರಜ್ಞೆಯಿಂದ ಆಗಬಹುದಾಗಿದ್ದ ದೊಡ್ಡ ಅನಾಹುತವೊಂದು ತಪ್ಪಿದಂತಾಗಿದೆ.

ಬೆಂಗಳೂರಿನ ಹೋಟೆಲ್‌ನಲ್ಲಿ ಅಗ್ನಿ ಅವಘಡ : ಹೋಟೆಲ್‌ನಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಓರ್ವ ಸಾವನ್ನಪ್ಪಿದ ಘಟನೆ ಇತ್ತೀಚಿಗೆ ಬೆಂಗಳೂರಿನಲ್ಲಿ ನಡೆದಿತ್ತು. ನಾಗರಬಾವಿಯ ಹೋಟೆಲ್‌ವೊಂದರಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಓರ್ವ ವ್ಯಕ್ತಿ ಮೃತಪಟ್ಟಿದ್ದು, ನಾಲ್ವರು ತೀವ್ರವಾಗಿ ಗಾಯಗೊಂಡಿದ್ದರು. ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ದೌಡಾಯಿಸಿ ಬೆಂಕಿ ನಂದಿಸುವ ಕಾರ್ಯ ಮಾಡಿದ್ದರು. ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರಬಹುದು ಎಂದು ಶಂಕೆ ವ್ಯಕ್ತವಾಗಿದ್ದು, ತನಿಖೆ ಮುಂದುವರೆದಿತ್ತು.

# ಮೈಸೂರು: ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಬೆಂಕಿ ಅವಘಡ: ಇಬ್ಬರು ಸಾವು, 7 ಮಂದಿಗೆ ಗಂಭೀರ ಗಾಯ




**ಮೈಸೂರು,ಜೂ.15–**ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡು, ಅಡುಗೆ ಕೋಣೆಯಲ್ಲಿದ್ದ ಇಬ್ಬರು ಸಾವನ್ನಪ್ಪಿ 7 ಜನರಿಗೆ ಗಂಭೀರ ಗಾಯವಾದ ಘಟನೆ ನಗರದ ಆರ್.ಟಿ. ನಗರದ ದಟ್ಟಗಳ್ಳಿಯಲ್ಲಿ ಸೋಮವಾರ ಸಂಭವಿಸಿದೆ.

ದಟ್ಟಗಳ್ಳಿಯ ರಿಂಗ್ ರಸ್ತೆ ಬಳಿಯಿರುವ ಫಾಕ್ಸ್ ಡೆನ್ ಲಿಕ್ಕರ್ ಗ್ಯಾರೇಜ್ ಬಾರ್ ಅಂಡ್ ರೆಸ್ಟೋರೆಂಟ್ ಇದಾಗಿದೆ. ಘಟನೆಯಲ್ಲಿ ಸಾಹಿಲ್ ಮತ್ತು ಪ್ರಕಾಶ್ ಎಂಬುವರು ಸಾವನ್ನಪ್ಪಿದ್ದಾರೆ. ಅಲ್ಲದೆ, 7 ಜನರು ಗಾಯಗೊಂಡಿದ್ದು, ಅಗ್ನಿಶಾಮಕ ದಳದ ಸಿಬ್ಬಂದಿ ಅವರನ್ನು ರಕ್ಷಣೆ ಮಾಡಿದ್ದಾರೆ. ಅವಘಡದ ಸಂದರ್ಭದಲ್ಲಿ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ 25ಕ್ಕೂ ಹೆಚ್ಚು ಜನರಿದ್ದರು ಎಂದು ತಿಳಿದುಬಂದಿದೆ.

ಗಾಯಾಳುಗಳನ್ನು ಚಿಕಿತ್ಸೆಗಾಗಿ ಸುಯೋಗ ಹಾಗೂ ಅಪೋಲೋ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಬೆಂಕಿ ಅವಘಡ ಬಳಿಕ ಕಟ್ಟಡದಲ್ಲಿ ದಟ್ಟ ಹೊಗೆ ಆವರಿಸಿದ್ದರಿಂದ ಆತಂಕಗೊಂಡ ಕೆಲವರು ಮೇಲಂತಸ್ತಿನಿಂದ ಜಿಗಿದು ಪಾರಾಗಲು ಯತ್ನಿಸಿದರು. ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

# ಗೊಬ್ಬರಕ್ಕಾಗಿ ರೈತರ ಪರದಾಟ: ಪಿಐಡಿ ವ್ಯವಸ್ಥೆ ತಕ್ಷಣ ಹಿಂಪಡೆಯಿರಿ-ದೇವರಾಜ ನಾಯಕ್




■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.15–**ಎಫ್‌ಐಡಿ ವ್ಯವಸ್ಥೆಯಿಂದ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ರಸಗೊಬ್ಬರ ವಿತರಣೆಯಲ್ಲಿ ಅನಗತ್ಯ ನಿರ್ಬಂಧಗಳು ಉಂಟಾಗಿವೆ ಎಂದು ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ದೇವರಾಜ ನಾಯಕ್ ಆರೋಪಿಸಿದರು.

ಯಾದಗಿರಿ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ಎಕರೆಗೆ ಒಂದು ಚೀಲ ಯೂರಿಯಾ ಹಾಗೂ ಒಂದು ಚೀಲ ಡಿಎಪಿ ಮಾತ್ರ ನೀಡುವ ನಿಯಮ ರೈತರಿಗೆ ತೊಂದರೆ ಉಂಟುಮಾಡುತ್ತಿದೆ ಎಂದರು.

ಎಫ್‌ಐಡಿ ಸಂಖ್ಯೆ ಪಡೆಯಲು ರೈತರು ಹಲವು ದಿನ ಅಲೆದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು. ರೈತರಿಗೆ ಅಗತ್ಯವಿರುವಷ್ಟು ರಸಗೊಬ್ಬರವನ್ನು ಸಮಯಕ್ಕೆ ಸರಿಯಾಗಿ ಒದಗಿಸುವಂತೆ ಸರ್ಕಾರ ಹಾಗೂ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಹೊಲಗಳಿಗೆ ರೈತರಿಗೆ ಅನುಕೂಲವಾಗುವ ಸಮಯದಲ್ಲಿ ನಿರಂತರ ಏಳು ತಾಸು ವಿದ್ಯುತ್ ಪೂರೈಕೆ ಮಾಡಬೇಕು. ನಡುರಾತ್ರಿ ಹಾಗೂ ಮುಂಜಾನೆ

ವೇಳೆಯಲ್ಲಿ ವಿದ್ಯುತ್ ನೀಡುವುದರಿಂದ ರೈತರು ವಿಷ ಜಂತುಗಳ ಭೀತಿಯ ನಡುವೆ ಹೊಲಗಳಿಗೆ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿ ದೆ. ಕೆಇಬಿ ಅಧಿಕಾರಿಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಕಾಸಿಂ ಪಟೇಲ್ ಗಡ್ಡೆಸುರ್ಗು, ರವಿ ಮುದ್ನಾಳ ಹಾಗೂ ಸೇರಿದಂತೆ ರೈತ ಮುಖಂಡರು ಇದ್ದರು.

# ಗ್ಯಾರಂಟಿ ಯೋಜನೆ ಭ್ರಷ್ಟಾಚಾರದ ಬಗ್ಗೆ ರಾಜ್ಯ ಸರ್ಕಾರ ತನಿಖೆ ನಡೆಸಲಿ-ಬಿ. ವೈ. ರಾಘವೇಂದ್ರ

**ಶಿವಮೊಗ್ಗ,ಜೂ.15–**ಗ್ಯಾರಂಟಿ ಯೋಜನೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಕುರಿತು ರಾಜ್ಯ ಸರ್ಕಾರ ತನಿಖೆ ನಡೆಸಲಿ ಎಂದು ಶಿವಮೊಗ್ಗ ಲೋಕಸಭಾ ಸಂಸದ ಬಿ. ವೈ. ರಾಘವೇಂದ್ರ ಆಗ್ರಹಿಸಿದ್ದಾರೆ.




ಈ ಕುರಿತು ನಗರದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ವಿಚಾರದಲ್ಲಿ ಕೆಲ ನ್ಯೂನತೆಗಳನ್ನು ನೋಡಿಕೊಂಡು ಮತ್ತೆ ಅರ್ಜಿ ಕರೆಯುವ್ ಕುರಿತ ಸಿಎಂ ಅವರ ಹೇಳಿಕೆಗಳನ್ನು ನಾನು ನೋಡಿದ್ದೇನೆ. ಈ ಮೂರುವರೆ ವರ್ಷ ದಾಖಲೆ ಇಲ್ಲದೆ ಸತ್ತು ಹೋದವರು ಒಂದೂ ಕಾಲು ಲಕ್ಷ ಹೆಣ್ಣು ಮಕ್ಕಳ ಹೆಸರಿನಲ್ಲಿ ಗೃಹಲಕ್ಷ್ಮಿ ದುರುಪಯೋಗದ ಬಗ್ಗೆ ತನಿಖೆ ನಡೆಸುತ್ತೀರಾ? ಎಂದು ಪಶ್ನಿಸಿದರು.

ನೀವು ಪಂಚ ಗ್ಯಾರಂಟಿಯನ್ನು ಪ್ರತಿಯೊಬ್ಬ ವ್ಯಕ್ತಿಗೂ ನೀಡುವ ಭರವಸೆಯನ್ನು ನೀಡಿದ್ದೀರಿ. ಈಗ ಕೇವಲ ಶೇ.15 ರಷ್ಟು ಜನರಿಗೆ ಮಾತ್ರ ನೀಡುತ್ತಿದ್ದೀರಿ. ಯುವಕರು ಸೇರಿದಂತೆ ಕೇವಲ ಶೇ. 22 ರಷ್ಟು ಜನರಿಗೆ ಮಾತ್ರ ಗ್ಯಾರಂಟಿ ಯೋಜನೆ ತಲುಪುತ್ತಿದೆ. ಈ ವಿಚಾರದಲ್ಲಿ ತನಿಖೆಯನ್ನು ಮಾಡಿ, ಪರಿಶೀಲನೆ ಮಾಡಿ, ಎಲ್ಲರಿಗೂ ಸಿಗುವಂತಹ ಯೋಜನೆ ಮಾಡಿ. ಭ್ರಷ್ಟಾಚಾರ ಆಗಿರುವ ಬಗ್ಗೆ ತನಿಖೆಯನ್ನು ಮಾಡಿ. ಯಾರು ತಪ್ಪಿತಸ್ಥರಿರುತ್ತಾರೋ ಅವರಿಗೆ ಶಿಕ್ಷೆ ಕೊಡಿಸುವುದು ಸಹ ಸರ್ಕಾರದ ಕರ್ತವ್ಯವಾಗಿದೆ ಎಂದು ಹೇಳಿದರು.

ಯೋಜನೆ ಜಾರಿ ಮಾಡುವಾಗ ಎಲ್ಲವನ್ನೂ ಯೋಚನೆ ಮಾಡಬೇಕಿತ್ತು. ಈಗ ಜ್ಞಾನೋದಯವಾದಂತೆ ಕಾಣುತ್ತದೆ. ರಾಜ್ಯ ಸರ್ಕಾರ ಕೇವಲ ಚರ್ಚೆಯ ಮೂಲಕನೇ ಕಾಲ ಕಳೆಯುತ್ತಿದೆ. ಮುಂದಿನ ದಿನಗಳಲ್ಲಿ ಆದ್ರೂ ಸಹ ಒಳ್ಳೆಯ ಆಡಳಿತವನ್ನು ನೋಡಬಹುದಾ? ಎಂಬ ನಿರೀಕ್ಷೆಯನ್ನು ರಾಜ್ಯದ ಜನ ಹೊಂದಿದ್ದಾರೆ ಎಂದರು.

ಡಿ. ಕೆ. ಶಿವಕುಮಾರ್ ಅವರ ಮೊದಲ ಆದ್ಯತೆ ಕಸ ವಿಲೇವಾರಿಗೆ 30 ವರ್ಷದ ಟೆಂಡರ್, ಬಡವರಿಗೆ ಆದ್ಯತೆ ಅಂತ ಬಿಡದಿ ಟೌನ್ ಶಿಪ್ ಬಗ್ಗೆ ಚರ್ಚೆ ಮಾಡುತ್ತಿದ್ದಾರೆ. ಈಗ ಮಳೆ ಕಡಿಮೆ ಅಂತ ಚರ್ಚೆ ಆಗುತ್ತಿದೆ. ಈಗ ರೈತರು ಉಳುಮೆ ಾಡಲು ತಯಾರಿ ಮಾಡಿಕೊಂಡಿದ್ದಾರೆ. ಆದರೆ ಮಳೆ ಬರ್ತಾ ಇಲ್ಲ. ಬಿತ್ತನೆ ಮಾಡಿದ್ರು ಮಳೆ ಬರುತ್ತಿಲ್ಲ. ಈ ಬಗ್ಗೆ ಗಮನ ಹರಿಸದ ಇವರು ದೊಡ್ಡ ಕಡೆ ಮಾತ್ರ ಗಮನ ಹರಿಸುತ್ತಿದ್ದಾರೆ ಎಂದು ಟೀಕಿಸಿದರು.

ಟೌನ್ ಶಿಪ್ ಕುರಿತು ಪ್ರಧಾನಿ ನರೇಂದ್ರ ಮೋದಿ ಹಾಗೂ ಸಿಎಂ ಡಿ. ಕೆ. ಶಿವಕುಮಾರ್ ಅವರ ನಡುವೆ ಏನ್ ಮಾತುಕತೆ ನಡೆದಿದೆ ಅಂತ ನಮಗ್ ಗೊತ್ತಿಲ್ಲ. ಪ್ರಧಾನಿಯವರು ಒಟ್ಟಾರೆ ಭೇಷ್ ಅಂದಿದ್ದಾರೋ, ಟೌನ್ ಶಿಪ್ ಬಗ್ಗೆ ಭೇಷ್ ಅಂದಿದ್ದಾರೋ ಗೊತ್ತಿಲ್ಲ ಎಂದು ಹೇಳಿದರು.

ಹಿಂದೆ ಸಿದ್ದರಾಮಯ್ಯನವರು ಅಧಿಕಾರ ವಹಿಸಿಕೊಂಡಾಗ ಇದೇ ರೀತಿ ಹೇಳಿದ್ರು. ಆದರೆ ಎಸ್ಟಿ ನಿಗಮದಲ್ಲಿ ಶಿವಮೊಗ್ಗದ ಅಧಿಕಾರ್ ಆತ್ಮಹತ್ಯೆ ಮಾಡಿಕೊಂಡಿದ್ದಕ್ಕೆ ಸಂಬಂಧಪಟ್ಟಂತೆ ಸಚಿವರು ರಾಜೀನಾಮೆ ನೀಡಿದ್ದು ನಿಮಗೆ ಗೊತ್ತಿರುವಂತಹ ವಿಚಾರ ಎಂದರ್. ಸಿಎಂ ಡಿ. ಕೆ. ಶಿವಕುಮಾರ್ ಅವರು ಶೂನ್ಯ ಭ್ರಷ್ಟಾಚಾರದ ಬಗ್ಗೆ ಹೇಳಿರುವುದು, ಕೇಳಲು, ಪೇಪರ್ನಲ್ಲ್ ಓದಲು ಚೆನ್ನಾಗಿರುತ್ತದೆ ಅಷ್ಟೇ. ಆದ್ರೆ ಅದು ಕಾರ್ಯರೂಪಕ್ಕೆ ಬರುತ್ತದೆ ಎಂದು ನನಗೆ ಅನ್ನಿಸುವುದಿಲ್ಲ ಎಂದು ತಿಳಿಸಿದರು. ಗ್ಯಾರಂಟಿ ಯೋಜನೆ ಮಾಡಿಕೊಂಡ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದಿಂದ ನಮಗೆ ಹಣ ಬರಬೇಕು ಎಂದು ಸುಮ್ಮನೆ ಆರೋಪ್ ಮಾಡುತ್ತಿದೆ. ಇದಕ್ಕೆ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಿಮ್ಮ ಗ್ಯಾರಂಟಿ ಯೋಜನೆಯಿಂದ ಆದ ಸಮಸ್ಯೆಯನ್ನು ನಮ್ಮ ಮೇಲೆ ಹಾಕಬೇಡಿ ಎಂದು ಹೇಳಿದ್ದಾರೆ ಎಂದರು.

ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ರೆಸಾರ್ಟ್ ರಾಜಕೀಯ ಶುರುವಾಗಿರುವ ಕುರಿತು ಪ್ರತಿಕ್ರಿಯಿಸಿದ ಸಂಸದ ಬಿ ವೈ ರಾಘವೇಂದ್ರ ಅವರು, ಈಗ ಪಶ್ಚಿಮ ಬಂಗಾಳದಲ್ಲಿ ಬದಲಾವಣೆ ನೋಡಿದ್ದೀರಿ. ಈಗ ಗ್ರಾಮ ಪಂಚಾಯತಿ ಸದಸ್ಯನನ್ನು ಬೇರೆ ಕಡೆಯಿಂದ ಕರೆತರುವುದು ಕಷ್ಟ. ಹೀಗಿರುವಾಗ ಸ್ವಯಂ ಆಗಿ 22 ಸಂಸದರು ಸ್ಪೀಕರ್ ಅವರ ಬಳಿ ಹೋಗಿ ಪ್ರಧಾನ ಮಂತ್ರಿ ಮೋದಿ ಅವರ ನೇತೃತ್ವದ ಎನ್‌ಡಿಎ ಸರ್ಕಾರಕ್ಕೆ ಬೆಂಬಲ ಕೊಡುತ್ತೇವೆ ಎಂದು ಪತ್ರ ಕೊಟ್ಟು ಪ್ರತ್ಯೇಕ ಆಸನವನ್ನು ಕೇಳಿದ್ದಾರೆ. ನಿಮ್ಮ ಮೂಲಕ ನಾನು ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಈಗ ಡಿ. ಕೆ. ಶಿವಕುಮಾರ್ ಅವರಿಗೆ ಅವರ ಹೈ ಕಮಾಂಡ್ ಸಿಎಂ ಮಾಡಿದೆ. ಕಾಂಗ್ರೆಸ್ ಆಗಲಿ, ಬಿಜೆಪಿ ಆಗಲಿ, ಅವರ ಶಾಸಕರ ಬಗ್ಗೆ ವಿಶ್ವಾಸ ಇಡಬೇಕು ಎಂದರು.

ಜೂನ್ ಹಾಗೂ ಜುಲೈನಲ್ಲಿ ರಾಜ್ಯಕ್ಕೆ ಕೇಂದ್ರದಿಂದ ಎಷ್ಟು ಗೊಬ್ಬರ ಬರಬೇಕೋ ಅಷ್ಟು ಬಂದಿದೆ. ಕೇಂದ್ರ ಸರ್ಕಾರ ಯೂರಿಯದ್ ಮೇಲೆ ವರ್ಷಕ್ಕೆ 3 ಸಾವಿರ ಕೋಟಿ ಸಬ್ಸಿಡಿ ನೀಡುತ್ತಿದೆ. ಈಗ ರೈತರಿಗೆ ಯೂರಿಯ ಗೊಬ್ಬರ ನೀಡುವುದನ್ನು ಕೇಂದ್ರ ಸರ್ಕಾರ ನಿಯಂತ್ರಿಸಿದೆ. ಯೂರಿಯಾ ಕಾಳ ಸಂತೆಯಲ್ಲಿ ಮಾರಾಟ ಆಗದಂತೆ ಮಾಡಲು ಈ ಕ್ರಮ ತೆಗೆದುಕೊಂಡಿದೆ. ರಾಜ್ಯ ಸರ್ಕಾರ ಸೂಕ್ತ ತನಿಖೆ ನಡೆಸಿ ಬಿಗಿ ಕ್ರಮ ತೆಗೆದುಕೊಳ್ಳಬೇಕಿದೆ ಎಂದು ಹೇಳಿದರು.

ವಿಜಯೇಂದ್ರ, ರಾಜ್ಯ ಬಿಜೆಪಿ ಅಧ್ಯಕ್ಷರಾಗಿ ಮುಂದುವರೆಯುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ವಿಜಯೇಂದ್ರ, ತುಂಬ ಒಳ್ಳೆಯ ಕೆಲಸ ಮಾಡುತ್ತಿದ್ದಾರೆ. ಒಬ್ಬ ಯುವ ನಾಯಕನಾಗ್ ಒಳ್ಳೆಯ ಕೆಲಸ ಮಾಡಿದ್ದಾರೆ. ನನಗೆ ವಿಶ್ವಾಸವಿದೆ. ರಾಜ್ಯದಲ್ಲಿ ಉತ್ತಮವಾದ ಸಂಘಟನೆ ಕಟ್ಟುವ ವಿಶ್ವಾಸವಿದೆ ಎಂದರು.ಬಿಜೆಪಿಯ ಉಚ್ಚಾಟಿತರನ್ನು ಮರಳಿ ಪಕ್ಷಕ್ಕೆ ಕರೆ ತರುವ ಕುರಿತು ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಉಚ್ಚಾಟನೆ ಮಾಡುವಂತಹ ಅನಿವಾರ್ಯತ್ ಯಾಕೆ ಬರುತ್ತದೆ. ಉಚ್ಚಾಟನೆ ಆದ ಮೇಲೆ ಅವರ ನಡವಳಿಕೆ ಸರಿ ಇದ್ರೆ, ಅದನ್ನು ಸಂಘಟನೆ ನೋಡುತ್ತದೆ. ಆರ್‌ಎಸ್‌ಎಸ್‌ನವರು ಪಾಕಿಸ್ತಾನದ ಜೊತೆ ಸಹ ಮಾತನಾಡಬೇಕು ಅಂತ ಹೇಳಿರುವಾಗ, ಯಾರನ್ನು ನಮ್ಮ ಸಂಘಟನೆ ಪರಿವಾರ ಆಗ್ಲಿ ದ್ವೇಷ ಮಾಡಲ್ಲ. ಯಾರು ಯಾರನ್ನು ಬಳಸಿಕೊಳ್ಳಬೇಕು ಎಂಬುದರ ಮೇಲ್ ನಿರ್ಧಾರವಾಗುತ್ತದೆ. ಘರ್ ವಾಪಸಿ ಕುರಿತು ಪಕ್ಷದ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ಹೇಳಿದರು.

# ಎಟಿಎಂ ವಾಹನ ಅಡ್ಡಗಟ್ಟಿ 7.11 ಕೋಟಿ ದರೋಡೆ ಪ್ರಕರಣ : 7 ತಿಂಗಳ ಬಳಿಕ 6.97 ಕೋಟಿ ಹಣ ಬಹುತೇಕ ನಾಳೆ ಸಿಎಂಎಸ್ ಕಂಪನಿಗೆ ಹಸ್ತಾಂತರ

**ಬೆಂಗಳೂರು,ಜೂ.15–**ರಾಜಧಾನಿಯಲ್ಲಿ ಏಳು ತಿಂಗಳ ಹಿಂದೆ ಎಟಿಎಂ ವಾಹನ ಅಡ್ಡಗಟ್ಟಿ 7.11 ಕೋಟಿ ದರೋಡೆ ಮಾಡಿದ ಪ್ರಕರಣ ಸಂಬಂಧ 9 ಮಂದಿ ಆರೋಪಿಗಳನ್ನ ಬಂಧಿಸಿ ಅವರಿಂದ ವಶಕ್ಕೆ ಪಡೆದುಕೊಳ್ಳಲಾಗಿದ್ದ ಹಣವನ್ನು ಸಿದ್ದಾಪುರ ಠಾಣೆಯಲ್ಲಿ ಇರಿಸಲಾಗಿದ್ದು, ಆ ಹಣ ನಾಳೆ(ಜೂನ್ 16) ಬಹುತೇಕ ವಾರಸುದಾರರ ಕೈ ಸೇರುವ ನಿರೀಕ್ಷೆಯಿದೆ. ದರೋಡೆ ಹಣವನ್ನು ಹಿಂಪಡೆಯುವ ಸಂಬಂಧ ಸಿಎಂಎಸ್ ಇನ್ಫೋಸಿಸ್ಟಮ್ಸ್ ಕಂಪನಿಯು ಕಾನೂನು ಪ್ರಕ್ರಿಯೆಗಳನ್ನು ಪೂರೈಸಿದ್ದು, ಈ ಸಂಬಂಧ ಮಂಗಳವಾರ 2ನೇ ಹೆಚ್ಚುವರಿ ಸಿವಿಲ್ ಹಾಗೂ ಸತ್ರ ನ್ಯಾಯಾಲಯವು ಆದೇಶಿಸುವ ಸಾಧ್ಯತೆಯಿದೆ.

ಏಳು ತಿಂಗಳ ಕಾಲ ಜತನದಿಂದ ಠಾಣೆಯಲ್ಲಿ ಕಾಪಾಡಿಕೊಂಡಿದ್ದ 6.97 ಕೋಟಿ ರೂ. ಹಣವನ್ನು ಕಂಪನಿಗೆ ಪೊಲೀಸರು ಹಸ್ತಾಂತರಿಸಲಿದ್ದಾರೆ. ಕಳೆದ ವರ್ಷ ನವೆಂಬರ್ 19ರಂದು ಅಶೋಕ್ ಪಿಲ್ಲರ್ – ಡೇರಿ ಸರ್ಕಲ್ ಮಾರ್ಗದಲ್ಲಿ ಸಿಎಂಎಸ್ ಎಟಿಎಂ ವಾಹನವನ್ನು ಆರ್‌ಬಿಐ ಹಾಗೂ ಐಟಿ ಅಧಿಕಾರಿಗಳ ಸೋಗಿನಲ್ಲಿ ಕಾರಿನಲ್ಲಿ ಬಂದು, ಎಟಿಎಂ ವಾಹನ ಅಡ್ಡಗಟ್ಟಿದ್ದ ಆರೋಪಿಗಳು ಪರಿಶೀಲನೆ ನೆಪದಲ್ಲಿ ವಾಹನದಲ್ಲಿದ್ದ ಸಿಬ್ಬಂದಿಗಳನ್ನು ಕೆಳಗಿಳಿಸಿ, 7.11 ಕೋಟಿ ಹಣವನ್ನು ತಮ್ಮ ಕಾರಿಗೆ ವರ್ಗಾಯಿಸಿಕೊಂಡು ಕ್ಷಣಾರ್ಧದಲ್ಲಿ ಪರಾರಿಯಾಗಿದ್ದರು.

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಸಿಎಂಎಸ್ ಕಂಪನಿಯ ಮಾಜಿ ಉದ್ಯೋಗಿ ಹಾಗೂ ಪೊಲೀಸ್ ಕಾನ್ ಸ್ಟೇಬಲ್ ಸೇರಿದಂತೆ 9 ಮಂದಿ ಆರೋಪಿಗಳನ್ನು ಆಂಧ್ರ ಪ್ರದೇಶ, ತೆಲಂಗಾಣ ಹಾಗೂ ತಮಿಳುನಾಡಿನಲ್ಲಿ ಬಂಧಿಸಿದ್ದರು. ಆರೋಪಿಗಳಿಂದ ದರೋಡೆ ಮಾಡಿದ್ದ ಹಣವನ್ನು ಜಪ್ತಿ ಮಾಡಿದ್ದರು.

ಈ ಪೈಕಿ 14 ಲಕ್ಷ ಹಣವನ್ನು ಆರೋಪಿಗಳು, ಪ್ರಯಾಣ ವೆಚ್ಚ, ಲಾಡ್ಜ್ ನಲ್ಲಿ ವಾಸ್ತವ್ಯ ಸೇರಿದಂತೆ ಇನ್ನಿತರ ಖರ್ಚಿಗಾಗಿ ವ್ಯಯ ಮಾಡಿದ್ದರು. ಈ ಸಂಬಂಧ ಕಳೆದ ಫೆಬ್ರುವರಿಯಲ್ಲಿ ಎಲ್ಲಾ ಆರೋಪಿಗಳ ವಿರುದ್ಧ 1,328 ಪುಟಗಳ ಚಾರ್ಜ್ ಶೀಟ್ ಸಲ್ಲಿಸಲಾಗಿತ್ತು.

ಹಣ ಕಣ್ಗಾವಲಿಗೆ ಪೊಲೀಸ್ ಹದ್ದಿನ ಕಣ್ಣು : ಆರೋಪಿಗಳಿಂದ ಜಪ್ತಿ ಮಾಡಿದ್ದ ಹಣವನ್ನು ಸಿದ್ದಾಪುರ ಠಾಣೆಯ ಎರಡನೇ ಮಹಡಿಯಲ್ಲಿರುವ ಉಕ್ಕಿನ ಆಲ್ಮೇರಾದಲ್ಲಿ ಸುರಕ್ಷಿತವಾಗಿ ಇಡಲಾಗಿತ್ತು. ಮುನ್ನೆಚ್ಚರಿಕೆ ಕ್ರಮವಾಗಿ ಠಾಣೆ ಸಿಬ್ಬಂದಿ ಹಾಗೂ ಹೊರಗಿನವರಿಗೆ ಹಣ ಇಡುವ ಕೊಠಡಿಗೆ ಪ್ರವೇಶ ನಿಷೇಧಿಸಲಾಗಿತ್ತು. ಸಶಸ್ತ್ರ ಮೀಸಲು ಪಡೆಯ ಕಾನ್‌ಸ್ಟೇಬಲ್‌ಗಳು ದಿನದ 24 ಗಂಟೆ ಕಾಲ ಪಾಳಿ ರೀತಿಯಲ್ಲಿ ಕಾವಲು ಕಾಯುತ್ತಿದ್ದರು. ಪ್ರತಿ ಸಭೆಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳು ಈ ಬಗ್ಗೆ ವಿಚಾರಿಸುತ್ತಿದ್ದರು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

9 ಮಂದಿ ಆರೋಪಿಗಳ ಬಂಧಿಸಿದ್ದ ಖಾಕಿ : ಪ್ರಕರಣದ ಮೊದಲ ಆರೋಪಿ ಜೆ. ಝೇವಿಯರ್ ಸಿಎಂಎಸ್ ಇನ್ಫೋಸಿಸ್ಟಮ್ ಕಂಪನಿಯ ಮಾಜಿ ಉದ್ಯೋಗಿಯಾಗಿದ್ದ. ಹಣ ಸಂಗ್ರಹದಿಂದ ಹಿಡಿದು ಎಟಿಎಂಗಳಿಗೆ ಹಣ ಹಾಕುವವರೆಗೂ ಎಲ್ಲಾ ರೀತಿಯ ಮಾಹಿತಿಯನ್ನು ತಿಳಿದುಕೊಂಡಿದ್ದ. ಯಾವ ವಾಹನ ಎಲ್ಲೆಲ್ಲಿ ಹೋಗಲಿದೆ ಸೇರಿದಂತೆ ಒಟ್ಟಾರೆ ಕಾರ್ಯಾಚರಣೆ ಬಗ್ಗೆ ತಿಳಿದು ದರೋಡೆ ಸಂಚು ರೂಪಿಸಿದ್ದ.

ಎರಡನೇ ಆರೋಪಿಯಾಗಿರುವ ಗೋವಿಂದಪುರ ಠಾಣೆಯ ಕಾನ್‌ಸ್ಟೇಬಲ್ ಆಗಿದ್ದ ಅಣ್ಣಪ್ಪ ನಾಯಕ್, ದರೋಡೆ ಬಳಿಕ ಪೊಲೀಸರ ದಿಕ್ಕು ತಪ್ಪಿಸಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ನೀಲನಕ್ಷೆ ರೂಪಿಸಿದ್ದ. ಕೃತ್ಯದ ಬಳಿಕ ಎಸ್ಕೇಪ್ ಆಗಲು ಮಾರ್ಗಗಳು, ಸಿಸಿಟಿವಿ ಇಲ್ಲದಿರುವ ಪ್ರದೇಶ ಗುರುತು, ಆರೋಪಿಗಳೊಡನೆ ನಿರಂತರ ಸಂಪರ್ಕ ಹೊಂದಿದ್ದ.

ಮೂರನೇ ಆರೋಪಿ ಗೋಪಾಲ್ ಪ್ರಸಾದ್, ಸಿಎಂಎಸ್ ಕಂಪನಿಯ ಸೂಪರ್ ವೈಸರ್ ಆಗಿದ್ದು, ದರೋಡೆಗೆ ಲಾಜೆಸ್ಟಿಕ್ ವಸ್ತುಗಳ ಸಾಗಣೆ, ಎಟಿಎಂ ವಾಹನ ಬರುವಿಕೆ ಕುರಿತಂತೆ ನೈಜ ಸಮಯದ ಬಗ್ಗೆ ಸಹ ಆರೋಪಿಗಳಿಗೆ ಅಪ್ ಡೇಟ್ ನೀಡುತ್ತಿದ್ದ ಎಂದು ಪೊಲೀಸರು ಚಾರ್ಜ್ ಶೀಟ್‌ನಲ್ಲಿ ಉಲ್ಲೇಖಿಸಿದ್ದರು.

ಪ್ರಕರಣದಲ್ಲಿ ಇನ್ನಿತರ ಆರೋಪಿಗಳಾದ ರವಿ, ಈತನ ಸಹೋದರ ರಾಕೇಶ್, ಸಹಚರರಾದ ನವೀನ್, ನೆಲ್ಸನ್, ದಿನೇಶ್, ಜಿನೇಶ್ ಎಂಬುವರು ನಕಲಿ ಆರ್‌ಬಿಐ ಅಧಿಕಾರಿಗಳಾಗಿ ನಟಿಸಿ ದರೋಡೆ ಮಾಡಿ ಪರಾರಿಯಾಗಿದ್ದರು ಎಂದು ದೋಷಾರೋಪಪಟ್ಟಿಯಲ್ಲಿ ಪೊಲೀಸರು ತಿಳಿಸಿದ್ದಾರೆ.

# ವಿ.ಎಸ್.ಉಗ್ರಪ್ಪ ಅವರಿಗೆ ಸಚಿವ ಸ್ಥಾನ ನೀಡುವಂತೆ ಮುಖ್ಯಮಂತ್ರಿಗೆ ಟಿ. ಸುರೇಶ್ ನಾಯಕ್ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ

**ದೇವದುರ್ಗ,ಜೂ.16–**ವಾಲ್ಮೀಕಿ ಸಮಾಜದ ಹಿರಿಯ ಮುಖಂಡ, ಮಾಜಿ ಸಂಸದ ಹಾಗೂ ಮಾಜಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ವಿ.ಎಸ್. ಉಗ್ರಪ್ಪ ಅವರಿಗೆ ರಾಜ್ಯ ಸರ್ಕಾರದಲ್ಲಿ ಸೂಕ್ತ ಸ್ಥಾನಮಾನ ನೀಡಿ, ವಿಧಾನ ಪರಿಷತ್ ಸದಸ್ಯರನ್ನಾಗಿ (ಎಂಎಲ್‌ಸಿ) ನೇಮಕ ಮಾಡಿ ಸಚಿವ ಸ್ಥಾನ ನೀಡಬೇಕು ಎಂದು ದೇವದುರ್ಗ (ಎಸ್‌ಟಿ) ಮೀಸಲು ಕ್ಷೇತ್ರದ ಕಾಂಗ್ರೆಸ್ ಮುಖಂಡ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಭಿಮಾನಿ ಟಿ. ಸುರೇಶ್ ನಾಯಕ್ ಆಗ್ರಹಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿರುವ ಅವರು, ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿರುವುದು ರಾಜ್ಯದ ಎಲ್ಲಾ ಜಾತಿ, ಧರ್ಮ ಹಾಗೂ ವರ್ಗದ ಜನರಲ್ಲಿ ಸಂತಸ ಮೂಡಿಸಿದೆ. ಅವರ ಅಭಿಮಾನಿಗಳು ವಿವಿಧ ಧಾರ್ಮಿಕ ಕ್ಷೇತ್ರಗಳಲ್ಲಿ ಪ್ರಾರ್ಥನೆ ಸಲ್ಲಿಸಿದ ಫಲವಾಗಿ ಅವರು ಮುಖ್ಯಮಂತ್ರಿಯಾಗಿದ್ದಾರೆ. ಅವರ ನಾಯಕತ್ವದಲ್ಲಿ ರಾಜ್ಯದ ಅಭಿವೃದ್ಧಿಗೆ ಹೊಸ ದಿಕ್ಕು ದೊರೆಯಲಿದೆ ಎಂದು ಹೇಳಿದ್ದಾರೆ.

ವಿ.ಎಸ್. ಉಗ್ರಪ್ಪ ಅವರು ತಮ್ಮ ರಾಜಕೀಯ ಜೀವನದಲ್ಲಿ ಶೋಷಿತರು, ಹಿಂದುಳಿದ ವರ್ಗಗಳು, ಎಸ್‌ಸಿ–ಎಸ್‌ಟಿ ಸಮುದಾಯ ಹಾಗೂ ಒಬಿಸಿ ವರ್ಗಗಳ






ಪರವಾಗಿ ನಿರಂತರ ಹೋರಾಟ ನಡೆಸಿದ್ದಾರೆ. ಸಂಸದರಾಗಿದ್ದ ಅವಧಿಯಲ್ಲಿ ಹಾಗೂ ಪಕ್ಷದ ವಿವಿಧ ಜವಾಬ್ದಾರಿಗಳಲ್ಲಿ ಜನಪರ ಧ್ವನಿಯಾಗಿ ಕಾರ್ಯನಿರ್ವಹಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇಂತಹ ಅನುಭವಿಗಳಾದ ಮತ್ತು ಕಾನೂನು ಜ್ಞಾನ ಹೊಂದಿರುವ ಹಿರಿಯ ನಾಯಕರನ್ನು ಸರ್ಕಾರ ಕಡೆಗಣಿಸದೆ, ಅವರಿಗೆ ಸೂಕ್ತ ಅಧಿಕಾರ ಹಾಗೂ ಸ್ಥಾನಮಾನ ನೀಡಿ ಅವರ ಅನುಭವವನ್ನು ರಾಜ್ಯದ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದು ಟಿ. ಸುರೇಶ್ ನಾಯಕ್ ಮನವಿಯಲ್ಲಿ ಒತ್ತಾಯಿಸಿದ್ದಾರೆ.

# ಗೊವು ಎತ್ತು ಭೂಮಿ ರೈತನ ಜೀವನಾಡಿ ಅವುಗಳನ್ನು ಪೂಜಿಸಿ-ಕರುಣೇಶ್ವರ ಶ್ರೀ

■ ಕನ್ನಡ ಮಾತೃ ಭೂಮಿ ವಾರ್ತೆ

**ವಡಗೇರಾ,ಜೂ.15-**ರೈತರ ಮಿತ್ರರಾಗಿ ಹಗಲು ಇರುಳು ಎನ್ನದೆ ಕೃಷಿ ಕಾಯಕದಲ್ಲಿ ದುಡಿಯುವ ಎತ್ತುಗಳಿಗೆ ಗೌರವ ಸಲ್ಲಿಸಲು ಮಣ್ಣಿನಿಂದ ಎತ್ತುಗಳನ್ನು ತಯಾರಿಸಿ ಅವುಗಳಿಗೆ ಪೂಜಿಸಿ ನೈವೇದ್ಯ ತಿನ್ನಿಸಿ ಕೃತಜ್ಞತೆ ಸಲ್ಲಿಸುವುದೆ ಮಣ್ಣೆತ್ತಿನ ಅಮಾವಾಸ್ಯೆಯ ವಿಶೇಷತೆಯಾಗಿದೆ ಎಂದು ಕೃಷ್ಣಾವೇಣಿ ಭೀಮಾ ಸಂಗಮದ ಪರಮಪೂಜ್ಯ ಶ್ರೀ ಕರುಣೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ನುಡಿದರು. ತಾಲೂಕಿನ ಸುಕ್ಷೇತ್ರ ಕೃಷ್ಣಾವೇಣಿ ಭೀಮಾ ಸಂಗಮದ ಸಂಗಮೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ112.ನೇ ಶಿವಾನುಭವ ಚಿಂತನಾಗೋಷ್ಠಿಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ರೈತನು ಬಿತ್ತನೆಗೆ ಮುಂಚೆ ತನ್ನ ಕೃಷಿಗೆ ಆಧಾರ ಸ್ತಂಭವಾಗಿರುವ ಎತ್ತುಗಳನ್ನು ಆರಾಧಿಸುವ ಪೂಜಿಸುವ ವಿಶೇಷತೆ ಹೊಂದಿರುವ ಈ ಅಮಾವಾಸ್ಯೆಯನ್ನು ಗ್ರಾಮೀಣ ಭಾಗದಲ್ಲಿ ಅತ್ಯಂತ ಶ್ರದ್ಧಾ ಭಕ್ತಿ ಸಡಗರದಿಂದ ಆಚರಿಸುತ್ತಾರೆ.

ಮಣ್ಣಿನ ಎತ್ತುಗಳನ್ನು ಪೂಜೆಗೈದಲ್ಲಿ ಸಂಪೂರ್ಣ ಮಳೆ ಬೆಳೆ ಸಮೃದ್ಧಿ ಆರೋಗ್ಯ ವೃದ್ಧಿಯಾಗುತ್ತದೆ ಎಂಬ ನಂಬಿಕೆ ರೈತರಲ್ಲಿದೆ ನಮ್ಮ ಸಂಸ್ಕೃತಿಯಲ್ಲಿ ಭೂಮಿ ಗೊವು ಮತ್ತು ಎತ್ತುಗಳಿಗೂ ಅತ್ಯಂತ ಮಹತ್ವದ ಸ್ಥಾನವಿದೆ ಆದ್ದರಿಂದ ಪ್ರತಿಯೊಬ್ಬರು ಭೂಮಿ.ಗೊವು ಮತ್ತು ಎತ್ತುಗಳನ್ನು ಪೂಜ್ಯ ಭಾವನೆಯಿಂದ ಕಾಣಬೇಕು ಎಂದರು.

ಗೋವು ಮತ್ತು ಎತ್ತುಗಳಿಗೆ ವಯಸ್ಸಾಗಿದೆ ಎಂದು ಕಸಾಯಿ ಖಾನೆಗಳಿಗೆ ಕೊಡಬೇಡಿ ಅದು ಮಹಾ ಪಾಪ ಅವುಗಳ ಪೊಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ವೇದಮೂರ್ತಿ ಬನ್ನಯ್ಯ ಸ್ವಾಮಿ ಪ್ರಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವೇದಮೂರ್ತಿ ವೀರಭದ್ರಯ್ಯ ಸ್ವಾಮಿ ದೇವಸುಗೂರು ,ಶಿವಯ್ಯ ಸ್ವಾಮಿ ಸಾತಕೇಡ , ಮಲ್ಲಿಕಾರ್ಜುನ್ ಸ್ವಾಮಿ ಅರಸಿಣಗಿ,ಚಂದ್ರಶೇಖರಗೌಡ ಗೋನಾಲ್, ಶರಣಯ್ಯ ಸ್ವಾಮಿ, ಶಿವಕುಮಾರ್, ಶರಣಪ್ಪ ವಿಶ್ವಕರ್ಮ,ಭೀಮರೆಡ್ಡಿ ರಂಗಾಪುರ,ಬಸವರಾಜ್ ಕಾಟರಪಲ್ಲಿ,ಸೈದಣ್ಣ ಶಿವಪುರ, ಹುಸೇನಪ್ಪ,ದೇವಸ್ಥಾನದ ಭಕ್ತರು ಹಾಗೂ ಇನ್ನಿತರರು ಉಪಸ್ಥಿತರಿದ್ದರು

# ಫ್ರೀ ಬಸ್ ಪಾಸ್ ಅರ್ಜಿ ಸಲ್ಲಿಕೆಗೆ ತಾಂತ್ರಿಕ ಸಮಸ್ಯೆ ಸರಿಪಡಿಸಲು ನಾಗೇಶ್ ಗದ್ದಿಗಿ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ

**ಗುರುಮಠಕಲ್,ಜೂ.15-**ಶಾಲೆ-ಕಾಲೇಜುಗಳು ಆರಂಭವಾಗಿದ್ದರೂ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಆಗದೇ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಜಯ ಕರ್ನಾಟಕ ಸಂಘಟನೆಯ ತಾಲೂಕು ಅಧ್ಯಕ್ಷ ನಾಗೇಶ್ ಗದ್ದಿಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಎಲ್ಲ ವಿದ್ಯಾರ್ಥಿಗಳಿಗೆ ಉಚಿತ ಬಸ್ ವ್ಯವಸ್ಥೆ ಕಲ್ಪಿಸಿದ್ದು ಉತ್ತಮ ಯೋಜನೆಯಾಗಿದೆ. ಆದರೆ ಈ ಯೋಜನೆಯ ಸದುಪಯೋಗ ಪಡೆಯಲು ಮುಂದಾದ ವಿದ್ಯಾರ್ಥಿಗಳು ತಾಂತ್ರಿಕ ದೋಷಗಳಿಂದ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ರಾಜ್ಯದ ಇತರೆ ಭಾಗಗಳಲ್ಲಿ ಶೈಕ್ಷಣಿಕ ವರ್ಷ ಆರಂಭವಾಗುತ್ತಿದ್ದಂತೆ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಣೆ ಪ್ರಕ್ರಿಯೆ ಚುರುಕಿನಿಂದ ಸಾಗುತ್ತಿದೆ. ಆದರೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಕೆಕೆಆರ್‌ಟಿಸಿ) ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳಿಗೆ ಇನ್ನೂ ಸಂಪೂರ್ಣ ಆನ್‌ಲೈನ್ ಬಸ್ ಪಾಸ್ ಸೌಲಭ್ಯ ಲಭ್ಯವಾಗದಿರುವುದು ಅತ್ಯಂತ ಬೇಸರದ ಸಂಗತಿಯಾಗಿದೆ ಎಂದು ಅವರು ತಿಳಿಸಿದರು.

ಶಾಲಾ-ಕಾಲೇಜುಗಳು ಆರಂಭವಾಗಿ ದಿನಗಳು ಕಳೆದಿದ್ದರೂ ಪಾಸ್ ಇಲ್ಲದೆ ವಿದ್ಯಾರ್ಥಿಗಳು ಪ್ರತಿದಿನ ನಗದು ಹಣ ನೀಡಿ ಪ್ರಯಾಣಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಗ್ರಾಮೀಣ ಭಾಗದ ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಇದು ಹೆಚ್ಚುವರಿ ಆರ್ಥಿಕ ಹೊರೆಯಾಗಿ ಪರಿಣಮಿಸಿದೆ. ಪ್ರತಿವರ್ಷ ತಾಂತ್ರಿಕ ಕಾರಣಗಳನ್ನು ನೀಡಿ ಪಾಸ್ ವಿತರಣೆಯನ್ನು ವಿಳಂಬ ಮಾಡುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಮೇಲೆಯೂ ಪರಿಣಾಮ ಬೀರುತ್ತಿದೆ ಎಂದು ಅವರು ಹೇಳಿದರು.



ರಾಜಧಾನಿ ಬೆಂಗಳೂರು ಸೇರಿದಂತೆ ಇತರೆ ಸಾರಿಗೆ ಸಂಸ್ಥೆಗಳಲ್ಲಿ ಆನ್‌ಲೈನ್ ಮೂಲಕ ಸುಲಭವಾಗಿ ಪಾಸ್ ಪಡೆಯಲು ಅವಕಾಶವಿರುವಾಗ, ಶೈಕ್ಷಣಿಕವಾಗಿ ಹಿಂದುಳಿದಿರುವ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಈ ಸೌಲಭ್ಯದಲ್ಲಿ ತಾರತಮ್ಯ ಏಕೆ ಎಂಬ ಪ್ರಶ್ನೆ ಉದ್ಭವಿಸಿದೆ ಎಂದು ನಾಗೇಶ್ ಗದ್ದಿಗಿ ಹೇಳಿದರು.

ಪ್ರಸ್ತುತ ಅರ್ಜಿ ಸಲ್ಲಿಕೆ ವೇಳೆ ಸರ್ವರ್ ಸಮಸ್ಯೆ, ಒಟಿಪಿ ಸಮಸ್ಯೆ ಹಾಗೂ ಹತ್ತುವ-ಇಳಿಯುವ ಸ್ಥಳಗಳ (ಬೋರ್ಡಿಂಗ್ ಮತ್ತು ಡ್ರಾಪಿಂಗ್ ಪಾಯಿಂಟ್) ಆಯ್ಕೆಯಲ್ಲಿ ಗೊಂದಲ ಉಂಟಾಗುತ್ತಿದ್ದು, ವಿದ್ಯಾರ್ಥಿಗಳು ದಿನನಿತ್ಯ ಗ್ರಾಮ ಒನ್ ಹಾಗೂ ಕರ್ನಾಟಕ ಒನ್ ಸೇವಾ ಕೇಂದ್ರಗಳಿಗೆ ಅಲೆದಾಡುವಂತಾಗಿದೆ ಎಂದು ದೂರಿದರು.

ವಿದ್ಯಾರ್ಥಿಗಳಿಗೆ ತಕ್ಷಣವೇ ಸೇವಾ ಸಿಂಧು ಅಥವಾ ಕೆಕೆಆರ್‌ಟಿಸಿ ಅಧಿಕೃತ ಪೋರ್ಟಲ್ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಮುಕ್ತ ಅವಕಾಶ ನೀಡಬೇಕು. ತಾಂತ್ರಿಕ ಅಡಚಣೆಗಳಿದ್ದರೆ ಕೌಂಟರ್‌ಗಳ ಮೂಲಕ ಆಫ್‌ಲೈನ್ ಪಾಸ್ ವಿತರಣೆಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು. ಪಾಸ್ ಸಿಗುವವರೆಗೂ ವಿದ್ಯಾರ್ಥಿಗಳು ಶುಲ್ಕ ರಸೀದಿ ಅಥವಾ ಗುರುತಿನ ಚೀಟಿ ತೋರಿಸಿ ಉಚಿತ ಅಥವಾ ರಿಯಾಯಿತಿ ದರದಲ್ಲಿ ಪ್ರಯಾಣಿಸಲು ಅವಕಾಶ ನೀಡಬೇಕು ಎಂದು ಅವರು ಆಗ್ರಹಿಸಿದರು.

ಮುಂದಿನ 2-3 ದಿನಗಳಲ್ಲಿ ಸಮಸ್ಯೆ ಬಗೆಹರಿಸದಿದ್ದರೆ ವಿದ್ಯಾರ್ಥಿಗಳು ಹಾಗೂ ಪೋಷಕರೊಂದಿಗೆ ಸೇರಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಗೋಪಾಲಕೃಷ್ಣ ಮೇಧಾ, ಮಲ್ಲಿಕಾರ್ಜುನ ಕಾಕಲವಾರ, ಕಾಶಪ್ಪ ಭೋಯಿ, ನರಸಿಂಹಲು ಗಂಗನೋಳ, ಮಹೇಶ್ ಗೌಡ, ಭೀಮಶಪ್ಪ ತಲಾರಿ, ರಾಮುಲು ಕೋಡಿಗಂಟಿ, ಉದಯಕುಮಾರ ಕೊಂಕಲ, ಅಯಾಝು ಅಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಾಮಾಜಿಕ ನ್ಯಾಯದ ಹೋರಾಟಕ್ಕೆ ಹೊಸ ತಂಡ, ಅಂಬೇಡ್ಕರ್ ಆದರ್ಶಗಳ ಅನುಷ್ಠಾನಕ್ಕೆ ಕರೆ

# ಸೈದಾಪುರದಲ್ಲಿ ದಲಿತ ಸಂಘರ್ಷ ಸಮಿತಿ ಭೀಮಮಾರ್ಗ ನೂತನ ಪದಾಧಿಕಾರಿಗಳ ನೇಮಕ

■ ಕನ್ನಡ ಮಾತೃ ಭೂಮಿ ವಾರ್ತೆ

**ಸೈದಾಪುರ, ಜೂ.15-**ದಲಿತರು, ಶೋಷಿತರು ಮತ್ತು ಹಿಂದುಳಿದ ವರ್ಗಗಳ ಹಕ್ಕುಗಳ ರಕ್ಷಣೆಗೆ ನಿರಂತರ ಹೋರಾಟ ನಡೆಸುತ್ತಿರುವ ದಲಿತ ಸಂಘರ್ಷ ಸಮಿತಿ ಭೀಮಮಾರ್ಗ (ರಿ) ವತಿಯಿಂದ ಸೈದಾಪುರ ವಲಯದ ನೂತನ ಪದಾಧಿಕಾರಿಗಳ ನೇಮಕಾತಿ ಕಾರ್ಯಕ್ರಮ ಇಂದು ಸೈದಾಪುರದಲ್ಲಿ ಉತ್ಸಾಹಭರಿತವಾಗಿ ನಡೆಯಿತು. ನೂತನ ತಂಡಕ್ಕೆ ಜವಾಬ್ದಾರಿಗಳನ್ನು ಹಸ್ತಾಂತರಿಸುವ ಮೂಲಕ ಸಂಘಟನೆಯ ಸಾಮಾಜಿಕ ಬದ್ಧತೆ ಮತ್ತು ಹೋರಾಟದ ಸಂಕಲ್ಪ ಮತ್ತೊಮ್ಮೆ ಪ್ರತಿಧ್ವನಿಸಿತು.

ಕಾರ್ಯಕ್ರಮದಲ್ಲಿ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಸನ್ಮಾನಿಸಿ ಅಭಿನಂದಿಸಲಾಯಿತು. ಮುಖ್ಯ ಅತಿಥಿಗಳು ಹಾಗೂ ಸಾಮಾಜಿಕ ಕಾರ್ಯಕರ್ತರು, ಸಮಾಜದಲ್ಲಿ ಇನ್ನೂ ಬೇರುಬಿಟ್ಟಿರುವ ಅಸಮಾನತೆ, ಅಸ್ಪೃಶ್ಯತೆ ಹಾಗೂ ಶೋಷಣೆಯ ವಿರುದ್ಧ ಸಂಘಟಿತ ಹೋರಾಟ ನಡೆಸುವ ಅಗತ್ಯವನ್ನು ಒತ್ತಿ ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ಭೀಮಮಾರ್ಗದ ಗುರುಮಿಠಕಲ್ ತಾಲ್ಲೂಕು ಅಧ್ಯಕ್ಷ ಭೀಮಯ್ಯ ದಾಸರ ವಂಕಸಂಬ್ರ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಪ್ರತಿಪಾದಿಸಿದ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಮಾನವೀಯ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಹಕ್ಕುಗಳಿಂದ ವಂಚಿತರಾಗಿರುವವರ ಧ್ವನಿಯಾಗಿ ನಿಂತು, ಅವರಿಗೆ ನ್ಯಾಯ ದೊರಕಿಸುವ ಕೆಲಸ ಸಂಘಟನೆಯ ಪ್ರಮುಖ ಗುರಿಯಾಗಬೇಕು ಎಂದು ಹೇಳಿದರು.



ಅಸ್ಪೃಶ್ಯತೆ, ಶೋಷಣೆ ಮತ್ತು ಅನ್ಯಾಯದಂತಹ ಸಾಮಾಜಿಕ ಪಿಡುಗುಗಳನ್ನು ನಿರ್ಮೂಲನೆ ಮಾಡಲು ಸಂಘಟಿತ ಶಕ್ತಿ ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ನೂತನ ಪದಾಧಿಕಾರಿಗಳು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಸಂಘಟನೆಯನ್ನು ಗ್ರಾಮಮಟ್ಟದಲ್ಲಿ ಮತ್ತಷ್ಟು ಬಲಪಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖಂಡರು, ಸಮಾಜಮುಖಿ ಚಟುವಟಿಕೆಗಳ ಮೂಲಕ ಜನರ ವಿಶ್ವಾಸ ಗಳಿಸಿ, ಶೋಷಿತ ಸಮುದಾಯಗಳ ಆಶೋತ್ತರಗಳಿಗೆ ಸ್ಪಂದಿಸುವ ಜವಾಬ್ದಾರಿ ನೂತನ ತಂಡದ ಮೇಲಿದೆ ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮವು ಕೇವಲ ಪದಾಧಿಕಾರಿಗಳ ನೇಮಕಾತಿಗೆ ಸೀಮಿತವಾಗದೇ, ಡಾ. ಅಂಬೇಡ್ಕರ್ ಅವರ ಸಮಾನತೆಯ ಕನಸನ್ನು ನನಸಾಗಿಸಲು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸುವ ಸಂಕಲ್ಪದ ಘೋಷಣೆಯಾಗಿ ರೂಪುಗೊಂಡಿತು.

ನೂತನ ತಂಡವು ಹೋರಾಟದ ಹಾದಿಯಲ್ಲಿ ಜನರ ವಿಶ್ವಾಸ ಉಳಿಸಿಕೊಂಡು, ಸಾಮಾಜಿಕ ಪರಿವರ್ತನೆಯ ಮುಂಚೂಣಿ ಶಕ್ತಿಯಾಗಿ ಹೊರಹೊಮ್ಮಲಿ ಎಂಬ ಆಶಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಶ್ರೀಮತಿ ಮೀನಾಕ್ಷಮ್ಮ, ವಿರೇಶ ಸಜ್ಜನ್ ಕಡೆಚೂರ, ಶ್ರೀ ಆಂಜನೇಯ ಕಟ್ಟಿಮನಿ, ಶ್ರೀ ಸಿದ್ದು ಪೂಜಾರಿ, ಭಾಸ್ಕರ್ ಸಂಬ್ರ, ಹಾಗೂ ಗುರುಮಿಠಕಲ್ ತಾಲೂಕು ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ಎಂ.ಎಸ್. ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದು, ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದರು.

ಅಧ್ಯಕ್ಷರಾಗಿ ಮಾರಪ್ಪ ಎಡವಲಿ, ಗೌರವಾಧ್ಯಕ್ಷರಾಗಿ ಲಿಂಗಪ್ಪ, ಗೌರವ ಸಲಹೆಗಾರರಾಗಿ ಮಹೇಶ್, ಪ್ರಧಾನ ಕಾರ್ಯದರ್ಶಿಯಾಗಿ ಶ್ರೀನಿವಾಸ ಎಂ.ಎಸ್, ಉಪಾಧ್ಯಕ್ಷರಾಗಿ ಸಿ.ಆರ್. ಜಂಬಣ್ಣ, ಕಾರ್ಯದರ್ಶಿ ಆರ್. ಜಮ್ಮಣ್ಣ, ಜಂಟಿ ಕಾರ್ಯದರ್ಶಿ ಮೋತಿ ಮಾದೇವ, ಸಂಘಟನಾ ಕಾರ್ಯದರ್ಶಿ ದೇಶವಂತ, ಸಂಚಾಲಕ ರಾಮುಲು, ಖಜಾಂಚಿಗಳಾಗಿ ಸಿ.ಆರ್. ಗಂಗಪ್ಪ ಹಾಗೂ ಮಾದೇವ ಎಡವಲಿ, ಸದಸ್ಯರಾಗಿ ಮಾರಪ್ಪ ಎಡವಲಿ, ಬನ್ನಪ್ಪ ಎಡವಲಿ, ಸಿ.ಆರ್. ನಾಗಪ್ಪ ಹಾಗೂ ಸಿ.ಆರ್. ಜಂಬಣ್ಣ ನೇಮಕಗೊಂಡರು.

# ಜಮೀರಅಹ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡಲು ಬ್ಲಾಕ್ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಸಲೀಮ್ ಮರ್ತೂರ್ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ

**ಸಿಂದಗಿ,ಜೂ.15-**ರಾಜ್ಯ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಹಾಗೂ ಶಾಸಕ ಜಮೀರ್ ಅಹ್ಮದ್ ಖಾನ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಮಹತ್ವದ ಸಚಿವ ಸ್ಥಾನ ನೀಡಬೇಕೆಂದು ಸಿಂದಗಿ ಬ್ಲಾಕ್ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಸಲೀಮ್ ಮರ್ತೂರ್ ಆಗ್ರಹಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಸಲೀಮ್ ಮರ್ತೂರ್, ಜಮೀರ್ ಅಹ್ಮದ್ ಖಾನ್ ಅವರು ಕಾಂಗ್ರೆಸ್ ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಹಾಗೂ ಅಲ್ಪಸಂಖ್ಯಾತ ಸಮುದಾಯದ ಧ್ವನಿಯಾಗಿ ಕಾರ್ಯನಿರ್ವಹಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ತಿಳಿಸಿದ್ದಾರೆ.

ಪಕ್ಷದ ಬೆಳವಣಿಗೆಗೆ ಅವರ ಕೊಡುಗೆ ಮಹತ್ವದ್ದಾಗಿದ್ದು, ಅವರ ಅನುಭವ, ನಾಯಕತ್ವ ಹಾಗೂ ಜನಪರ ಕಾರ್ಯಗಳನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಅಲ್ಪಸಂಖ್ಯಾತ ಸಮುದಾಯದ ಆಶೋತ್ತರಗಳನ್ನು ಈಡೇರಿಸುವ ನಿಟ್ಟಿನಲ್ಲಿ ಜಮೀರ್ ಅಹ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವುದು ಅಗತ್ಯವಾಗಿದೆ.

ಇದರಿಂದ ಪಕ್ಷಕ್ಕೆ ಮತ್ತಷ್ಟು ಬಲ ದೊರೆಯಲಿದ್ದು, ಅಲ್ಪಸಂಖ್ಯಾತರ ವಿಶ್ವಾಸವೂ ಹೆಚ್ಚಲಿದೆ ಎಂದು ಸಲೀಮ್ ಮರ್ತೂರ್ ಅಭಿಪ್ರಾಯಪಟ್ಟಿದ್ದಾರೆ.

# ತೆರಿಗೆ ಸಲಹೆಗಾರ ಸಂಘದ ಏಳ್ಗೆಗೆ ಪ್ರತಿಯೊಬ್ಬರು ಶ್ರಮಿಸಿ-ನಾಗಪ್ಪ ಮೊಗದಂಪೂರ್



■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.15-**ಜಿಲ್ಲಾ ತೆರಿಗೆ ಸಲಹೆಗಾರರ ಸಂಘದ ತೆರಿಗೆ ವೃತ್ತಿಪರರು ಎದುರಿಸುವ ಸಾಮಾನ್ಯ ಸಮಸ್ಯೆಗಳನ್ನು ಬಗೆಹರಿಸುವುದು, ತೆರಿಗೆದಾರರು ಮತ್ತು ವೃತ್ತಿಪರರು ಎದುರಿಸುವ ಸಮಸ್ಯೆಗಳಿಗೆ ಸಂಘದ ಪ್ರತಿಯೊಬ್ಬರು ನಿಲ್ಲಬೇಕು ಅಂದಾಗ ಮಾತ್ರ ಸಂಘ ಗಟ್ಟಿಗೊಳ್ಳಲಿದೆ ಎಂದು ಜಿಲ್ಲಾ ತೆರಿಗೆ ಸಲಹೆಗಾರ ಸಂಘದ ಅಧ್ಯಕ್ಷ ನಾಗಪ್ಪ ಮೊಗದಂಪೂರ್ ಇವರು ಹೇಳಿದರು.

ಭಾನುವಾರ ನಗರದ ಖಾಸಗಿ ಹೋಟೆಲ್ ನಲ್ಲಿ ಹಮ್ಮಿಕೊಳ್ಳಲಾಗಿದ್ದ ತೆರಿಗೆ ಸಲಹೆಗಾರರ ಒಂದು ದಿನದ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ದಿನಮಾನಗಳಲ್ಲಿ ಹೊಸ ತೆರಿಗೆ , **GST, Income Tax** ಬದಲಾವಣೆಗಳ ಬಗ್ಗೆ ತರಬೇತಿ ನೀಡುವುದು ಬಹಳ ಅಗತ್ಯವಾಗಿದ್ದು ನೂತನ ಬದಲಾವಣೆಗಳು ತರಬೇತಿಯಿಂದ ಅನುಕೂಲವಾಗಲಿದೆ.

ಈ ಒಂದು ದಿನದ ತರಬೇತಿಯ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಪ್ರಸ್ತುತವಾಗಿ 2025-26 ರ ಆದಾಯ ತೆರಿಗೆ ಕಾನೂನು ಬದಲಾವಣೆ ಹಾಗೂ ಕಾನೂನು ತೊಡಕುಗಳ ಪರಿಹಾರಕ್ಕಾಗಿ ಒಗ್ಗಟ್ಟಿನಿಂದ ನಿಲ್ಲಬೇಕು ಹಾಗೂ ಸಮಸ್ಯೆಗಳನ್ನು ನಿವಾರಿಸಿಕೊಳ್ಳಲು ನಿಲ್ಲಬೇಕು ಎಂದರು.

ಈ ಸಂಧರ್ಭದಲ್ಲಿ ಜಿಲ್ಲಾ ಖಜಾಂಚಿ ಪ್ರವೀಣ್ ಕುರ್ಮಾ,ಕಾರ್ಯದರ್ಶಿ ಆನಂದ್ ಜೈನ್, ಸಹ ಕಾರ್ಯದರ್ಶಿ ಅರುಣ್ ಕುಮಾರ್ ಬೋಪ್ಲೆ, ತರಬೇತುದಾರರಾದ ವಿವೇಕ್ ತೋಟ್ಲುರ್ ಕರ್, ಹೇಮಂತ್ ಬಾಲಾಜಿ ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು.

# ಜೂನ್ 18ರಂದು ಗಡಿನಾಡು ಕನ್ನಡ ಜಾಗೃತಿ ಜಾಥಾ, ರಾಜ್ಯಾಧ್ಯಕ್ಷರಾದ ಕೆ, ಆರ್, ಕುಮಾರ ಅವರಿಂದ ಚಾಲನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.15-**ಕನ್ನಡ ಶಾಲೆಗಳ ಸಂರಕ್ಷಣೆ ಕನ್ನಡ ನಾಮಫಲಗಳು ಕಡ್ಡಾಯ,ಹಾಗೂ ಗಡಿನಾಡು ಕನ್ನಡಿಗರಿಗೆ ಉದ್ಯೋಗಾವಕಾಶ ಕಲ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಗೆ ಆಗ್ರಹಿಸಿ ನಗರದಲ್ಲಿ ಜೂನ್ 18ರಂದು ಗಡಿನಾಡು ಕನ್ನಡ ಜಾಗೃತಿ ಜಾತ ಹಮ್ಮಿಕೊಳ್ಳಲಾಗಿದೆ,



ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಜಿಲ್ಲಾಧ್ಯಕ್ಷರು ಬಸವರಾಜ್ ಮರಕದಿನ್ನಿ, ಹಾಗೂ ಸಂಘಟನೆಯ ಜಿಲ್ಲಾ ಕಾರ್ಯದರ್ಶಿಗಳಾದಂತ ಹನುಮೇಶ ನಾಯಕ್ ಮೇಟಿ, ನಾಗಪ್ಪ ಜಿಲ್ಲಾ ಉಪಾಧ್ಯಕ್ಷರು ನಗರ ಘಟಕದ ಅಧ್ಯಕ್ಷರಾದ ಮಂಜುನಾಥ್ ಅವರು ಜಿಲ್ಲಾ ಸದಸ್ಯರಾದ ಅಂಬರೀಶ್ ಹಾಗೂ ಜಿಲ್ಲಾ ಮಾಧ್ಯಮ ಸಲಹೆಗಾರ ನಾಗನಗೌಡ ಹೆಗಡೆದಿನ್ನಿ ಹಾಗೂ ಸಂಘಟನೆ ಮುಖಂಡರು ತಿಳಿಸಿದ್ದಾರೆ,

ಅವರಿಂದ ನಗರದ ಪತ್ರಿಕೆ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು, ಜೂನ್ 18ರಂದು ಗುರುವಾರ ಬೆಳಗ್ಗೆ 10.30 ಕ್ಕೆ ನಗರದ ಆರ್‌ಟಿಓ ವೃತ್ತದಿಂದ ಬೃಹತ್ ಬೈಕ್ ಜಾತ ಆರಂಭವಾಗಿ ನಂತರ ಪ್ರಮುಖ ರಸ್ತೆಗಳ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಗೆ ತಲುಪಲಾಗಿದೆ ನಂತರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ವಿವಿಧ ಬೇಡಿಕೆಗಳ ನೊಳಗೊಂಡು ಮನವಿ ಪತ್ರವನ್ನು ಸಲ್ಲಿಸಲಾಗಿದ್ದು,

ರಾಜ್ಯಾಧ್ಯಕ್ಷರು ಕೆ ಆರ್ ಕುಮಾರ್ ನೇತೃತ್ವದಲ್ಲಿ ಸಂಘಟನೆಯ ರಾಜ್ಯ ಪದಾಧಿಕಾರಿಗಳು ಹಾಗೂ ಖ್ಯಾತ ಚಲನಚಿತ್ರ ನಟ ಟೆನ್ನಿಸ್ ಕೃಷ್ಣ ಅವರು ಜಾತಕದಲ್ಲಿ ಭಾಗವಹಿಸಲಿದ್ದಾರೆ,

ಇಂದು ಗಡಿನಾಡು ಪ್ರದೇಶಗಳಲ್ಲಿ ಕನ್ನಡ ಭಾಷೆ ಕನ್ನಡ ಶಾಲೆಗಳು ಹಾಗೂ ಕನ್ನಡಿಗರ ಹಕ್ಕುಗಳ ರಕ್ಷಣೆ ಅತ್ಯಂತ ಅಗತ್ಯವಾಗಿದೆ, ಕನ್ನಡ ಭಾಷೆ ಉಳಿಯುಗಾಗಿ ಸಂಘಟನೆ ನಿರಂತರ ಹೋರಾಟ, ನಡೆಯುತ್ತಿದ್ದು,ರಾಯಚೂರು ಕನ್ನಡ ಜಾತ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ,

# ಯುವಜನ ಸೇವಾ ಸಂಸ್ಥೆ ಯಾದಗಿರಿ ನಗರ ಘಟಕ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮ ಯುವಕರು ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಿ : ಸಿದ್ದಲಿಂಗರೆಡ್ಡಿ ಮುನಗಲ್

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.15-**ಸಮಾಜದ ಸಕಾರಾತ್ಮಕ ಬದಲಾವಣೆ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಯುವಶಕ್ತಿಯ ಪಾತ್ರ ಅನನ್ಯವಾಗಿದೆ. ಯುವಜನರು ಕೇವಲ ವೈಯಕ್ತಿಕ ಬೆಳವಣಿಗೆಗೆ ಸೀಮಿತವಾಗದೆ, ಸಮಾಜಕ್ಕಾಗಿ ಮಿಡಿಯುವ ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಅಖಂಡ ರಾಷ್ಟ್ರ ಯುವಜನ ಸೇವಾ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಸಿದ್ದಲಿಂಗರೆಡ್ಡಿ ಮುನಗಲ್ ಕರೆ ನೀಡಿದರು.

ನಗರದಲ್ಲಿ ಹಮ್ಮಿಕೊಂಡಿದ್ದ ಸಂಸ್ಥೆಯ ಯಾದಗಿರಿ ನಗರ ಘಟಕದ ಅಧಿಕೃತ ಉದ್ಘಾಟನೆ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸ್ವಾಮಿ ವಿವೇಕಾನಂದರ ಆಶಯದಂತೆ ಯುವಕರ ಸಂಘಟಿತ ಶಕ್ತಿಯಿಂದ ಮಾತ್ರ ಜಿಲ್ಲೆಯ ಚಿತ್ರಣ ಬದಲಿಸಲು ಸಾಧ್ಯ. ಯಾದಗಿರಿ ಜಿಲ್ಲೆ ಮತ್ತು ನಗರ ಕೇವಲ ಹಿಂದುಳಿದ ಪ್ರದೇಶವಾಗಿ ಉಳಿಯಬಾರದು ಶಿಕ್ಷಣ, ಸಾಮಾಜಿಕ ಸೇವೆ ಹಾಗೂ ಅಭಿವೃದ್ಧಿಯಲ್ಲಿ ಮುಂಚೂಣಿಗೆ ಬರಬೇಕೆಂಬುದು ನಮ್ಮ ಸಂಸ್ಥೆಯ ಮುಖ್ಯ ಹಂಬಲವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಅಖಂಡ ರಾಷ್ಟ್ರ ಯುವಜನ ಸೇವಾ ಸಂಸ್ಥೆಯ ಯಾದಗಿರಿ ನಗರ ಘಟಕದ ನೂತನ ಅಧ್ಯಕ್ಷರಾಗಿ ಭರತಗೌಡ ಹಾಗೂ ಉಪಾಧ್ಯಕ್ಷರುಗಳಾಗಿ ಆಕಾಶ್ ಮತ್ತು



ತೇಜಸ್ ಅವರನ್ನು ಅಧಿಕೃತವಾಗಿ ಆಯ್ಕೆ ಮಾಡಲಾಯಿತು.

ನೂತನವಾಗಿ ರಚನೆಯಾಗಿರುವ ನಗರ ಘಟಕದ ಆದ್ಯತೆಗಳನ್ನು ಪ್ರಸ್ತಾಪಿಸಿದ ಸಂಸ್ಥಾಪಕ ಅಧ್ಯಕ್ಷ ಸಿದ್ದಲಿಂಗರೆಡ್ಡಿ ಮುನಗಲ್ ಅವರು, ಕೇವಲ ಹೆಸರಿಗಷ್ಟೇ ಸಂಘಟನೆ ಮಾಡದೇ ತಳಮಟ್ಟದಲ್ಲಿ ಜನರ ಕಷ್ಟಗಳಿಗೆ ಸ್ಪಂದಿಸುವ ಕೆಲಸವಾಗಬೇಕು. ನಗರದ ಯುವಕರಲ್ಲಿ ನಾಯಕತ್ವ ಗುಣ ಬೆಳೆಸುವುದು, ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು ನೀಡುವುದು, ಪರಿಸರ ಸಂರಕ್ಷಣೆ, ರಕ್ತದಾನ ಶಿಬಿರಗಳ ಆಯೋಜನೆ ಹಾಗೂ ಸಾರ್ವಜನಿಕರ ಸಮಸ್ಯೆಗಳ ವಿರುದ್ಧ ಆಡಳಿತಾತ್ಮಕವಾಗಿ ಧ್ವನಿ ಎತ್ತುವುದು ನಮ್ಮ ಘಟಕದ ಪ್ರಮುಖ ಧ್ಯೇಯಗಳಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಪ್ರಮುಖ ಕಾರ್ಯಕರ್ತರಾದ ಸಾಯಿನಾಥ, ಅಂಕಿತ್, ವಿನಾಯಕ್, ಉಲ್ಲಾಸ್, ದೇವಿಂದ್ರ, ಸಂತೋಷ, ಪೂಜಾ ಚವ್ಹಾಣ, ಸುದರ್ಶನ್, ವಿನಯ ಸೇರಿದಂತೆ ಸಂಸ್ಥೆಯ ವಿವಿಧ ಘಟಕಗಳ ಪ್ರಮುಖರು, ಸಾಮಾಜಿಕ ಕಾರ್ಯಕರ್ತರು ಇದ್ದರು.

## ಯಾದಗಿರಿ: ಎಸ್‌ಐಆರ್ ವಿರೋಧಿ ಜನಜಾಗೃತಿ ಜಾಥಾಕ್ಕೆ ಚಾಲನೆ


# ಜೂ. 20ರಂದು ಬೆಂಗಳೂರಿನಲ್ಲಿ ಬೃಹತ್ ಸಮಾವೇಶ

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.15-**ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ವಿರೋಧಿಸಿ ಜೂ.20ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿರುವ ಬೃಹತ್ ಸಮಾವೇಶದ ಅಂಗವಾಗಿ, ಕಲ್ಯಾಣ ಕರ್ನಾಟಕ ಭಾಗದಿಂದ ಹೊರಡಲಿರುವ ಎಸ್ ಐಆರ್ ವಿರೋಧಿ ಜನಜಾಗೃತಿ ಜಾಥಾಕ್ಕೆ ಸೋಮವಾರ ನಗರದ ಗಾಂಧಿ ವೃತ್ತದಲ್ಲಿ ಚಾಲನೆ ನೀಡಲಾಯಿತು.

ಇದಕ್ಕೂ ಮುನ್ನ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಬಳಿಕ ಗಾಂಧಿ ವೃತ್ತದಿಂದ ಆರಂಭವಾದ ಜನಜಾಗೃತಿ ಜಾಥಾ ಪ್ರಮುಖ ನಗರಗಳ ಮೂಲಕ ಸಂಚರಿಸಿ ಸುಭಾಷ್ ವೃತ್ತದಲ್ಲಿ ಮುಕ್ತಾಯಗೊಂಡಿತು.

ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಎದ್ದೇಳು ಕರ್ನಾಟಕದ ಮುಖಂಡ ಜೆ.ಎಂ. ವೀರಸಂಗಯ್ಯ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹೆಸರಿನಲ್ಲಿ ದೇಶಾದ್ಯಂತ



ಲಕ್ಷಾಂತರ ಅರ್ಹ ಮತದಾರರ ಸಾಂವಿಧಾನಿಕ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು. ಕರ್ನಾಟಕದಲ್ಲಿ ಯಾವುದೇ ಅರ್ಹ ಮತದಾರರನ್ನು ಪಟ್ಟಿಯಿಂದ ಕೈಬಿಡದಂತೆ ಚುನಾವಣಾ ಆಯೋಗ ಕ್ರಮವಹಿಸಬೇಕು. ಇತರೆ ರಾಜ್ಯಗಳಲ್ಲಿ ಅನುಸರಿಸಲಾದ ಅವೈಜ್ಞಾನಿಕ ಮಾನದಂಡಗಳನ್ನು ರಾಜ್ಯದಲ್ಲಿ ಜಾರಿಗೆ ತರಬಾರದು ಎಂದು ಒತ್ತಾಯಿಸಿದರು.

ಮತದಾರರ ಬಳಿ ಅಗತ್ಯ ದಾಖಲೆಗಳ ಕೊರತೆ ಇದ್ದಲ್ಲಿ ರಾಜ್ಯ ಸರ್ಕಾರ ಗ್ರಾಮಸಭೆಗಳ ಮೂಲಕ ದಾಖಲೆಗಳನ್ನು ಒದಗಿಸಬೇಕು. ಸಣ್ಣಪುಟ್ಟ ಮಾಹಿತಿ ಲೋಪಗಳನ್ನು ನೆಪವನ್ನಾಗಿ ಮಾಡಿಕೊಂಡು ಮತದಾರರನ್ನು ಪಟ್ಟಿಯಿಂದ ಹೊರಗಿಡುವ ಪ್ರಯತ್ನ ನಡೆಯಬಾರದು ಎಂದು ಅವರು ಆಗ್ರಹಿಸಿದರು.

ಎದ್ದೇಳು ಕರ್ನಾಟಕ ಜಿಲ್ಲಾ ಸಂಯೋಜಕ ಮರೆಪ್ಪ ಚಟ್ಟೇರಕರ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯು ಪ್ರಜಾಪ್ರಭುತ್ವದ ಮೂಲ ಮೌಲ್ಯಗಳಿಗೆ ಧಕ್ಕೆ ತರುವ ಬೆಳವಣಿಗೆಯಾಗಿದ್ದು, ಮತದಾರರ ಹಕ್ಕುಗಳ ರಕ್ಷಣೆಗೆ ಜನರು ಸಂಘಟಿತ ಹೋರಾಟ ನಡೆಸಬೇಕಾಗಿದೆ ಎಂದು ಹೇಳಿದರು.

ಪ್ರಜಾಪ್ರಭುತ್ವ ಮತ್ತು ಸಂವಿಧಾನ ಮೌಲ್ಯಗಳ ಸಂರಕ್ಷಣೆಗೆ ಜನಾಂದೋಲನ ಅಗತ್ಯವಾಗಿದ್ದು, ಜಾಥಾ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿ ರಾಜ್ಯವ್ಯಾಪಿ ಹೋರಾಟವನ್ನು ಮತ್ತಷ್ಟು ಬಲಪಡಿಸಲಾಗುವುದು ಎಂದು ತಿಳಿಸಿದರು. ಇದೇ ಜೂ.20ರಂದು ಬೆಂಗಳೂರಿನಲ್ಲಿ ನಡೆಯಲಿರುವ ಬೃಹತ್ ಸಮಾವೇಶದಲ್ಲಿ ಜಿಲ್ಲೆಯ ಪ್ರಗತಿಪರರು, ಚಿಂತಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಸಂಘಟನೆಯ ಮುಖಂಡರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಮಾನಪ್ಪ ಕಟ್ಟಿಮನಿ, ಫಕೀರ್ ಹಮ್ದುದ್, ಭೀಮಣ್ಣ ಹೊಸಮನಿ, ಗೋಪಾಲ್ ತೆಳಗೇರಿ, ಮಾಯಾ ಎಸ್.ಆರ್. ನಾಯಕ, ದುರ್ಗೇಶ, ಮಲ್ಲಿಕಾರ್ಜುನ ಸತ್ಯೆಪೇಟಿ, ಇರ್ಫಾನ್, ವಾದ್ಮೀಯಾ, ಜುಲಾನ್, ಮೊಹಮ್ಮದ್ ಸಲೀಂ, ಸೈಯದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ...ಮೊದಲನೇ ಪುಟದಿಂದ

## ಸರಸಂಘಚಾಲಕ ಮೋಹನ್ ಭಾಗವತ್‌ಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪತ್ರ

ಬದ್ಧವಾಗಿರಬೇಕು ಎಂದು ತಿಳಿಸಿದ್ದಾರೆ. ಆರ್‌ಎಸ್‌ಎಸ್‌ನ ಅತ್ಯುನ್ನತ ನಿರ್ಧಾರ ಕೈಗೊಳ್ಳುವ ಸಂಸ್ಥೆಯಾದ ಅಖಿಲ ಭಾರತೀಯ ಪ್ರತಿನಿಧಿ ಸಭಾ ಬಿಡುಗಡೆ ಮಾಡಿರುವ 2025 – 26 ವಾರ್ಷಿಕ ವರದಿಯ ಪ್ರಕಾರ, ಕರ್ನಾಟಕದಲ್ಲಿ ಈ ಸಂಸ್ಥೆಯು ಗಣನೀಯ ಅಸ್ತಿತ್ವವನ್ನು ಹೊಂದಿದ್ದು,

4,127 ದೈನಂದಿನ ಶಾಖೆಗಳು, 1,389 ವಾರಾಂತ್ಯದ ಮಿಲನ್‌ಗಳು ಮತ್ತು 60 ಮಾಸಿಕ ಮಂಡಳಿಗಳನ್ನು ನಡೆಸುತ್ತಿದೆ. ಆ ವರದಿಯ ಪ್ರಕಾರ, ಸಂಸ್ಥೆಯು 2,194 ಸಮಾಜೋತ್ಸವಗಳನ್ನು ಆಯೋಜಿಸಿದ್ದು, ಅದರಲ್ಲಿ 19,61,158 ಜನರು ಭಾಗವಹಿಸಿದ್ದಾರೆ.

ರಾಜ್ಯಾದ್ಯಂತ ಸಾಮಾನ್ಯವಾಗಿ 2.5 ರಿಂದ 3 ಕಿಲೋಮೀಟರ್‌ಗಳಷ್ಟು ದೂರವನ್ನು ಕ್ರಮಿಸುವ 562 ಪಥಸಂಚಲನಗಳನ್ನು ಆಯೋಜಿಸಲಾಗಿದ್ದು, ಇದರಲ್ಲಿ ಗಣವೇಷಧಾರಿಗಳಾದ 2,21,963 ಕಾರ್ಯಕರ್ತರು ಪಾಲ್ಗೊಂಡಿದ್ದಾರೆ ಎಂದು ನೀವು ತಿಳಿಸಿದ್ದೀರಿ.

ಈ ಎಲ್ಲಾ ಅಂಕಿ – ಅಂಶಗಳನ್ನು ಒಟ್ಟಾಗಿ ನೋಡಿ ದಾಗ, ಕರ್ನಾಟಕದಾದ್ಯಂತ ದೈನಂದಿನ ಕೆಡರ್ ನಿರ್ಮಾಣ, ಸಾಪ್ತಾಹಿಕ ಮತ್ತು ಮಾಸಿಕ ಸಂಪರ್ಕ ಕಾರ್ಯಕ್ರಮಗಳು, ಬೃಹತ್ ಸಾರ್ವಜನಿಕ ಕಾರ್ಯಕ್ರಮಗಳು ಮತ್ತು ಗಣವೇಷಧಾರಿ ಪಥಸಂಚಲನಗಳ ಮೂಲಕ ಕಾರ್ಯನಿರ್ವಹಿ ಸುತ್ತಿರುವ ಒಂದು ಬೃಹತ್, ಶಿಸ್ತುಬದ್ಧ ಹಾಗೂ ಆಳವಾಗಿ ಬೇರೂರಿರುವ ಜಾಲವು ಸ್ಪಷ್ಟವಾಗಿ ಗೋಚರಿಸುತ್ತದೆ ಎಂದು ವಿವರಿಸಿದ್ದಾರೆ.

ಇಷ್ಟೊಂದು ವ್ಯಾಪಕವಾದ ಸಾಂಸ್ಥಿಕ ಅಸ್ತಿತ್ವವನ್ನು, ವಿಶೇಷವಾಗಿ ಅದು ನಿಯಮಿತ ಸಾರ್ವಜನಿಕ ಸಜ್ಜುಗೊಳಿಸುವಿಕೆ, ಗಣವೇಷಧಾರಿ ಪಥಸಂಚಲನಗಳು ಮತ್ತು ದೊಡ್ಡ ಮಟ್ಟದ ಸಾಮಾಜಿಕ ಸಂಪರ್ಕ ಕಾರ್ಯಕ್ರಮಗಳನ್ನು ಒಳಗೊಂಡಿರುವಾಗ, ಕೇವಲ ಒಂದು ಖಾಸಗಿ ಅಥವಾ ಅನೌಪಚಾರಿಕ ವ್ಯವಸ್ಥೆ ಎಂದು ಪರಿಗಣಿಸಲು ಸಾಧ್ಯವಿಲ್ಲ. ಇದು ಕಾನೂನುಬದ್ಧ ಸ್ಥಾನಮಾನ, ಜವಾಬ್ದಾರಿ, ಹಣಕಾಸಿನ ಪಾರದರ್ಶಕತೆ, ಸಾರ್ವಜನಿಕ ಸುವ್ಯವಸ್ಥೆ, ಅನುಮತಿಗಳು, ಧನಸಹಾಯದ ಮೂಲಗಳು ಹಾಗೂ ಭಾರತದ ಸಂವಿಧಾನ ಮತ್ತು ಕಾನೂನುಗಳ ಪಾಲನೆಗೆ ಸಂಬಂಧಿಸಿದಂತೆ ಕಾನೂನುಬದ್ಧ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

ಆದ್ದರಿಂದ, ಇಷ್ಟು ದೊಡ್ಡ ಪ್ರಮಾಣದ ಸಂಘಟನೆಯು ಯಾವುದೇ ಔಪಚಾರಿಕ ನೋಂದಣಿ ಇಲ್ಲದೇ ಅಥವಾ ಅನ್ವಯವಾಗುವ ಕಾನೂನುಗಳ ಅಡಿಯಲ್ಲಿ ಕಾನೂನುಬದ್ಧ ಸಂಸ್ಥೆ ಅಥವಾ ವ್ಯಕ್ತಿಗಳ ಮಂಡಳಿ ಎಂದು ನೋಂದಾಯಿಸಿಕೊಳ್ಳದೆ, ಅನಾಮಧೇಯವಾಗಿ ಕಾರ್ಯನಿರ್ವಹಿಸುತ್ತಿರುವುದಕ್ಕೆ ಇರುವ ಕಾನೂನು ಆಧಾರಗಳನ್ನು ವಿವರಿಸಲು ತನ್ನ ಅಧಿಕೃತ ಪದಾಧಿಕಾರಿಗಳನ್ನು ನಿಯೋಜಿಸಬೇಕಾಗಿ ನಾವು ಆರ್‌ಎಸ್‌ಎಸ್ ಅನ್ನು ಕೋರುತ್ತೇನೆ ಎಂದು ಪತ್ರದಲ್ಲಿ ಒತ್ತಾಯಿಸಿದ್ದಾರೆ. ಆರ್‌ಎಸ್‌ಎಸ್ ತನ್ನ ಶತಮಾನೋತ್ಸವದ ಈ ಸಂದರ್ಭವನ್ನು ಕೇವಲ ಆಚರಣೆಗಾಗಿ ಮಾತ್ರವಲ್ಲ, ಸಾಂವಿಧಾನಿಕ ಆತ್ಮಾವಲೋಕನಕ್ಕಾಗಿಯೂ ಬಳಸಿಕೊಳ್ಳಬೇಕೆಂದು ನಾವು ಆಗ್ರಹಿಸುತ್ತೇವೆ. ಭಾರತದ ಈ ನೂರನೇ ವರ್ಷದಲ್ಲಿ ದೇಶಕ್ಕೆ ಆರ್‌ಎಸ್‌ಎಸ್ ನೀಡಬಹುದಾದ ಅತ್ಯುತ್ತಮ ಗೌರವವೆಂದರೆ, ತನ್ನನ್ನು ತಾನು ನೋಂದಾಯಿಸಿಕೊಳ್ಳುವುದು, ತನ್ನ ಚಟುವಟಿಕೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಬಹಿರಂಗಪಡಿಸುವುದು, ಅನ್ವಯವಾಗುವ ಎಲ್ಲ ತೆರಿಗೆಗಳನ್ನು ಪಾವತಿಸುವುದು ಮತ್ತು ಭಾರತೀಯ ಕಾನೂನಿನ ಚೌಕಟ್ಟಿನೊಳಗೆ ಪಾರದರ್ಶಕ ಹಾಗೂ ಜವಾಬ್ದಾರಿಯುತ ಸಂಘಟನೆಯಾಗಿ ಕಾರ್ಯನಿರ್ವಹಿಸುವುದು ಎಂದಿದ್ದಾರೆ. ಒಂದು ಸಾಂವಿಧಾನಿಕ ಪ್ರಜಾಪ್ರಭುತ್ವದಲ್ಲಿ, ಯಾವುದೇ ಸಂಸ್ಥೆಯು ಎಷ್ಟೇ ಹಳೆಯದಾಗಿದ್ದರೂ, ದೊಡ್ಡದಾಗಿದ್ದರೂ ಅಥವಾ ಪ್ರಭಾವಶಾಲಿಯಾಗಿದ್ದರೂ ತನಿಖೆ ಅಥವಾ ಪರಿಶೀಲನೆಯಿಂದ ಹೊರಗುಳಿಯಲು ಸಾಧ್ಯವಿಲ್ಲ. ಸಾರ್ವಜನಿಕ ಜೀವನದಲ್ಲಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬ ಪ್ರಜೆಯೂ, ಸಂಘಟನೆಯೂ, ಸಂಸ್ಥೆಯೂ ಮತ್ತು ಮಂಡಳಿಯೂ ಕಾನೂನನ್ನು ಪಾಲಿಸಬೇಕೆಂದು ನಿರೀಕ್ಷಿಸಲಾಗುತ್ತದೆ. ಭಾರತದಲ್ಲಿ, ಒಬ್ಬ ಸಫಾಯಿ ಕರ್ಮಚಾರಿಯೂ ಸಹ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ನೋಂದಾಯಿಸಿಕೊಳ್ಳಬೇಕಾಗುತ್ತದೆ. ಪ್ರತಿಯೊಂದು ಧಾರ್ಮಿಕ ಸಂಸ್ಥೆ ಮತ್ತು ಧಾರ್ಮಿಕ ಟ್ರಸ್ಟ್‌ಗಳನ್ನು ಆಡಿಟ್ (ಲೆಕ್ಕಪರಿಶೋಧನೆ) ಮಾಡಲಾಗುತ್ತದೆ. ದತ್ತಿ ಸಂಸ್ಥೆಗಳು, ಎನ್‌ಜಿಒಗಳು (ಸ್ವಯಂಸೇವಾ ಸಂಸ್ಥೆಗಳು), ಟ್ರಸ್ಟ್‌ಗಳು, ಸೊಸೈಟಿಗಳು, ಕಂಪನಿಗಳು ಮತ್ತು ಇತರ ಸಂಸ್ಥೆಗಳು ತಮ್ಮ ರಚನೆ, ಚಟುವಟಿಕೆಗಳು, ಹಣಕಾಸು ಮತ್ತು ಆದಾಯದ ಮೂಲಗಳನ್ನು ಬಹಿರಂಗಪಡಿಸಬೇಕಾಗುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

8 ಅಂಶಗಳ ಬಗ್ಗೆ ಮಾಹಿತಿ ಬಹಿರಂಗಕ್ಕೆ ಆಗ್ರಹ: ಆರ್‌ಎಸ್‌ಎಸ್ ಕೂಡ ಮುಂದೆ ಬಂದು ಈ ಕೆಳಗಿನ ಮಾಹಿತಿಯನ್ನು ಸಾರ್ವಜನಿಕವಾಗಿ ಲಭ್ಯವಾಗುವಂತೆ ಮಾಡುವುದು ನ್ಯಾಯಸಮ್ಮತ ಮತ್ತು ಅಗತ್ಯವಾಗಿದೆ ಎಂದು ಆಗ್ರಹಿಸಿದ್ದಾರೆ. ರಾಷ್ಟ್ರೀಯತೆ, ಶಿಸ್ತು ಮತ್ತು ಕರ್ತವ್ಯದ ಬಗ್ಗೆ ನಿಯಮಿತವಾಗಿ ಮಾತನಾಡುವ ಸಂಘಟನೆಯು, ಪಾರದರ್ಶಕತೆ, ಕಾನೂನು ಪಾಲನೆ ಮತ್ತು ಭಾರತದ ಸಂವಿಧಾನಕ್ಕೆ ಗೌರವ ನೀಡುವ ಮೂಲಕ ಈ ಮೌಲ್ಯಗಳನ್ನು ಪ್ರದರ್ಶಿಸಬೇಕಾದುದು ಅತ್ಯಗತ್ಯ. ಮೇಲಿನ ವಿಷಯಗಳ ಕುರಿತು ಚರ್ಚಿಸಲು ನಿಮ್ಮ ಅಧಿಕೃತ ಪದಾಧಿಕಾರಿಗಳನ್ನು ನಿಯೋಜಿಸಿ ಮತ್ತು ನಿಮ್ಮಿಂದ ಅಧಿಕೃತ ಪ್ರತಿಕ್ರಿಯೆಯನ್ನು ನಾವು ಎದುರು ನೋಡುತ್ತಿದ್ದೇವೆ ಎಂದು ಪತ್ರದಲ್ಲಿ ಆಗ್ರಹಿಸಿದ್ದಾರೆ.

## ನೀರಿಲ್ಲದೇ ಒಣಗಿದೆ ಎಂಬ ಕಾರಣಕ್ಕೆ ಕೆರೆ ಆವರಣದಲ್ಲಿ ಗಣಿಗಾರಿಕೆಗೆ ಅವಕಾಶ ನೀಡಲಾಗದು: ಹೈಕೋರ್ಟ್

ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದ್ದು, ಪರವಾನಗಿ ನವೀಕರಣಕ್ಕೆ ನಿರಾಕರಿಸಿದ್ದ ಸರ್ಕಾರದ ಕ್ರಮವನ್ನು ಎತ್ತಿಹಿಡಿದಿದೆ. ಅಲ್ಲದೇ, ಈ ಕೆರೆಯು 1967-68ರಿಂದ ನೀರನ್ನು ಪಡೆದಿಲ್ಲ ಮತ್ತು ಸಂಪೂರ್ಣವಾಗಿ ಒಣಗಿ ಹೋಗಿದೆ ಎಂಬ ಅರ್ಜಿದಾರರ ವಾದವನ್ನು ತಿರಸ್ಕರಿಸಿರುವ ನ್ಯಾಯಪೀಠ, ಮಳೆಗಾಲದಲ್ಲಿ ಕನಿಷ್ಠ ಎರಡು ತಿಂಗಳ ಕಾಲ ಅಲ್ಲಿ ನೀರು ನಿಲ್ಲುತ್ತದೆ ಎಂಬುದು ದಾಖಲೆಗಳಿಂದ ತಿಳಿದುಬಂದಿದೆ. ಹೀಗಾಗಿ ಕೆರೆ ಪ್ರದೇಶದಲ್ಲಿ ಗಣಿಗಾರಿಕೆಗೆ ಅನುಮತಿ ನೀಡದಿರುವ ಕಂದಾಯ ಅಧಿಕಾರಿಗಳ ಕ್ರಮದಲ್ಲಿ ಯಾವುದೇ ಕಾನೂನಿನ ದೋಷವಿಲ್ಲ ಎಂದು ತಿಳಿಸಿದೆ.

2016 ಮತ್ತು 2023ರ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳ ತಿದ್ದುಪಡಿಯ ಪ್ರಕಾರ ಗುತ್ತಿಗೆ ಅವಧಿಯನ್ನು 50 ಇಲ್ಲವೇ, 30 ವರ್ಷಗಳಿಗೆ ಸ್ವಯಂಚಾಲಿತವಾಗಿ ವಿಸ್ತರಿಸಲು ಅವಕಾಶವಿದೆ. ಆದರೆ, ಈ ಅಂಶ ಚಾಲ್ತಿಯಲ್ಲಿರುವ ಗುತ್ತಿಗೆಗಳಿಗೆ ಮಾತ್ರ ಅನ್ವಯಿಸಲಿದ್ದು, ಅವಧಿ ಮುಗಿದು ಹೋಗಿರುವ(ಅವಧಿ ಮೀರಿದ) ಗುತ್ತಿಗೆಗಳನ್ನು ಈ ತಿದ್ದುಪಡಿಗಳ ಮೂಲಕ ಪುನರುಜ್ಜೀವನಗೊಳಿಸಲು ಸಾಧ್ಯವಿಲ್ಲ ಎಂದು ಪೀಠ ಹೇಳಿದೆ.

ಮೂಲ ನಿಯಮಗಳ ಪ್ರಕಾರ ಗುತ್ತಿಗೆ ಅವಧಿ ಮುಗಿಯುವ 90 ದಿನಗಳ ಮುಂಚಿತವಾಗಿ ನವೀಕರಣಕ್ಕೆ ಅರ್ಜಿ ಸಲ್ಲಿಸಬೇಕಿತ್ತು. ಆದರೆ ಅರ್ಜಿದಾರರ ಅತ್ತೆ ಲೋಕಮ್ಮ(ಮೂಲ ಗುತ್ತಿಗೆದಾರರ ಪತ್ನಿ) ಅವರು ಗುತ್ತಿಗೆ ಅವಧಿ ಮುಗಿದ ನಂತರ ಅರ್ಜಿ ಸಲ್ಲಿಸಿದ್ದರಿಂದ, ಕಾಲಮಿತಿ ಮೀರಿದ ಅರ್ಜಿಯನ್ನು ಪುನಃ ನವೀಕರಿಸುವ ಅಧಿಕಾರ ಇಲಾಖೆಗೆ ಇಲ್ಲ ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ. ಅರ್ಜಿದಾರರು ಮೂಲ ಗುತ್ತಿಗೆದಾರರ ನಿಧನದ ನಂತರ ತಮ್ಮ ಹೆಸರಿಗೆ ಗುತ್ತಿಗೆಯನ್ನು ವರ್ಗಾವಣೆ ಮಾಡಿಕೊಳ್ಳಲು ಯಾವುದೇ ಅರ್ಜಿಯನ್ನೂ ಸಲ್ಲಿಸಿರಲಿಲ್ಲ. ಹೀಗಾಗಿ ಅರ್ಜಿದಾರರಿಗೆ ಪರಿಹಾರ ಪಡೆಯುವುಕ್ಕೆ ಅವಕಾಶವಿಲ್ಲ ಎಂದು ತಿಳಿಸಿದ ಕೋರ್ಟ್, ಅರ್ಜಿಯನ್ನು ವಜಾಗೊಳಿಸಿದೆ.

ಪ್ರಕರಣದ ಹಿನ್ನೆಲೆ: ತುಮಕೂರು ಜಿಲ್ಲೆ ಸಿರಾ ತಾಲೂಕಿನ ಮದ್ದಕ್ಕನಹಳ್ಳಿ ಗ್ರಾಮದ ಬಿ.ಗಂಗಣ್ಣ ಎಂಬವರಿಗೆ ಗಣಿಗಾರಿಕೆ ಗುತ್ತಿಗೆ ನೀಡಲಾಗಿತ್ತು. ಈ ನಡುವೆ ಗ್ರಾಮದ ಕೆಲವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿ, ಗುತ್ತಿಗೆ ನೀಡಿರುವ ಸ್ಥಳ ಗ್ರಾಮದ ಕೆರೆಯ ಆವರಣದಲ್ಲಿದೆ. ಗಣಿಗಾರಿಕೆ ಚಟುವಟಿಕೆಗಳನ್ನು ನಡೆಸಿದಲ್ಲಿ ಕೆರೆಗೆ ಹಾನಿಯಾಗಲಿದೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಲಿದೆ. ಹೀಗಾಗಿ ಗುತ್ತಿಗೆ ರದ್ದು ಮಾಡಬೇಕು ಎಂದು ಕೋರಿದ್ದರು.

ಅರ್ಜಿಯ ವಿಚಾರಣೆ ನಡೆಸಿದ್ದ ನ್ಯಾಯಪೀಠ, ಗ್ರಾಮದ ಕರೆ ಸುತ್ತಲಿನ ಪ್ರದೇಶದಲ್ಲಿ ಗಣಿಗಾರಿಕೆ ಚಟುವಟಿಕೆಗಳನ್ನು ನಡೆಸುವುದರಿಂದ, ಅದಕ್ಕೆ ಹಾನಿಯಾಗುತ್ತದೆ ಎಂಬ ವಾದವನ್ನು ಒಪ್ಪಿಕೊಂಡು ಗಣಿಗಾರಿಕೆ ಗುತ್ತಿಗೆಯನ್ನು ರದ್ದುಗೊಳಿಸಿತ್ತು. ಇದನ್ನು ಪ್ರಶ್ನಿಸಿ ಗಂಗಣ್ಣ ಮತ್ತವರ ಮಗ ಬಿ.ಜಿ.ರಾಮದಾಸ್ ಮೇಲ್ಮನವಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯ ಸಂಬಂಧ ಕೆರೆಗೆ ಹಾನಿಯಾಗಲಿದೆಯೇ ಎಂಬುದನ್ನು ಪತ್ತೆಹಚ್ಚಲು ಸಣ್ಣ ನೀರಾವರಿ ಇಲಾಖೆ ಅಧಿಕಾರಿಯನ್ನು ಕೋರ್ಟ್ ಕಮಿಷನರನ್ನಾಗಿ ನೇಮಕ ಮಾಡಿ, ವರದಿಯನ್ನು ಪಡೆದುಕೊಂಡಿತ್ತು. ವರದಿಯ ಆಧಾರದಲ್ಲಿ ಗಣಿಗಾರಿಕೆಗೆ ಹೊಸದಾಗಿ ಅರ್ಜಿ ಸಲ್ಲಿಸಲು ಸೂಚನೆ ನೀಡಿ, ಕಾನೂನು ಪ್ರಕಾರ ಅನುಮತಿ ನೀಡಲು ಸಕ್ಷಮ ಪ್ರಾಧಿಕಾರಕ್ಕೆ ನಿರ್ದೇಶನ ನೀಡಿತ್ತು.ಅದರಂತೆ ಗಣಿ ಇಲಾಖೆ 1996ರಲ್ಲಿ ಐದು ವರ್ಷಗಳ ಅವಧಿಗೆ ಗಣಿ ಗುತ್ತಿಗೆ ನೀಡಿತ್ತು. ಇದರ ಅವಧಿಯು 2001ರ ಸೆಪ್ಟೆಂಬರ್ 27ಕ್ಕೆ ಮುಕ್ತಾಯಗೊಂಡಿತ್ತು. ಗಂಗಣ್ಣ ಅವರ ನಿಧನದ ನಂತರ ಅವರ ಪತ್ನಿ ಲೋಕಮ್ಮ ಅವರು ಕಾಲಾವಧಿ ಮೀರಿದ ಬಳಿಕ ಅಂದರೆ 2003ರಲ್ಲಿ ಗುತ್ತಿಗೆ ನವೀಕರಣಕ್ಕಾಗಿ ಅರ್ಜಿ ಸಲ್ಲಿಸಿದ್ದರು. ಆದರೆ, ನವೀಕರಣ ಪ್ರಕ್ರಿಯೆ ಪೂರ್ಣಗೊಳ್ಳುವ ವೇಳೆ 2016ರಲ್ಲಿ ಲೋಕಮ್ಮ ಕೂಡ ನಿಧನರಾಗಿದ್ದರು. ತದನಂತರ ಅವರ ವಾರಸುದಾರರಾದ ಅನುಸೂಯಮ್ಮ ಮತ್ತು ಮಾರುತಿ ಪ್ರಸಾದ್ ಅವರು ನಿಯಮಾವಳಿಗಳ ತಿದ್ದುಪಡಿ ಅನ್ವಯ 30 ವರ್ಷಗಳ ಅವಧಿಗೆ ಗುತ್ತಿಗೆಯನ್ನು ವಿಸ್ತರಿಸಬೇಕು ಎಂದು ಕೋರಿದ್ದರು.

## ಗೆದ್ದು ಅಧಿಕಾರಕ್ಕೆ ಬಂದ ನಂತರವೂ ಮುಂದುವರಿಯಲಿದೆ: ಸಿದ್ದರಾಮಯ್ಯ

ವಿರೋಧಿ ಪಕ್ಷ. ಅದು ಗ್ಯಾರಂಟಿ ಯೋಜನೆಗಳನ್ನು ಮೊದಲ ದಿನದಿಂದಲೇ ವಿರೋಧಿಸುತ್ತಾ ಬಂದಿದೆ. ಮೊದಲು ಗ್ಯಾರಂಟಿ ಯೋಜನೆಗಳ ಜಾರಿಯೇ ಅಸಾಧ್ಯ ಎಂದರು. ನಂತರದ ದಿನಗಳಲ್ಲಿ ಹಣಕಾಸಿನ ಕೊರತೆಯಿಂದ ಸರ್ಕಾರ ದಿವಾಳಿಯಾಗಲಿದೆ ಎಂದರು. ಈಗ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಾಗುವುದು ಎನ್ನುವ ಪುಕಾರು ಹಬ್ಬಿಸುತ್ತಿದ್ದಾರೆ. ಇದು ಅವರ ರಾಜಕೀಯ ಹತಾಶೆಯ ಪ್ರತೀಕ ಎಂದು ಟೀಕಿಸಿದ್ದಾರೆ. ಮುಖ್ಯಮಂತ್ರಿಯಾಗಿ ಐದು ಯೋಜನೆಗಳನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಗೆ ತಂದಿದ್ದಲ್ಲದೆ, ಇದರಿಂದಾಗಿ ರಾಜ್ಯದ ಆರ್ಥಿಕತೆ ಮೇಲೆ ಏನೂ ದುಷ್ಪರಿಣಾಮ ಬೀರದಂತೆ ನೋಡಿಕೊಂಡಿದ್ದೇನೆ. ಇಂದು ಕರ್ನಾಟಕ ರಾಜ್ಯವು ತಲಾವಾರು ಆದಾಯದಲ್ಲಿ ದೇಶಕ್ಕೇ ಮೊದಲನೇ ಸ್ಥಾನದಲ್ಲಿದೆ, ಜಿಎಸ್‌ಟಿ ಸಂಗ್ರಹದಲ್ಲಿ ಮಹಾರಾಷ್ಟ್ರದ ನಂತರದ ಎರಡನೇ ರಾಜ್ಯ ಕರ್ನಾಟಕ. ಖಜಾನೆ ಖಾಲಿಯಾಗಿದ್ದರೆ, ಸರ್ಕಾರ ದಿವಾಳಿ ಸ್ಥಿತಿಯಲ್ಲಿದ್ದರೆ ಈ ಸಾಧನೆ ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.ನಮ್ಮ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಾ ಬಂದಿರುವ ಬಿಜೆಪಿ, ಅದೇ ಯೋಜನೆಗಳನ್ನು ಮಧ್ಯಪ್ರದೇಶ, ಬಿಹಾರ, ಪಶ್ಚಿಮ ಬಂಗಾಳ ರಾಜ್ಯಗಳಲ್ಲಿ ನಕಲು ಹೊಡೆದು ಅಧಿಕಾರಕ್ಕೆ ಬಂದಿದೆ. ಇವರಿಗೆ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುವ ಯಾವ ನೈತಿಕತೆ ಇದೆ? ಕೆಲವು ರಾಜ್ಯಗಳ ಚುನಾವಣಾ ಪೂರ್ವದಲ್ಲಿ ಬಿಜೆಪಿ ಗ್ಯಾರಂಟಿ ಯೋಜನೆಗಳ ಆಶ್ವಾಸನೆ ನೀಡಿದರೂ ಅವುಗಳನ್ನು ಸಂಪೂರ್ಣವಾಗಿ ಜಾರಿಗೆ ತರಲು ಸಾಧ್ಯವಾಗುತ್ತಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ. ಈ ಯೋಜನೆಗಳು ನಿಜವಾದ ಅರ್ಹರಿಗೆ ಸಿಗಬೇಕು, ಅದು ಅನರ್ಹರ ಪಾಲಾದಾಗ ಅದನ್ನು ತಡೆಗಟ್ಟುವುದು ಚುನಾಯಿತ ಸರ್ಕಾರದ ಕರ್ತವ್ಯವಾಗಿದೆ. ನಮ್ಮ ಜನರು ಕೂಡಾ ಈ ಬಗ್ಗೆ ಯೋಚನೆ ಮಾಡಬೇಕಾಗಿದೆ. ದುರಾಸೆಗೆ ಬಲಿಬಿದ್ದು ಸರ್ಕಾರಕ್ಕೆ ಮೋಸ ಮಾಡಿ ಗ್ಯಾರಂಟಿ ಯೋಜನೆಗಳ ಲಾಭ ತೆಗೆದುಕೊಳ್ಳುವುದು ಕಾನೂನಿನ ಉಲ್ಲಂಘನೆ ಮಾತ್ರವಲ್ಲ, ರಾಜ್ಯದ ಜನತೆಗೆ ಬಗೆಯುವ ದ್ರೋಹವಾಗಿದೆ. ಇಂತಹ ವಿಷಯದಲ್ಲಿ ವಿಪಕ್ಷಗಳು ರಾಜಕೀಯ ಲಾಭಕ್ಕಾಗಿ ಅಪಪ್ರಚಾರ ಮಾಡಲು ಹೋಗದೆ, ಅರ್ಹರಿಗೆ ಯೋಜನೆಗಳನ್ನು ತಲುಪಿಸಲು ಸರ್ಕಾರಕ್ಕೆ ನೆರವಾಗಬೇಕು ಎಂದು ಒತ್ತಾಯಿಸಿದ್ದಾರೆ.

# ಹಾಸನ: ನಿಯಂತ್ರಣ ತಪ್ಪಿ ನಿಲ್ದಾಣದ ಪ್ಲಾಟ್ ಫಾರಂಗೆ ನುಗ್ಗಿದ ಸಾರಿಗೆ ಬಸ್-ಪ್ರಯಾಣಿಕನ ಕೈ ಕಟ್

**ಹಾಸನ,ಜೂ.15-**ಚಾಲಕನ ನಿಯಂತ್ರಣ ತಪ್ಪಿದ ಸಾರಿಗೆ ಬಸ್ ಪ್ರಯಾಣಿಕನಿಗೆ ಡಿಕ್ಕಿಯಾದ ಪರಿಣಾಮ ಆತನ ಕೈ ಕಟ್ ಆಗಿರುವ ಘಟನೆ ಚನ್ನಪಟ್ಟಣದ ಸಾರಿಗೆ ಬಸ್ ನಿಲ್ದಾಣದಲ್ಲಿ ನಡೆದಿದೆ.






ಬೆಂಗಳೂರಿನಿಂದ ಧರ್ಮಸ್ಥಳದ ಕಡೆಗೆ ಹೋಗಬೇಕಿದ್ದ ಬಸ್ ತನ್ನ ನಿಲ್ದಾಣದ ಪ್ಲಾಟ್ ಫಾರಂಗೆ ಬರುವ ವೇಳೆ ನಿಯಂತ್ರಣ ತಪ್ಪಿ ನಿಲ್ದಾಣದ ಒಳಗೆ ಬಂದು ಗುದ್ದಿದೆ. ಈ ವೇಳೆ ಅಲ್ಲೇ ನಿಂತಿದ್ದ ಪ್ರಯಾಣಿಕನಿಗೆ ಗಂಭೀರ ಗಾಯಗಳಾಗಿದ್ದು, ಅವರ ಸಂಪೂರ್ಣ ಎಡಗೈ ಕಟ್ ಆಗಿದೆ. ಗಾಯಾಳುವನ್ನು ಹಾಸನದ ಜಯಚಾಮರಾಜೇಂದ್ರ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

ಚಿಕ್ಕಮಗಳೂರು ಮೂಲದ ವ್ಯಕ್ತಿ: ಗಾಯಾಳುವನ್ನು ಚಿಕ್ಕಮಗಳೂರು ಮೂಲದ ಮಂಜುನಾಥ್ ಎಂದು ಗುರುತಿಸಲಾಗಿದೆ. ಅವರು ಚಿಕ್ಕಮಗಳೂರಿಗೆ ತೆರಳಲು ಬಸ್ ನಿಲ್ದಾಣದಲ್ಲಿ ಕಾಯುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ.

ಮಾಹಿತಿಯ ಪ್ರಕಾರ ಬೆಂಗಳೂರಿನಿಂದ ಧರ್ಮಸ್ಥಳಕ್ಕೆ ತೆರಳುತ್ತಿದ್ದ ಕೆಎ-21 ಎಫ್-0151 ಸಂಖ್ಯೆಯ ಪುತ್ತೂರು ವಿಭಾಗದ ಸಾರಿಗೆ ಬಸ್‌ನ್ನು ಚಾಲಕ ಅತಿವೇಗ ಹಾಗೂ ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

ಚಾಲಕನ ವಿರುದ್ಧ ಆಕ್ರೋಶ: ಘಟನೆಯ ಬಳಿಕ ಬಸ್ ಚಾಲಕನ ವಿರುದ್ಧ ಪ್ರಯಾಣಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಬೆಂಗಳೂರಿನಿಂದ ಕೂಡ ಅತಿ ವೇಗ ಮತ್ತು ಅಜಾಗರೂಕತೆಯಿಂದಲೇ ಚಾಲನೆ ಮಾಡಿಕೊಂಡು ಬರುತ್ತಿದ್ದರು ಎಂಬುದನ್ನು ಸ್ಥಳಕ್ಕೆ ಬಂದ ಪೊಲೀಸರ ಸಮ್ಮುಖದಲ್ಲಿ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕರು ಆರೋಪ ಮಾಡಿದ್ದಾರೆ. ಘಟನೆಯ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸರಿಯಾಗಿದ್ದು, ಇದರ ಆಧಾರದ ಮೇಲೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ.

ಪ್ರಕರಣ ದಾಖಲು: ಸ್ಥಳಕ್ಕೆ ಹಾಸನದ ಕೆಆರ್ ಪುರಂ ಬಡಾವಣೆ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ರಾತ್ರಿ ವೇಳೆ ಸಂಭವಿಸಿದ ಪರಿಣಾಮ ಪ್ರಯಾಣಿಕರು ಕಡಿಮೆ ಸಂಖ್ಯೆಯಲ್ಲಿದ್ದರಿಂದ ಉಳಿದ ಮೂರು ನಾಲ್ಕು ಮಂದಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ.

# ಕಡಿಮೆ ವೆಚ್ಚದಲ್ಲಿ ವಿದ್ಯುತ್ ಪ್ರಸರಣ ಸಾಮರ್ಥ್ಯ ಶೇ.25 ರಷ್ಟು ಹೆಚ್ಚಳದ ಗುರಿ: ಕೆಪಿಟಿಸಿಎಲ್ ನಿಂದ ಪ್ರಾಯೋಗಿಕವಾಗಿ ಹೊಸ ತಂತ್ರಜ್ಞಾನದ ಅಳವಡಿಕೆ

**ಬೆಂಗಳೂರು,ಜೂ.15-**ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ರಾಜ್ಯದ ವಿದ್ಯುತ್ ಪ್ರಸರಣ ಜಾಲದ ಆಧುನೀಕರಣ ದತ್ತ ಮಹತ್ವದ ಹೆಜ್ಜೆಯನ್ನಿಟ್ಟಿದೆ. ಶೂನ್ಯ ವೆಚ್ಚದಲ್ಲಿ ರಾಜ್ಯದ ವಿದ್ಯುತ್ ಪ್ರಸರಣ ಸಾಮರ್ಥ್ಯವನ್ನು ಶೇಕಡಾ 25ರಷ್ಟು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆಗೆ ಮುಂದಾಗಿದೆ. ಬೆಂಗಳೂರು ನಗರದ ಪುಟ್ಟೇನಹಳ್ಳಿ – ಸಹಕಾರ ನಗರ 220 ಕೆವಿ ವಿದ್ಯುತ್ ಪ್ರಸರಣ ಮಾರ್ಗದಲ್ಲಿ ಡೈನಾಮಿಕ್ ಲೈನ್ ರೇಟಿಂಗ್ (ಡಿಎಲ್‌ಆರ್) ಪ್ರಾಯೋಗಿಕ ಯೋಜನೆ ಆಳವಡಿಕೆ ಆರಂಭಿಸಿದೆ.

ಈ ಯೋಜನೆಯ ಅನುಷ್ಠಾನಕ್ಕೆ ಕಾರ್ಯಾದೇಶ ಪತ್ರವನ್ನು 'ನೀಡಲಾಗಿದೆ. ಈ ಮೂಲಕ ಇಂತಹ ಅತ್ಯಾಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುತ್ತಿರುವ ದಕ್ಷಿಣ ಭಾರತದ ಮೊದಲ ರಾಜ್ಯ ವಿದ್ಯುತ್ ಪ್ರಸರಣ ನಿಗಮವಾಗಿ ಹೊರ ಹೊಮ್ಮಿದೆ.

ಈ ಹೊಸ ತಂತ್ರಜ್ಞಾನದ ಮೂಲಕ, ಯಾವುದೇ ಹೆಚ್ಚುವರಿ ಟವರ್‌ಗಳ ನಿರ್ಮಾಣ ಅಥವಾ ಹೊಸ ಭೂ ಸ್ವಾಧೀನದ ಅಗತ್ಯವಿಲ್ಲದೇ, ಅಸ್ತಿತ್ವದಲ್ಲಿರುವ ಮೂಲಸೌಕರ್ಯದ ವಿದ್ಯುತ್ ಪ್ರಸರಣ ಸಾಮರ್ಥ್ಯವನ್ನು ಶೇಕಡಾ 25 ರಷ್ಟು ಹೆಚ್ಚಿಸುವ ಗುರಿಯನ್ನು ನಿಗಮ ಹೊಂದಿದೆ.

ಈ ಯೋಜನೆಯು ಪ್ರಸ್ತುತ ಜಾರಿಯಲ್ಲಿರುವ ಸಾಂಪ್ರದಾಯಿಕ 'ಸ್ಟಾಟಿಕ್ ಲೈನ್ ರೇಟಿಂಗ್' ವಿಧಾನದ ಬದಲಿಗೆ, ಐಒಟಿ ಸಂವೇದಕಗಳನ್ನು ಬಳಸುತ್ತದೆ. ಈ ಸಂವೇದಕಗಳು ತಾಪಮಾನ, ಗಾಳಿಯ ವೇಗ, ಸೌರ ವಿಕಿರಣ ಮತ್ತು ವಿದ್ಯುತ್ ತಂತಿಯ ಸ್ಥಿತಿಗತಿಯನ್ನು ನೈಜ ಸಮಯದಲ್ಲಿ ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತವೆ. ಈ ದತ್ತಾಂಶವು, ಹವಾಮಾನ ಪರಿಸ್ಥಿತಿಗನುಗುಣವಾಗಿ ವಿದ್ಯುತ್ ಹರಿವನ್ನು ಹೆಚ್ಚಿಸಲು ಗ್ರಿಡ್ ನಿರ್ವಾಹಕರಿಗೆ ಸಹಾಯ ಮಾಡುತ್ತದೆ. ರಾಜ್ಯದಲ್ಲಿನ ನಗರೀಕರಣ, ಎಲೆಕ್ಟ್ರಿಕ್ ವಾಹನಗಳ ಹೆಚ್ಚಳ, ಡೇಟಾ ಸೆಂಟರ್‌ಗಳು ಮತ್ತು ಎಐ – ಚಾಲಿತ ಕೈಗಾರಿಕೆಗಳಿಂದ ವಿದ್ಯುತ್ ಬೇಡಿಕೆ ತೀವ್ರವಾಗಿ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಈ ತಂತ್ರಜ್ಞಾನ ಅತ್ಯಂತ ಉಪಯುಕ್ತವಾಗಿದೆ.

ಪುಟ್ಟೇನಹಳ್ಳಿ-ಸಹಕಾರನಗರ 220 ಕ್ವಿ ಲೈನ್ ಅನ್ನು ಪ್ರಾಯೋಗಿಕವಾಗಿ ಆಯ್ಕೆ ಮಾಡಲಾಗಿದ್ದು, ಇಲ್ಲಿನ ಫಲಿತಾಂಶಗಳ ಆಧಾರದ ಮೇಲೆ ಕೆಪಿಟಿಸಿಎಲ್ ರಾಜ್ಯದ ಇತರ ಹೆಚ್ಚಿನ ಬೇಡಿಕೆ ಮತ್ತು ನವೀಕರಿಸಬಹುದಾದ ಇಂಧನ ಮಾರ್ಗಗಳಿಗೆ ಈ ತಂತ್ರಜ್ಞಾನವನ್ನು ವಿಸ್ತರಿಸಲು ಯೋಜನೆ ರೂಪಿಸಿದೆ. ಈ ಯೋಜನೆಯು ಕೆಪಿಟಿಸಿಎಲ್‌ನ ದೀರ್ಘಕಾಲೀನ ಗ್ರಿಡ್ ಆಧುನೀಕರಣದ ಕಾರ್ಯತಂತ್ರದ ಭಾಗವಾಗಿದ್ದು, ಕರ್ನಾಟಕವನ್ನು ಸದೃಢ, ಡಿಜಿಟಲ್ ಸಿದ್ಧ ಮತ್ತು ಸುಸ್ಥಿರ ವಿದ್ಯುತ್ ಜಾಲವನ್ನು ಹೊಂದಿರುವ ರಾಜ್ಯವನ್ನಾಗಿ ಮಾಡುವ ದೃಷ್ಟಿಯೊಂದಿಗೆ ರೂಪಿಸಲಾಗಿದೆ.

ಕರ್ನಾಟಕವು ವಿದ್ಯುತ್ ವಲಯದಲ್ಲಿ ನವೀನ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವಲ್ಲಿ ದೇಶದಲ್ಲಿಯೇ ಮುಂಚೂಣಿಯಲ್ಲಿದೆ. ಪುಟ್ಟೇನಹಳ್ಳಿ – ಸಹಕಾರನಗರ ಕಾರಿಡಾರ್‌ನಲ್ಲಿ ಅಳವಡಿಸಲಾಗುತ್ತಿರುವ ಈ ಡೈನಾಮಿಕ್ ಲೈನ್ ರೇಟಿಂಗ್ ಯೋಜನೆಯು, ಲಭ್ಯವಿರುವ ಮೂಲ ಸೌಕರ್ಯಗಳನ್ನು ಸಮರ್ಥವಾಗಿ ಬಳಸಿಕೊಂಡು ವಿದ್ಯುತ್ ಜಾಲದ ಸಾಮರ್ಥ್ಯವನ್ನು ಇನ್ನಷ್ಟು ಹೆಚ್ಚಿಸಲಿದೆ. ಹೆಚ್ಚಿನ ಬಂಡವಾಳ ಹೂಡಿಕೆಯಿಲ್ಲದೇ ರಾಜ್ಯದಲ್ಲಿ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ಪೂರೈಸಲು ಇದು ಸಹಕಾರಿಯಾಗಲಿದೆ. ಈ ತಂತ್ರಜ್ಞಾನ ಅಳವಡಿಕೆ, ರಾಜ್ಯದಲ್ಲಿ ಭವಿಷ್ಯಕ್ಕೆ ಸಜ್ಜಾದ ವಿದ್ಯುತ್ ವ್ಯವಸ್ಥೆಯನ್ನು ನಿರ್ಮಿಸಲು ನಮಗೆ ಅನುವು ಮಾಡಿಕೊಡಲಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಡೈನಾಮಿಕ್ ಲೈನ್ ರೇಟಿಂಗ್ ವ್ಯವಸ್ಥೆಯಿಂದಾಗಿ, ದತ್ತಾಂಶ ಆಧಾರಿತ ನಿರ್ಧಾರಗಳನ್ನು ತೆಗೆದುಕೊಳ್ಳುವ ಮೂಲಕ ಪ್ರಸರಣ ಜಾಲದ ಕಾರ್ಯಾಚರಣೆಯ ದಕ್ಷತೆಯನ್ನು ಹೆಚ್ಚಿಸಲು ಮತ್ತು ರಾಜ್ಯದ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ಪೂರೈಸಲು ನಮಗೆ ನೆರವಾಗಲಿದೆ ಎಂದು ಕೆಪಿಟಿಸಿಎಲ್ ಎಂಡಿ ಡಾ. ವಿ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಸ್ಟಾಟಿಕ್ ಲೈನ್ ರೇಟಿಂಗ್: ಈ ವಿಧಾನದಲ್ಲಿ ವಿದ್ಯುತ್ ತಂತಿಗಳು ಎಷ್ಟು ವಿದ್ಯುತ್ ಸಾಗಿಸಬಲ್ಲವು ಎಂದು ಲೆಕ್ಕ ಹಾಕುವಾಗ, ಇಂಜಿನಿಯರ್‌ಗಳು ಭೀಕರ ಹೆಚ್ಚು ಬಿಸಿಲು ಅಥವಾ ಗಾಳಿಯೇ ಇಲ್ಲದ ಪರಿಸ್ಥಿತಿಯನ್ನು ಮಾನದಂಡವಾಗಿಟ್ಟುಕೊಂಡಿರುತ್ತಾರೆ. ಇದು ಸುರಕ್ಷಿತ ವಿಧಾನ. ಆದರೆ, ಪರಿಸ್ಥಿತಿ ಮತ್ತು ಹವಾಮಾನ ಉತ್ತಮವಾಗಿದ್ದೂ, ವಿದ್ಯುತ್ ತಂತಿಗಳು ಹೆಚ್ಚಿನ ವಿದ್ಯುತ್ ಸಾಗಿಸುವ ಸಾಮರ್ಥ್ಯ ಹೊಂದಿದ್ದರೂ ನಾವು ಹಾಕಿಕೊಂಡಿರುವ ಮಿತಿಗಳಿಂದ ಹೆಚ್ಚಿನ ವಿದ್ಯುತ್ ಸಾಗಿಸಲು ಸಾಧ್ಯವಾಗುವುದಿಲ್ಲ. ರಸ್ತೆ ಉತ್ತಮವಾಗಿದ್ದರೂ ವೇಗದ ಮಿತಿ ಹೇರಿಕೆಯಿಂದ ವಾಹನ ಸಂಚಾರ ನಿಯಂತ್ರಣದಂತೆ ಇದಾಗಿದೆ. ಇದರಿಂದ ಗ್ರಿಡ್‌ನ ದೊಡ್ಡ ಪ್ರಮಾಣದ ಸಾಮರ್ಥ್ಯ ಸುಮ್ಮನೆ ವ್ಯರ್ಥವಾಗುತ್ತದೆ.

'ಡೈನಾಮಿಕ್ ಲೈನ್ ರೇಟಿಂಗ್' (ಈಔ) ತಂತ್ರಜ್ಞಾನ ಇದಕ್ಕೆ ತದ್ವಿರುದ್ಧ.

ಇದು ವಾಸ್ತವಿಕ ಪರಿಸ್ಥಿತಿಗೆ ತಕ್ಕಂತೆ ಬದಲಾಗುವ ಜಾಣ ತಂತ್ರಜ್ಞಾನ. ತಂತಿಗಳ ಮೇಲೆ ಅಳವಡಿಸುವ ಸ್ಮಾರ್ಟ್ ಸೆನ್ಸಾರ್‌ಗಳು ಗಾಳಿಯ ವೇಗ, ತಾಪಮಾನ ಮುಂತಾದವನ್ನು ಕ್ಷಣಕ್ಷಣಕ್ಕೂ ಗಮನಿಸುತ್ತವೆ. ಗಾಳಿ ಬೀಸುತ್ತಿದ್ದರೆ ತಂತಿಗಳು ತಂಪಾಗಿರುತ್ತವೆ, ಅಂತಹ ಸಮಯದಲ್ಲಿ ಆ ತಂತಿಗಳು ಹೆಚ್ಚು ವಿದ್ಯುತ್ ಸಾಗಿಸಲು ಸಿದ್ಧವಿರುತ್ತವೆ.

ಈ ತಂತ್ರಜ್ಞಾನ ಆ ಪರಿಸ್ಥಿತಿಯನ್ನು ಗ್ರಹಿಸಿ, ವ್ಯರ್ಥವಾಗುತ್ತಿದ್ದ ಶೇ. 25ರಷ್ಟು ಹೆಚ್ಚುವರಿ ಸಾಮರ್ಥ್ಯವನ್ನು ಸುರಕ್ಷಿತವಾಗಿ ಬಳಸಿಕೊಳ್ಳಲು ನಮಗೆ ದಾರಿ ಮಾಡಿಕೊಡುತ್ತದೆ. ಹೊಸ ಟವರ್‌ಗಳನ್ನು ಕಟ್ಟುವ ಭಾರಿ ಖರ್ಚಿಲ್ಲದೆ, ಇದ್ದಿದ್ದರಲ್ಲೇ ಹೆಚ್ಚು ವಿದ್ಯುತ್ ಪಡೆಯುವ ಜಾಣ್ಮೆ ಇದಾಗಿದೆ.

# ಜೋಳ ಹಣಪಾವತಿಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜೂ.22ರಂದು ಶಕ್ತಿನಗರದ ಬಳಿ ಹೆದ್ದಾರಿ ತಡೆ-ಶರಣಪ್ಪ ಮರಳಿ

ವಯೋವೃದ್ದ ರೈತರು ರಸಗೊಬ್ಬರ ಖರೀಧಿ ಮಾಡಲು ಸಾಧ್ಯವಾಗದೇ ಹೋಗಿದೆ. ಯೂರಿಯಾ, ಡಿಎಪಿ ಗೊಬ್ಬರ ಬೆಲೆ ಹೆಚ್ಚಿಸಿರುವ ಜೊತೆಗೆ ನಿಗಧಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗುತ್ತಿದೆ. ತಡೆಯಲು ಸರ್ಕಾರಗಳಿಂದ ಸಾಧ್ಯವಾಗಿಲ್ಲ. ಒಂದು ಎಕರೆ ಭೂಮಿಗೆ ಮೂರು ಕ್ವಿಂಟಾಲ್‌ಯೂರಿಯಾಗೊಬ್ಬರ ಬೇಕು. ಒಂದು ಎಕರೆ ಒಂದು ಚೀಲ ಕೊಡುವದಾಗಿ ಹೇಳುದವು ಎಷ್ಟು ಸರಿ ಎಂದುಪ್ರಶ್ನಿಸಿದರು. ರೈತರು ಕೃಷಿಯನ್ನು ಬಿಟ್ಟು ಹೋಗುವ ನೀತಿಗಳು ಸರ್ಕಾರ ರೂಪಿಸುತ್ತಿವೆ. ರೈತರ ಕೃಷಿ ಪಂಪಸೆಟ್,ಭಾಗ್ಯಜ್ಯೋತಿ, ಕುಟೀರ ಜ್ಯೋತಿಗಳಿಗೆ ಉಚಿತವಾಗಿ ವಿದ್ಯುತ್ ನೀಡುವ ಸರ್ಕಾರ ವಿದ್ಯುತ್ ವಿತರಣಾ ಕೇಂದ್ರಗಳನ್ನು ಟಾಟಾ ಪವರ್ ಇವರಿಗೆ ವಹಿಸುವಮೂಲಕ ಉಚಿತ ವಿದ್ಯುತ್ ಕಡಿತಗೊಳಿಸಲು ಹುನ್ನಾರ ನಡೆಸಿದೆ. 2006 ರಲ್ಲಿ ಡಾ.ಸ್ವಾಮಿನಾಥನ್ ಆಯೋಗ ಹಿಂದಿನ ಕಾಂಗ್ರೆಸ್ ಸರ್ಕಾರ ಅವಧಿಯಲ್ಲಿ ವರದಿ ನೀಡಿದೆ. ಈಗ ಪ್ರಧಾನಿ ನರೇಂದ್ರ, ಮೋದಿ ಸೇರಿ ಕಾಂಗ್ರೆಸ್ ಸಹ ಜಾರಿಗೆ ಮುಂದಾಗಿಲ್ಲ. ಕೇಂದ್ರ ಮತ್ತು ರಾಜ್ಯದಲ್ಲಿರುವ ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷಗಳು ರೈತ ವಿರೋಧಿಯಾಗಿವೆ. ರೈತರಿಂದ ಮೂರು ತಿಂಗಳ ಹಿಂದೆ ಖರೀದಿಸಿರುವ ಜೋಳದ ಹಣ ಇಂದಿಗೂ ಪಾವತಿಸುತ್ತಿಲ್ಲ. ಕೂಡಲೇ ಹಣ ಪಾವತಿಗೆ ಆಗ್ರಹಿಸಿ ಶಕ್ತಿನಗರದಲ್ಲಿ ರಸ್ತೆ ತಡೆ ನಡೆಸುವದಾಗಿ ಹೇಳಿದರು. ಈ ಸಂದರ್ಬದಲಿ ಜಿಲ್ಲಾಧ್ಯಕ್ಷ ರಾಮಯ್ಯ ಜವಳಗೇರಾ, ಚನ್ನಪ್ಪ ಹುಣಸಿಹಾಳ ಹುಡಾ, ರಾಮಬಾಬು , ಗಂಗಪ್ಪ ಏಗನೂರು, ಜಿಷ್ಮೀರ ಅಲಿ, ಶ್ರೀನಿವಾಸ, ನಿಂಗಪ್ಪ ವಡ್ಲೂರು, ಹನುಮಂತ್ರಾಯ ಸೇರಿ ಅನೇಕರಿದ್ದರು.

## ಹಿರಿಯ ನಾಗರೀಕರ ರಕ್ಷಣೆಗೆ ಇರುವ ಕಾಯ್ದೆ ಸದುಪಯೋಗವಾಗಲಿ-ನ್ಯಾ.ಸಿದ್ದರಾಮಪ್ಪ

ಅವರಿಂದು ನಗರದ ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸುರಕ್ಷಾ ಸಂಸ್ಥೆ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಹಾಗೂ ರೋಟರಿ ಕ್ಲಬ್ ಕೃಷ್ಣ ತುಂಗೆ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಹಿರಿಯ ನಾಗರಿಕರ ಶೋಷಣೆಯ ಜಾಗೃತಿ ದಿನಾಚರಣೆಯನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಹಿರಿಯ ನಾಗರಿಕರು ತಮ್ಮ ಶಕ್ತಿಯಿದ್ದಾಗ ಮಕ್ಕಳನ್ನು ಉತ್ತಮವಾಗಿ ಪಾಲನೆ, ಪೋಷಣೆ ಮಾಡಲು ಶ್ರಮಿಸಿರುತ್ತೀರಿ, ನಂತರ ವಯಸ್ಸಾದ ಮೇಲೆ ಮಕ್ಕಳು ವಿವಿಧ ಕಾರಣಗಳಿಂದ ತಂದೆ ತಾಯಿರನ್ನು ದೂರ ಮಾಡುತ್ತಾರೆ. ಮಕ್ಕಳಿಂದ ದೂರ ಆದ ನಂತರ ಅವರಿಗೆ ದುಡಿಯುವ ಶಕ್ತಿಯೂ ಇರುವುದಿಲ್ಲ ಅಂತಹ ಸಂದರ್ಭದಲ್ಲಿ ಆಯಾ ಉಪವಿಭಾಗದ ಸಹಾಯಕ ಆಯುಕ್ತರ ಬಳಿ ಪಾಲಕರ ಹಾಗೂ ಹಿರಿಯ ನಾಗರಿಕರ ಪಾಲನೆ ಪೋಷಣೆಯ ಕಾಯ್ದೆಯಡಿ ಅರ್ಜಿ ಸಲ್ಲಿಸಿದಾಗ ಅವರಿಗೆ ನ್ಯಾಯ ಒದಗಿಸಲಾಗುತ್ತದೆ ಆದ್ದರಿಂದ ಹಿರಿಯ ನಾಗರಿಕರು ಕಾಯ್ದೆಯ ಸದುಪಯೋಗ ಪಡೆದುಕೊಂಡು ಜೀವನ ಭತ್ಯೆಯನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.ಅರ್ಜಿ ಸಲ್ಲಿಸಿದ 60 ದಿನದಲ್ಲಿ ಸಹಾಯಕ ಆಯುಕ್ತರು ಪ್ರಕರಣಗಳನ್ನು ಇತ್ಯರ್ಥ ಪಡಿಸಬೇಕು ಅಥವಾ ವಿಲೇವಾರಿಗೊಳಿಸಬೇಕು. ಒಂದು ವೇಳೆ ವಿಳಂಬವಾದರೆ ಹೆಚ್ಚುವರಿಯಾಗಿ 30 ದಿನಗಳ ಕಾಲಾವಕಾಶ ನೀಡಲಾಗುತ್ತಿದೆ. ಒಟ್ಟು 90 ದಿನದಲ್ಲಿ ಅರ್ಜಿಗಳನ್ನು ವಿಲೇವಾರಿಗೊಳಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.ನಂತರ ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್ ಮಾತನಾಡಿ, ಜಾಗತಿಕ ಮಟ್ಟದಲ್ಲಿ ಹಿರಿಯ ನಾಗರಿಕರಿಗಾಗುವ ಶೋಷಣೆಗಳನ್ನು ತಡೆಯಲು ಮತ್ತು ಇದರ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಜೂ.15ರಂದು ಹಿರಿಯ ನಾಗರಿಕರ ಶೋಷಣೆಯ ಜಾಗೃತಿ ದಿನಾಚರಣೆಯನ್ನು ವಿಶ್ವದಾದ್ಯಂತ ಆಚರಣೆ ಮಾಡಲಾಗುತ್ತದೆ. ಹಿರಿಯ ನಾಗರಿಕರನ್ನು ನೋಡಿಕೊಳ್ಳುವ ಜವಾಬ್ದಾರಿ ಅವರವರ ಮಕ್ಕಳದ್ದಾಗಿರುತ್ತದೆ ಆದ್ದರಿಂದ ಕಾನೂನು ವ್ಯವಸ್ಥೆಯೂ ಕೂಡ ಹಿರಿಯ ನಾಗರಿಕರ ಜವಾಬ್ದಾರಿಯನ್ನು ಅವರವರ ಕಾನೂನು ಬದ್ಧ ವಾರಸುದಾರರಿಗೆ ನೀಡುತ್ತದೆ. ಹಿರಿಯ ನಾಗರಿಕರು ತಮಗೆ ತೊಂದರೆ ಉಂಟಾದಲ್ಲಿ ಹಿರಿಯ ನಾಗರಿಕರ ಸಹಾಯವಾಣಿ 1090 ಕ್ಕೆ ಕರೆ ಮಾಡಬಹುದಾಗಿದೆ ಎಂದರು.

ಸುರಕ್ಷಾ ಹಿರಿಯ ನಾಗರಿಕ ಸಹಾಯವಾಣಿ ಕೇಂದ್ರದ ಮುಖ್ಯಸ್ಥ ಪವನ್ ಕಿಶೋರ ಪಾಟೀಲ್ ಮಾತನಾಡಿ, ಸಮಾಜದಲ್ಲಿ ಪ್ರಸ್ತುತ ಮಹಿಳೆಯರು ಮತ್ತು ಮಕ್ಕಳಿಗಿರುವ ಆದ್ಯತೆ ಹಿರಿಯ ನಾಗರಿಕರಿಗೆ ಸಿಗದಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಹಿರಿಯ ನಾಗರಿಕರ ರಕ್ಷಣೆ, ಸುರಕ್ಷತೆ ಮತ್ತು ಅವರ ಅನುಕೂಲಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರವಿದ್ದು, ಕೇಂದ್ರದಲ್ಲಿ ಶೇ.80 ರಷ್ಟು ಪ್ರಕರಣಗಳನ್ನು ಕೌನ್ಸಲಿಂಗ್ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶರಣಮ್ಮ, ವಕೀಲರಾದ ಗಣೇಶ, ಬಾಸ್ಕರ ಬಾಬು ಸೇರಿದಂತೆ ಅನೇಕರಿದ್ದರು.

## ಪಿ.ಲಂಕೇಶ್ ಪತ್ನಿ, ಲೇಖಕಿ ಇಂದಿರಾ ಲಂಕೇಶ್ ನಿಧನ; ಸಿಎಂ ಡಿಕೆಶಿ, ಮಾಜಿ ಸಿಎಂ ಸಿದ್ದರಾಮಯ ಸಂತಾಪ

ಇಂದಿರಾ ಅವರು ಪುತ್ರಿ ಕವಿತಾ ಲಂಕೇಶ್(ಚಿತ್ರನಿರ್ದೇಶಕಿ) ಹಾಗೂ ಪುತ್ರ ಇಂದ್ರಜಿತ್ ಲಂಕೇಶ್(ನಿರ್ದೇಶಕ ಹಾಗೂ ಪತ್ರಕರ್ತ) ಸೇರಿದಂತೆ ಅಪಾರ ಬಂಧು-ಮಿತ್ರರು ಮತ್ತು ಅಭಿಮಾನಿ ಬಳಗವನ್ನು ಅಗಲಿದ್ದಾರೆ. ಇನ್ನು ಇಂದಿರಾ ಲಂಕೇಶ್ ಅವರ ನಿಧನಕ್ಕೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ರಾಜಕೀಯ, ಸಾಹಿತ್ಯ ಹಾಗೂ ಚಲನಚಿತ್ರ ರಂಗದ ಗಣ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ. ಕನ್ನಡ ಪತ್ರಿಕೋದ್ಯಮದಲ್ಲಿ ಹೊಸ ಇತಿಹಾಸ ಸೃಷ್ಟಿಸಿದ 'ಲಂಕೇಶ್ ಪತ್ರಿಕೆ'ಯ ಆರಂಭದ ದಿನಗಳಿಂದಲೂ ಇಂದಿರಾ ಲಂಕೇಶ್ ಅವರು ಪತಿ ಪಿ. ಲಂಕೇಶ್ ಅವರಿಗೆ ಬೆನ್ನೆಲುಬಾಗಿ ನಿಂತಿದ್ದರು. ಕೇವಲ ವೈವಾಹಿಕ ಜೀವನದಲ್ಲಷ್ಟೇ ಅಲ್ಲದೆ, ಪತ್ರಿಕೆಯ ಆಡಳಿತ, ಮುನ್ನಡೆ ಹಾಗೂ ಪ್ರಕಾಶನದ ಜವಾಬ್ದಾರಿಯನ್ನು ತೆರೆಮರೆಯಲ್ಲಿ ಯಶಸ್ವಿಯಾಗಿ ನಿರ್ವಹಿಸಿದ ಹೆಗ್ಗಳಿಕೆ ಇವರದ್ದಾಗಿದೆ. 2000 ಇಸವಿಯಲ್ಲಿ ಪಿ. ಲಂಕೇಶ್ ಅವರ ನಿಧನದ ನಂತರ ಮತ್ತು ತದನಂತರದ ದಿನಗಳಲ್ಲಿ ಹಿರಿಯ ಪುತ್ರಿ, ದಿ. ಗೌರಿ ಲಂಕೇಶ್ ಅವರ ಅಗಲಿಕೆಯ ನಂತರವೂ ಧೃತಿಗೆಡದ ಇಂದಿರಾ ಅವರು, ಕುಟುಂಬದ ಸಾಹಿತ್ಯಿಕ ಮತ್ತು ಪತ್ರಿಕೋದ್ಯಮದ ಪರಂಪರೆಯನ್ನು ಮುನ್ನಡೆಸಿಕೊಂಡು ಬಂದಿದ್ದರು.

# ಎನ್ ಎಸ್ ಭೋಸರಾಜು ಫೌಂಡೇಶನ್ ನಿಂದ ಲೇಬರ್ ಕಾರ್ಡ್ ವಿತರಣೆ

**ರಾಯಚೂರು,ಜೂ.15-**ಎನ್.ಎಸ್. ಭೋಸರಾಜು ಫೌಂಡೇಶನ್ ವತಿಯಿಂದ ನಗರದ ಗೋಶಾಲೆ ರಸ್ತೆಯ ಆಟೋನಗರದಲ್ಲಿ ಅಸಂಘಟಿತ ಕಾರ್ಮಿಕರು, ಕ್ಲೀನರ್‌ಗಳು ಹಾಗೂ ಕಟ್ಟಡ ಕಾರ್ಮಿಕರಿಗಾಗಿ ಉಚಿತ ಕಾರ್ಮಿಕ ನೋಂದಣಿ ಮತ್ತು 300ಕ್ಕೂ ಹೆಚ್ಚು ಲೇಬರ್ ಕಾರ್ಡ್ ವಿತರಣಾ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ನೋಂದಾಯಿತ ಫಲಾನುಭವಿಗಳಿಗೆ ಲೇಬರ್ ಕಾರ್ಡ್‌ನಿಂದ ದೊರೆಯುವ ವಿವಿಧ ಸರ್ಕಾರಿ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಯಿತು. 60 ವರ್ಷ ವಯಸ್ಸಿನ ನಂತರ ಮಾಸಿಕ ಪಿಂಚಣಿ, ಗೃಹ ನಿರ್ಮಾಣ ಯೋಜನೆಯಡಿ ಆರ್ಥಿಕ ನೆರವು, ಹೆರಿಗೆ ಸಂದರ್ಭದಲ್ಲಿ ಸಹಾಯಧನ, ಕೆಲಸದ ವೇಳೆ ಅಕಾಲಿಕ ಮರಣ ಹೊಂದಿದರೆ ಕುಟುಂಬಕ್ಕೆ ಪರಿಹಾರ ಧನ, ಶಾಶ್ವತ ಅಂಗವೈಕಲ್ಯ ಉಂಟಾದರೆ ಆರ್ಥಿಕ ನೆರವು ಸೇರಿದಂತೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕಾರ್ಮಿಕ ಇಲಾಖೆಯ ವಿವಿಧ ಯೋಜನೆಗಳ ಪ್ರಯೋಜನಗಳನ್ನು ಪಡೆಯಬಹುದು ಎಂದು ತಿಳಿಸಲಾಯಿತು. ಮಹ್ಮದ್ ನೂರ್ ಮಾತನಾಡಿ, ಅಸಂಘಟಿತ ವಲಯದ ಕಾರ್ಮಿಕರು ಸರ್ಕಾರದ ಕಲ್ಯಾಣ ಯೋಜನೆಗಳಿಂದ ವಂಚಿತರಾಗದಂತೆ ಉಚಿತ ನೋಂದಣಿ ಮತ್ತು ಲೇಬರ್ ಕಾರ್ಡ್ ವಿತರಣೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಅರ್ಹ ಕಾರ್ಮಿಕರು ನೋಂದಾಯಿಸಿಕೊಂಡು ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

## ಜೂ.16ರಂದು ರಾಗ ರಂಗ ಸಾಂಸ್ಕೃತಿಕ ಕಲಾವೇದಿಕೆಯಿಂದ ಸಾಂಸ್ಕೃತಿಕ ಕಲಾಸಂಗಮ: ಪಂಪಾಪತಿ ಹೂಗಾರ

ಮಜರ್ ಪಾಷಾ ವಕೀಲ, ಬಿ.ಎಚ್.ಗುಂಡಳ್ಳಿ, ಡಾ.ಮಂಜುನಾಥ ವಟಗಲ್, ವಿಶ್ವನಾಥ ಹೂಗಾರ ಜೆಸ್ಕಾಂ, ರಮಾದೇವಿ, ಮಲ್ಲಿಕಾರ್ಜುನ ಹೂಗಾರ, ಕೃಷ್ಣಪ್ಪ, ನಾಗರಾಜ ಜಗತಾಪ್, ಶರಣಪ್ಪ ಹೂಗಾರ ಗಾಣಧಾಳ ಭಾಗವಹಿಸಲಿದ್ದಾರೆ. ಪ್ರತಿಭಾ ಗೋನಾಳದಿಂದ ಸುಗಮ ಸಂಗೀತ, ದೀಪಾ ರಾಯಚೂರು ಇವರಿಂದ ವಚನ ಗಾಯನ, ಶಾಂತಾಕುಲ್ಕರ್ಣಿಯವರಿಂದ ಭಕ್ತಿ, ಸಂಗೀತ, ವೆಂಕಟನರಸಿಂಹಲು ಇವರಿಂದ ತತ್ವಪದ ಗಾಯನ, ಎಂ.ನರೇಂದ್ರಕುಮಾರ ಇವರಿಂದ ಭಾವಗೀತೆ, ಕೃಷ್ಣಪ್ಪ ತಂಡದಿಂದ ನೃತ್ತ, ವರ್ಷಾ ಮಡ್ಡಿ ಶಕ್ತಿನಗರ ಇವರಿಂದ ಭರತ ನಾಟ್ಯ ಪ್ರದರ್ಶನವಾಗಲಿದೆ ಎಂದರು.ಈ ಸಂದರ್ಬದಲ್ಲಿ ರವಿಕುಮಾರ, ಚಂದ್ರಶೇಖರ, ಪವನಕುಮಾರ ಹೂಗಾರ ಇದ್ದರು.

## 12 ದಿನಗಳಿಂದ ಶಾಲೆಗೆ ಮಕ್ಕಳಿಲ್ಲ, ಬಿಕೋ ಎನ್ನುತ್ತಿರುವ ಸರ್ಕಾರಿ ಶಾಲೆ

ಪಾಲಕರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸುವುದನ್ನು ಸ್ಥಗಿತಗೊಳಿಸಿದ್ದಾರೆ. ನಮ್ಮ ಮಕ್ಕಳ ಸುರಕ್ಷತೆ ಮುಖ್ಯ. ವೈಯಕ್ತಿಕ ದ್ವೇಷದ ವಾತಾವರಣದಲ್ಲಿ ಮಕ್ಕಳಿಗೆ ಏನಾದರೂ ಅನಾಹುತ ಸಂಭವಿಸಿದರೆ ಅದಕ್ಕೆ ಯಾರು ಹೊಣೆ? ಎಂದು ಪಾಲಕರು ಪ್ರಶ್ನಿಸುತ್ತಿದ್ದು, ಸಮಸ್ಯೆ ಸಂಪೂರ್ಣವಾಗಿ ಬಗೆಹರಿಯುವವರೆಗೆ ಮಕ್ಕಳನ್ನು ಶಾಲೆಗೆ ಕಳುಹಿಸುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ.

ಶಾಲೆಯಲ್ಲಿ ವಿದ್ಯಾರ್ಥಿಗಳಿಲ್ಲದ ಕಾರಣ ಬೋಧನಾ ಚಟುವಟಿಕೆಗಳು ಸಂಪೂರ್ಣ ಸ್ಥಗಿತಗೊಂಡಿವೆ. ಶಿಕ್ಷಕರು ಪ್ರತಿದಿನ ಶಾಲೆಗೆ ಹಾಜರಾಗುತ್ತಿದ್ದರೂ ವಿದ್ಯಾರ್ಥಿಗಳಿಲ್ಲದೆ ತರಗತಿ ಕೊಠಡಿಗಳು ಖಾಲಿಯಾಗಿವೆ. ಸರ್ಕಾರದ ಮಹತ್ವಾಕಾಂಕ್ಷೆಯ ಬಿಸಿಯೂಟ ಯೋಜನೆಯೂ ಸ್ಥಗಿತಗೊಂಡಿದ್ದು, ಶಾಲೆಯ ಶೈಕ್ಷಣಿಕ ವಾತಾವರಣ ಸಂಪೂರ್ಣ ಹದಗೆಟ್ಟಿದೆ. ಪ್ರಕರಣದ ಗಂಭೀರತೆಯನ್ನು ಅರಿತ ಕ್ಷೇತ್ರ ಶಿಕ್ಷಣಾಧಿಕಾರಿ ನೇತೃತ್ವದಲ್ಲಿ ಗ್ರಾಮದಲ್ಲಿ ಸಭೆ ನಡೆಸಿ ಗ್ರಾಮಸ್ಥರು, ಪಾಲಕರು ಹಾಗೂ ಸಂಬಂಧಪಟ್ಟವರೊಂದಿಗೆ ಮಾತುಕತೆ ನಡೆಸಲಾಯಿತು. ಸಮಸ್ಯೆ ಬಗೆಹರಿಸಲು ಅಧಿಕಾರಿಗಳು ಮನವೊಲಿಸುವ ಪ್ರಯತ್ನ ಮಾಡಿದರೂ ಸಭೆ ಯಾವುದೇ ಫಲ ನೀಡಿಲ್ಲ. ಪಾಲಕರೂ ಮಕ್ಕಳನ್ನು ಶಾಲೆಗೆ ಕಳುಹಿಸಲು ನಿರಾಕರಿಸಿದ್ದಾರೆ.

ಒಂದು ಕುಟುಂಬದೊಂದಿಗಿನ ವೈಯಕ್ತಿಕ ದ್ವೇಷದಿಂದ ಇಡೀ ಗ್ರಾಮದ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಿರುವುದು ಶಿಕ್ಷಣ ವಲಯದಲ್ಲಿ ಆತಂಕಕ್ಕೆ ಕಾರಣವಾಗಿದೆ. ಸಮಸ್ಯೆ ಶೀಘ್ರ ಬಗೆಹರಿಸಿ ಶಾಲೆಯಲ್ಲಿ ಸಹಜ ಶೈಕ್ಷಣಿಕ ಚಟುವಟಿಕೆ ಪುನರಾರಂಭಿಸಲು ಶಿಕ್ಷಣ ಇಲಾಖೆ ಹಾಗೂ ಜಿಲ್ಲಾಡಳಿತ ಮಧ್ಯಪ್ರವೇಶಿಸಬೇಕೆಂದು ಗ್ರಾಮಸ್ಥರು ಹಾಗೂ ಸಾರ್ವಜನಿಕರು ಒತ್ತಾಯಿಸಿದ್ದಾರೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L